ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 158 ಸಂಚಿಕೆ- 158 | PAGE-8 ಪುಟ-8 | ಶನಿವಾರ 02.08.2025 | RS.2/- ಬೆಲೆ 2/-




## ಜುಲೈ ತಿಂಗಳ ಜಿಎಸ್ ಟಿ ಸಂಗ್ರಹ ಬೆಳವಣಿಗೆ ಕುಸಿತ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.1:ಜೂನ್‌ನಲ್ಲಿ ಮಧ್ಯಮ ಸಾಧನೆಯ ನಂತರ, ಭಾರತದ ಸರಕು ಮತ್ತು ಸೇವಾ ತೆರಿಗೆ (GST) ಆದಾಯದ ಬೆಳವಣಿಗೆ ಜುಲೈ ತಿಂಗಳಲ್ಲಿ ನಿಧಾನಗತಿಯನ್ನು ದಾಖಲಿಸಿದೆ.

ನಿವ್ವಳ ಸಂಗ್ರಹಣೆಗಳು ವರ್ಷದಿಂದ ವರ್ಷಕ್ಕೆ ಕೇವಲ 1.7%ರಷ್ಟು ಹೆಚ್ಚಾಗಿ 1.69 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ. ಆಮದುಗಳಿಂದ ಬರುವ ಆದಾಯವು ಎರಡು ಅಂಕಿಯ ಬೆಳವಣಿಗೆಯನ್ನು ತೋರಿಸಿದರೂ ಸಹ, ದೇಶೀಯ ವಹಿವಾಟುಗಳಿಂದ ಬರುವ ಆದಾಯವು ಕುಂಠಿತಗೊಂಡಿದ್ದರಿಂದಾಗಿ ಈ ನಿಧಾನಗತಿಯ ಕಾರ್ಯಕ್ಷಮತೆ ಏರುಗತಿಯಲ್ಲಿದೆ.

ಜುಲೈನಲ್ಲಿ ಒಟ್ಟು ಉಖಖಿ ಆದಾಯ 1.96 ಲಕ್ಷ ಕೋಟಿ ರೂ.ಗಳಾಗಿದ್ದು, ಕಳೆದ ವರ್ಷ ಇದೇ ತಿಂಗಳಲ್ಲಿ ಸಂಗ್ರಹಿಸಲಾದ 1.82 ಲಕ್ಷ ಕೋಟಿ

(2ನೇ ಪುಟ ನೋಡಿ)

# ರಾಜ್ಯದಲ್ಲಿ ಸಿಎಂ ಹುದ್ದೆ ಖಾಲಿ ಇಲ್ಲ ವದಂತಿಗಳಿಗೆ ಬಿಜೆಪಿ ಕಾರಣ: ಪ್ರಿಯಾಂಕ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಆ.1: ಕರ್ನಾಟಕದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ ಎಂದು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಶುಕ್ರವಾರ ಹೇಳಿದ್ದಾರೆ. ಬಿಕ್ಕಟ್ಟಿಗೆ ಸಿಲುಕಿರುವ ರಾಜ್ಯ ಬಿಜೆಪಿ ತನ್ನ ನ್ಯೂನತೆಗಳಿಂದ ಗಮನವನ್ನು ಬೇರೆಡೆಗೆ

ಸೆಳೆಯಲು ಇಂತಹ ವದಂತಿಗಳನ್ನು ಹಬ್ಬಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಕೇಂದ್ರ ಮಟ್ಟದಲ್ಲಾಗಲಿ

ಅಥವಾ ರಾಜ್ಯ ಮಟ್ಟದಲ್ಲಾಗಲಿ ಕಾಂಗ್ರೆಸ್ ಪಕ್ಷ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಾಯಿಸುವ ಯಾವುದೇ ಪ್ರಸ್ತಾಪವಿಲ್ಲ ಎಂದು ಅವರು ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ ಎಂದು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಕರ್ಗೆ, ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್,

ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲಾ, ಸಿಎಂ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರೇ ಹೇಳುತ್ತಿರುವಾಗ, ಇಂತಹ ವಿಚಾರಗಳು ಎಲ್ಲಿಂದ ಬರುತ್ತೋ ಗೊತ್ತಿಲ್ಲ ಎಂದು ಹೇಳಿದರು. ಕಾಂಗ್ರೆಸ್ ವರಿಷ್ಠರು ಈ ವಿಷಯದ ಬಗ್ಗೆ

ಬಹಳ ಸ್ಪಷ್ಟವಾಗಿದ್ದಾರೆ. ಹಾಗಾಗಿ ಬಿಜೆಪಿ ಮಾತನಾಡಬೇಕಾದ ಈ ಪ್ರಶ್ನೆಗಳಿಗೆ ನಾವು ಉತ್ತರಿಸುವ ಅಗತ್ಯವಿಲ್ಲ ಎಂದು ಭಾವಿಸುತ್ತೇನೆ ಎಂದರು. ನಾಯಕತ್ವಬದಲಾವಣೆಯ ಊಹಾಪೋಹಗಳ ಮೂಲದ ಬಗ್ಗೆ ಪ್ರತಿಕ್ರಿಯಿಸಿದ ಖರ್ಗೆ, ಪ್ರತಿಪಕ್ಷ ಬಿಜೆಪಿ ತಮ್ಮ

ದೌರ್ಬಲ್ಯವನ್ನು ಮರೆಮಾಡಲು ಪ್ರಯತ್ನಿಸುತ್ತಿದೆ. ಸದ್ಯ ರಾಜ್ಯದಲ್ಲಿ ಬಿಜೆಪಿ ಸಂಪೂರ್ಣ ಛಿದ್ರ ಛಿದ್ರವಾಗಿರುವ ಪಕ್ಷವಾಗಿದೆ. ಅವರಲ್ಲಿ ನಾಯಕ-ರೇ ಇಲ್ಲ. ಬಿಜೆಪಿಯಲ್ಲಿ ಸಾಕಷ್ಟು ಅವ್ಯವಸ್ಥೆ ಇದೆ. ಅದು ಸದನದಲ್ಲಿಯೂ ಸ್ಪಷ್ಟವಾಗಿ ಕಾಣಿಸುತ್ತದೆ ಎಂದು ಹೇಳಿದರು. ಆಡಳಿತದಲ್ಲಿ ಸುರ್ಜೇವಾಲಾ ಹಸ್ತಕ್ಷೇಪ ಮಾಡುತ್ತಿಲ್ಲ, ಬಿಜೆಪಿ-ಜೆಡಿಎಸ್ ಆರೋಪ ಸತ್ಯಕ್ಕೆ ದೂರ: ಡಾ. ಜಿ. ಪರಮೇಶ್ವರ್ಂ ಯಾವುದಾದರೊಂದು ವಿಷಯದ ಬಗ್ಗೆ ನಿಲುವು ತೆಗೆದುಕೊಳ್ಳುವಾಗ ಬಿಜೆಪಿಯ ಅರ್ಧದಷ್ಟು ಶಾಸಕರು ವಿಧಾನಸಭೆಯಿಂದ ಹೊರನಡೆದರೆ ಉಳಿದವರು ಸದನದ ಬಾವಿಗೆ ಇಳಿಯುತ್ತಾರೆ. ಹಾಗಾಗಿ ಅವರಲ್ಲಿ ನಾಯಕತ್ವದ ಸಮಸ್ಯೆಗಳಿವೆ. ಬಿಜೆಪಿಯಲ್ಲಿ ಬಿಕ್ಕಟ್ಟು ಇದೆ. ಪ್ರತಿ ಎರಡು ದಿನಗಳಿಗೊಮ್ಮೆ ವಿಜಯೇಂದ್ರ ಹಾಗೂ ಆರ್.ಅಶೋಕ್ ನಾವೇ ತಮ್ಮ ಸ್ಥಾನದಲ್ಲಿ ಮುಂದುವರಿಯುತ್ತೇವೆ ಎಂದು ಹೇಳುತ್ತಿರುತ್ತಾರೆ. ಆದ್ದ-ರಿಂದ ಅವರ ನ್ಯೂನತೆ, ದೌರ್ಬಲ್ಯ, ಅನೈತಿಕತೆಯನ್ನು ಮರೆಮಾಡಲು ಇಂತಹ ಪಿತೂರಿ ನಡೆಸುತ್ತಲೇ ಬಂದಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

## ಉಪರಾಷ್ಟ್ರಪತಿ ಸ್ಥಾನಕ್ಕೆ ಸೆ.೯ರಂದು ಚುನಾವಣೆ

ಮಲ್ಲಮ್ಮನುಡಿವಾರ್ತೆನವದೆಹಲಿ:ಅ.1: ಜಗದೀಪ್‌ಧನಕರ್‌ಅವರರಾಜೀನಾಮೆಯಿಂದ ತೆರವಾಗಿರುವಉಪರಾಷ್ಟ್ರಪತಿ ಸ್ಥಾನಕ್ಕೆ ಸೆಪ್ಟೆಂಬರ್ 9ರಂದು ಚುನಾವಣೆ ನಡೆಯಲಿದೆ.ಕೇಂದ್ರ ಚುನಾವಣಾ ಆಯೋಗಉಪರಾಷ್ಟ್ರಪತಿ ಚುನಾವಣೆ ಸಂಬಂಧಮಾಧ್ಯಮಹೇಳಿಕೆಬಿಡುಗಡೆ ಮಾಡಿದೆ. ಇದೇ ಆಗಸ್ಟ್ 7ರಂದು ಅಧಿಸೂಚನೆ ಪ್ರಕಟವಾಗಲಿದೆ. ಆಗಸ್ಟ್ 21ರಂದು ಮಪತ್ರಸಲ್ಲಿಸಲು ಕೊನೆಯ ದಿನವಾಗಿದ್ದು, ಆಗಸ್ಟ್ 22ರಂದು ನಾಮಪತ್ರಪರಿಶೀಲನೆ ನಡೆಯಲಿದೆ. ಆಗಸ್ಟ್ 25ರ ಒಳಗೆ ನಾಮಪತ್ರ ಹಿಂಪಡೆಯಲು ಅವಕಾಶ ಇರಲಿದೆ. ಸೆಪ್ಟೆಂಬರ್ 9ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆ ವರೆಗೆ ಮತದಾನ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟವಾಗಲಿದೆ ಎಂದು ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ. ಉಪರಾಷ್ಟ್ರಪತಿಚುನಾವಣೆಯಲ್ಲಿ,ರಾಜ್ಯಸಭೆಯ 233 ಚುನಾಯಿತಸಂಸದರು, ರಾಜ್ಯಸಭೆಯ 12 ನಾಮನಿರ್ದೇಶಿತ ಸಂಸದರು ಮತ್ತು ಲೋಕಸಭೆಯ 543 ಸಂಸದರು ತಮ್ಮಮತಗಳನ್ನು ಚಲಾಯಿಸಬಹುದು.ಈರೀತಿಯಾಗಿ,ಒಟ್ಟು 788ಜನರು ಮತ ಚಲಾಯಿಸಬಹುದು. ಪಕ್ಷಗಳ ವಿಪ್ ಅಗತ್ಯವಿಲ್ಲದೆ ಗೌಪ್ಯ ಮತಪತ್ರದಮೂಲಕಮತದಾನನಡೆ-ಯುತ್ತದೆ.ರಾಷ್ಟ್ರಪತಿ ಚುನಾವಣೆಯಂತೆ ರಾಜ್ಯಗಳ ವಿಧಾನಸಭೆ ಶಾಸಕರಿಗೆ ಮತದಾನದಅವಕಾಶವಿಲ್ಲ. ಏಕಮತದಾನ ವರ್ಗಾವಣೆ ವಿಧಾನದಲ್ಲಿ ಪ್ರತಿಯೊಬ್ಬ ಮತದಾರ ಅಭ್ಯರ್ಥಿಗಳನ್ನು ಪ್ರಾಶಸ್ತ್ಯದ ಕ್ರಮದಲ್ಲಿ ಶ್ರೇಣೀಕರಿಸುತ್ತಾರೆ. ಅವರಪ್ರಾಶಸ್ತ್ಯವನ್ನು ಸಂಖ್ಯೆಗಳ ರೂಪದಲ್ಲಿ ಗುರುತಿಸುತ್ತಾರೆ. (ಮೊದಲ ಪ್ರಾಶಸ್ತ್ಯಕ್ಕೆ 1, 2ನೇ ಪ್ರಾಶಸ್ತ್ಯಕ್ಕೆ 2, ಇತ್ಯಾದಿ.) ಮತಪತ್ರವು ಮಾನ್ಯವಾಗಿರಲು ಮೊದಲ ಪ್ರಾಶಸ್ತ್ಯವನ್ನು ಗುರುತಿಸುವುದು ಕಡ್ಡಾಯವಾಗಿದೆ. ನಂತರದ ಆದ್ಯತೆಗಳು ಐಚ್ಛಿಕವಾಗಿರುತ್ತವೆ. ಎಣಿಕೆ ವೇಳೆ ಎಲ್ಲ ಅಭ್ಯರ್ಥಿಗಳಿಗೆ ಸಿಗುವ ಮೊದಲ ಪ್ರಾಶಸ್ತ್ಯದ ಮತಗಳನ್ನು ಆರಂಭಿಕವಾಗಿ ಎಣಿಕೆ ಮಾಡಲಾಗುತ್ತದೆ. ಮೊದಲ ಪ್ರಾಶಸ್ತ್ಯದ ಮತಗಳ ಎಣಿಕೆಯಲ್ಲಿ ಬಹುಮತ ದೊರೆಯದಿದ್ದಲ್ಲಿ 2ನೇ ಪ್ರಾಶಸ್ತ್ಯದ ಮತದಾನವನ್ನು ಪರಿಗಣಿಸಲಾಗುತ್ತದೆ.

# ಅತ್ಯಾಚಾರ ಪ್ರಕರಣ: ಪ್ರಜ್ವಲ್ ರೇವಣ್ಣ ದೋಷಿ



ಮಲ್ಲಮ್ಮನುಡಿವಾರ್ತೆ ಬೆಂಗಳೂರು: ಅ.1:ಇಡೀ ದೇಶವನ್ನು ಬೆಚ್ಚಿಬೀಳಿಸಿದ್ದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ದೋಷಿ ಎಂದು ಜನಪ್ರತಿನಿಧಿಗಳ ನ್ಯಾಯಾಲಯ ಮಹತ್ವದ ತೀರ್ಪು ನೀಡಿದೆ. ಅಶ್ಲೀಲ ವಿಡಿಯೋ ಹಾಗೂ ಅತ್ಯಾಚಾರ ಪ್ರಕರಣದಲ್ಲಿ ಬಂಧಿತರಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ದೋಷಿ ಎಂದು ಜನಪ್ರತಿನಿಧಿಗಳ ನ್ಯಾಯಾಲಯ ಶುಕ್ರವಾರ ಮಹತ್ವದ ತೀರ್ಪು ನೀಡಿದೆ. 26 ಸಾಕ್ಷಿಗಳ ವಿಚಾರಣೆ ನಡೆಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಈ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಅಪರಾಧಿ ಎಂದು ತೀರ್ಪು ನೀಡಿದೆ. ಅತ್ಯಾಚಾರ ಪ್ರಕರಣದಲ್ಲಿ ಜೈಲು ಸೇರಿರುವ ಮಾಜಿ ಸಂಸದ ಪ್ರಜಲ್ವ್ ರೇವಣ್ಣ ಕಳೆದ ಕಳೆದ 14 ತಿಂಗಳಿನಿಂದ ಸೆರೆಮನೆಯಲ್ಲಿ ಬಂಧಿಯಾಗಿದ್ದಾರೆ. ಪ್ರಜ್ವಲ್? ರೇವಣ್ಣ ವಿರುದ್ಧ ಹಲವು ಸೆಕ್ಷನ್‌ಗಳ ಅಡಿಯಲ್ಲಿ ಕೇಸ್ ದಾಖಲಾಗಿತ್ತು.

## ಬೀದರ ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆ, ಶಿಥಿಲ ಶಾಲಾ ಕಟ್ಟಡ ದುರಸ್ತಿ, ಶಾಲೆ ಮಕ್ಕಳ ಕಳಪೆ ಆಹಾರದ ಬಗ್ಗೆ ಗಂಭೀರವಾಗಿ ಪರಿಗಣನೆ : ಸಚಿವ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ ಬೀದರ, ಆ.01:ಬೀದರಜಿಲ್ಲೆಯಲ್ಲಿರಸಗೊಬ್ಬರ ಕೊರತೆ, ಶಿಥಿಲ ಶಾಲಾ ಕಟ್ಟಡ ದುರಸ್ತಿ, ಶಾಲೆ ಮಕ್ಕಳ ಕಳಪೆ ಆಹಾರದ ಬಗ್ಗೆ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ ಫಲಿತಾಂಶ ಸುಧಾರಣೆಗೆ ಕ್ಲಸ್ಟರ್ ರಚನೆಗೆಆದೇಶಮತ್ತುಪ್ರಗತಿಯಲ್ಲಿರುವ ಎಲ್ಲ ಕಾಮಗಾರಿಗಳ ಗುಣಮಟ್ಟದ ಖಾತ್ರಿಗೆ ಡಿಸಿ, ಸಿಇಓ, ಎ.ಸಿ., ಎಡಿಸಿಗಳು ಸ್ಥಳ ಪರಿಶೀಲನೆ ನಡೆಸಿ ಪ್ರಮಾಣೀಕರಿಸುವಂತೆ ಸಚಿವರು ಸೂಚನೆ ನೀಡಿದರು.

ಮುಖ್ಯಮಂತ್ರಿಯವರು 2025 ಕೋಟಿ ರೂ. ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದ್ದು, ಪ್ರಗತಿಯಲ್ಲಿರುವ ಎಲ್ಲ ಯೋಜನೆಗಳ ಗುಣಮಟ್ಟದ ಬಗ್ಗೆ ನಿಗಾ ಇಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದರು.

ಬೀದರ್ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿ.ಯು.ಸಿ ಫಲಿತಾಂಶ ಕುಸಿಯುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಜಿಲ್ಲೆಯಲ್ಲಿ ಕ್ಲಸ್ಟರ್ ರಚಿಸಿ ಇಂಗ್ಲಿಷ್, ಗಣಿತ, ವಿಜ್ಞಾನ, ಸಮಾಜಶಾಸ್ತ್ರ ವಿಷಯದ ತಜ್ಞಬೋಧಕರಿಂದ ಪರೀಕ್ಷೆಗೆ ಸಿದ್ಧತೆ ಮಾಡಿಸಿ ಫಲಿತಾಂಶ ಹೆಚ್ಚಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಜಿಲ್ಲಾ ಕೇಂದ್ರ ಮತ್ತು ಎಲ್ಲ ತಾಲೂಕು ಕೇಂದ್ರದಲ್ಲಿ ವಿವಿಧ ಶಾಲೆಗಳಲ್ಲಿರುವ ಉತ್ತಮ ಶಿಕ್ಷಕರನ್ನು ಗುರುತಿಸಿ, ಅವರಿಂದ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 2 ತಿಂಗಳ ಪುನರ್ ಮನನ ತರಗತಿ ನಡೆಸುವ ಸಾಧ್ಯತೆ ಪರಿಶೀಲಿಸುವಂತೆಯೂ ಸೂಚಿಸಿದರು.

ಶಿಥಿಲ ಕಟ್ಟಡ ಪಟ್ಟಿ ಕೇಳಿದ ಸಚಿವರು: ಬೀದರ್ ಜಿಲ್ಲೆಯಲ್ಲಿ ಹಲವು ಶಾಲೆಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದು, ವಿದ್ಯಾರ್ಥಿಗಳು ಜೀವ ಭಯದಿಂದ ಪಾಠ ಕಲಿಯುವ ಸ್ಥಿತಿ ನಿರ್ಮಾಣವಾಗಿದೆ ಎಂಬ ದೂರುಗಳ ಬಗ್ಗೆ ಪ್ರಸ್ತಾಪಿಸಿದ

(2ನೇ ಪುಟ ನೋಡಿ)

## ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಕಾರ್ಯಕ್ರಮಕ್ಕೆ ಶಿಸ್ತುಬದ್ಧ ಸಿದ್ಧತೆಯಾಗಲಿ



ಮಲ್ಲಮ್ಮನುಡಿವಾರ್ತೆ ರಾಯಚೂರ ಆ.01 ; ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಆಗಸ್ಟ್ 6ರಂದು ಜಿಲ್ಲೆಯ ಹಟ್ಟಿ ಚಿನ್ನದ ಗಣಿ ಕಂಪನಿ ಆವರಣಕ್ಕೆ ಆಗಮಿಸಿ ಶಂಕುಸ್ಥಾಪನೆ ಮಾಡಲಿರುವ ಕಾರ್ಯಕ್ರಮವು ಲೋಪದೋಷಗಳು ಆಗದಂತೆ ಶಿಷ್ಟಾಚಾರದಂತೆ ನಡೆಯಲು ಜಾಗೃತೆ ವಹಿಸಿ ಸಿದ್ಧತೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹಟ್ಟಿ ಚಿನ್ನದ ಗಣಿ ಕಂಪನಿಯ ಅಧಿಕಾರಿಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಗಸ್ಟ್ 01ರ ಶುಕ್ರವಾರ ಜಿಲ್ಲೆಯ ಲಿಂಗಸುಗೂರು ತಾಲೂಕಿನ ಹಟ್ಟಿ ಚಿನ್ನದ ಗಣಿ ಕಂಪನಿಯ ಆಡಳಿತ ಕಚೇರಿಯ ಸಭಾಂಗಣದಲ್ಲಿ ಕಾರ್ಯಕ್ರಮದ ಪೂರ್ವಭಾವಿ

(2ನೇ ಪುಟ ನೋಡಿ)

# ಪತ್ರಿಕಾ ಸಂಪಾದಕರ ಕೈ ಕಟ್ಟಿ ಹಾಕಲಾಗುತ್ತಿದೆ : ರಾಮಲಿಂಗಾರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಪತ್ರಿಕಾ ಸಂಪಾದಕರು ಈ ಹಿಂದೆ ನೇರ, ನಿಷ್ಠುರ ಹಾಗೂ ವಾಸ್ತವ ನೆಲೆಗಟ್ಟಿನ ಸತ್ಯಾಂಶಗಳನ್ನು ಬರೆಯುವ ಮೂಲಕ ಸಮಾಜವನ್ನು ತಿದ್ದುವ ಮತ್ತು ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡುತ್ತಿದ್ದರು. ಇಂದೂ ಈ ದಿಸೆಯಲ್ಲಿ ಮುಂದುವರಿದಿದ್ದಾರೆ. ಆದರೆ ಪ್ರಸ್ತುತ ಪತ್ರಿಕಾ ಸಂಪಾದಕರ ಕೈ ಕಟ್ಟಿ ಹಾಕುವ ಕೆಲಸ ನಡೆಯುತ್ತಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಅಭಿಪ್ರಾಯಪಟ್ಟರು. ಬೆಂಗಳೂರಿನ ಕೆಂಗೇರಿ ಬಸ್ ನಿಲ್ದಾಣದ ಶ್ರೀ ಕೆಂಗಲ್ ಹನುಮಂತಯ್ಯ ಸಾರಿಗೆ ಸಂಕೀರ್ಣದಲ್ಲಿರುವ ಕದಂಬ ಗೆಸ್ಟ್ ಲೈನ್ ಸಭಾಂಗಣದಲ್ಲಿ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ದಿಂದ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ-2025 ಹಿರಿಯ ಪತ್ರಕರ್ತರಿಗೆ ಸನ್ಮಾನ ಹಾಗೂ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟನೆಗೆ ಮುನ್ನ ಮಾತನಾಡಿದ ಅವರು, ನಾವು ಬಾಲ್ಯದಲ್ಲಿದ್ದಾಗ ಸಂಯುಕ್ತ ಕರ್ನಾಟಕ, ಪ್ರಜಾವಾಣಿ, ದಿ ಹಿಂದೂ ಮತ್ತು ಇಂಡಿಯನ್ ಎಕ್ಸ್‌ಪ್ರೆಸ್ ನಂತಹ ಹಳೆಯ ಪತ್ರಿಕೆಗಳನ್ನು ಓದಿಕೊಂಡು ಬೆಳೆದಿದ್ದೇವೆ. ನಂತರದಲ್ಲಿ ಹಲವಾರು ಪತ್ರಿಕೆಗಳು ಬಂದವು. ಎಲ್ಲವನ್ನೂ ಗಮನಿಸುತ್ತಿದ್ದೇವೆ. ಇತ್ತೀಚಿನ ದಿನಗಳಲ್ಲಿ ಪತ್ರಿಕೆಗಳ ಸಂಖ್ಯೆ ಹೆಚ್ಚಿದೆ. ಸಂಜೆ ದಿನಪತ್ರಿಕೆಗಳೂ ಹೆಚ್ಚಾಗಿವೆ. 20ಕ್ಕೂ ಹೆಚ್ಚು ನ್ಯೂಸ್ ಚಾನಲ್ ಗಳು ಮತ್ತು ಅನೇಕ ಯ್ಯೂಟ್ಯೂಬ್ ಚಾನಲ್ ಗಳೂ ಇವೆ. ಪತ್ರಿಕಾ ಮಾಧ್ಯಮ ಕ್ಷೇತ್ರದಲ್ಲೂ ಸಾಕಷ್ಟು ಬದಲಾವಣೆ ಆಗಿದೆ. ವಿದ್ಯುನ್ಮಾನ ಮಾಧ್ಯಮದಲ್ಲಿ ತತ್ ಕ್ಷಣದ ಸುದ್ದಿಗಳು ನೇರವಾಗಿ ಪ್ರಸಾರವಾದರೆ, ಮುದ್ರಣ ಮಾಧ್ಯಮದಲ್ಲಿ ಕೊಂಚ ತಡವಾಗಿ ಸುದ್ದಿಗಳು ಪ್ರಕಟವಾಗುತ್ತವೆ. ಸಮಾಜ ಮತ್ತು ಸರ್ಕಾರದಲ್ಲಿ ಏನೇ ಇದ್ದರೂ ಪತ್ರಿಕಾ ಮಾಧ್ಯಮಗಳು ಅವುಗಳನ್ನು ಎತ್ತಿ ತೋರಿಸುವ ಕೆಲಸ ಮಾಡಬೇಕು. ಸಮಾಜ ಮತ್ತು ಸರ್ಕಾರದಲ್ಲಿ ಬದಲಾವಣೆ ತರುವಂತಹ ನೇರ, ಸತ್ಯದ ಸುದ್ದಿಗಳನ್ನು ಪ್ರಕಟಿಸಿ, ಬಿತ್ತರಿಸಬೇಕೆಂದರು.

ಪತ್ರಕರ್ತರ ಸಂಘಕ್ಕೆ ಕಟ್ಟಡ ಒದಗಿಸಿಕೊಡಲು ಸೂಕ್ತ ನಿವೇಶನ ಬೇಕು ಎಂದು ಪತ್ರಕರ್ತರು ಮನವಿ ಸಲ್ಲಿಸಿದ್ದಾರೆ. ಈ ಭಾಗದ ಶಾಸಕರಾದ ಎಸ್.ಟಿ.ಸೋಮಶೇಖರ್ ಅವರು ಪತ್ರಕರ್ತರಿಗೆ ಅನುಕೂಲ ಮಾಡಿಕೊಡಲಿ. ನಾನೂ ಸರ್ಕಾರದಿಂದ ಎಲ್ಲ ರೀತಿಯ ಸಹಕಾರ ನೀಡುತ್ತೇನೆ. ಮಾನ್ಯತೆ ಕಾರ್ಡ್ ಹೊಂದಿರುವ ಪತ್ರಕರ್ತರಿಗೆ ಬೆಂಗಳೂರಿನಲ್ಲಿ ಸಂಚರಿಸಲು ಬಸ್ ಪಾಸ್ ಸೌಲಭ್ಯ ವಿತರಿಸಲು ಸಂಘದ ಅಧ್ಯಕ್ಷ ಶಿವಾನಂದ್ ತಗಡೂರು ಪತ್ರಕರ್ತರ ಪಟ್ಟಿ ಕೊಟ್ಟರೆ, ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಬಸ್ ಪಾಸ್ ಸೌಲಭ್ಯ ನೀಡುವುದಾಗಿ ಹೇಳಿದರು.

**ಬದಲಾವಣೆಗೆ ಮಿಡಿಯಬೇಕು:**

ವಿಜಯಕರ್ನಾಟಕ ಪತ್ರಿಕೆಯ ಸಂಪಾದಕ ಸುದರ್ಶನ್ ಚನ್ನಂಗಿಹಳ್ಳಿ ಅವರು ದಿಕ್ಸೂಚಿ ಭಾಷಣದಲ್ಲಿ ಮಾತನಾಡಿ, ಸಂಘಟನೆ ಕೇವಲ ಪತ್ರಕರ್ತರಿಗೆ ಸೌಲಭ್ಯಗಳನ್ನು ಒದಗಿಸಲು ಮಾತ್ರ ಸೀಮಿತವಾಗಬಾರದು. ಯುವ ಪತ್ರಕರ್ತರಿಗೆ ತರಬೇತಿಗೊಳಿಸಬೇಕು. ದಿನೇ ದಿನೇ ಪತ್ರಿಕಾ ಕ್ಷೇತ್ರದಲ್ಲಿ ಬದಲಾವಣೆಗಳು ನಡೆಯುತ್ತಿರಬೇಕು. ಹೊಸ ಆವಿಷ್ಕಾರಗಳಿಗೆ ತೆರೆದುಕೊಳ್ಳುವ ಮನಃಸ್ಥಿತಿಯನ್ನು ಪತ್ರಕರ್ತರು ರೂಢಿಸಿಕೊಳ್ಳಬೇಕು. ಸತ್ಯಕ್ಕೆ ಹತ್ತಿರವಾದ ಸುದ್ದಿಗಳನ್ನು ಕೊಟ್ಟರೆ ಖಂಡಿತ ಜನರು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಾರೆ. ಇಂದಿನ ಸಾಮಾಜಿಕ ಜಾಲತಾಣಗಳು ಜಗತ್ತಿನ ಯಾವುದೇ ಮೂಲೆಗೂ ಸಂವಹನ ನಡೆಸುವಷ್ಟು ಕ್ಷಿಪ್ರವಾಗಿವೆ. ಅವುಗಳನ್ನು ಅಳವಡಿಸಿಕೊಂಡು ಸತ್ಯ ಮತ್ತು ಮಿಥ್ಯದ ಅವಲೋಕನ ಮಾಡಿಕೊಳ್ಳಬೇಕು. ಸೋಷಿಯಲ್ ಮೀಡಿಯಾದಲ್ಲಿ ಜನ ಸಾಮಾನ್ಯರೂ ಕೂಡ ಇಂದು ವರದಿಗಾರಿಕೆಯನ್ನು ಮಾಡುತ್ತಿದ್ದಾರೆ. ವಸ್ತುನಿಷ್ಠ ಮತ್ತು ವಾಸ್ತವಗಳನ್ನು ನಾವು ಅರಿತುಕೊಳ್ಳಬೇಕು. ಜನರು ಏನು ಬಯಸುತ್ತಾರೆ? ಎನ್ನುವುದನ್ನು ಕಂಡುಕೊಳ್ಳಬೇಕು. ನಮ್ಮನ್ನು ನಾವು ಆತ್ಮಾವಲೋಕನ ಮಾಡಿಕೊಂಡು ಸ್ವಯಂ ನಿಯಂತ್ರಣಕ್ಕೆ ಒಳಗಾಗಬೇಕು ಎಂದರು.

ಇಂದು ಟಿಸಿಎಸ್ ಮತ್ತು ಹೆಚ್‌ಸಿಎಲ್ ನಂತಹ ಕಂಪನಿಗಳಲ್ಲಿ 12 ಸಾವಿರ ಹುದ್ದೆಗಳನ್ನು ಕಡತಗೊಳಿಸಲಾಗಿದೆ. ಲಕ್ಷಾಂತರ ವಿದ್ಯಾರ್ಥಿಗಳು ಓದಿಕೊಂಡಿರುತ್ತಾರೆ. ಅವರಿಗೆ ಉದ್ಯೋಗವೆಲ್ಲಿ? ಎಂದು ಸಂಬಂಧಿಸಿದ ಕಂಪನಿಗಳಿಗೆ ವಿಚಾರಿಸಿದಾಗ ಕೌಶಲ್ಯ ಇದ್ದವರಿಗೆ ಕೆಲಸಕ್ಕೆ ಕೊರತೆ ಇಲ್ಲ. ಕೌಶಲ್ಯ ಇಲ್ಲದವರಿಗೆ ಅವಕಾಶಗಳು ಕಡಿಮೆ ಎನ್ನುವ ನಿಜಾಂಶ ತಿಳಿಯಿತು. ಪತ್ರಿಕೋದ್ಯಮಕ್ಕೆ ಕಂಪ್ಯೂಟರ್ ಬಂದಾಗ ನಾವು ಇದನ್ನು ವಿರೋಧಿಸಿದ್ದೆವು. ಉದ್ಯೋಗ ಕಡಿತವಾಗುತ್ತದೆ ಎಂದುಕೊಂಡಿದ್ದೆವು. ಹಾಗೆ ನೋಡಿದರೆ ಕಂಪ್ಯೂಟರ್ ನಿಂದ ಉದ್ಯೋಗಾವಕಾಶಗಳು ಹೇರಳವಾಗಿವೆ. ಇಂದು ಬೀದಿ ಬದಿಯ ವ್ಯಾಪಾರಿಯೂ ಯುಪಿಐ ಸ್ಕ್ಯಾನ್ ಕೋಡ್ ಬಳಸುತ್ತಾನೆ. ಪತ್ರಕರ್ತರಾದ ನಾವೂ ಕೂಡ ಹೊಸ ತಾಂತ್ರಿಕತೆಗೆ ಒಗ್ಗಿಕೊಳ್ಳಬೇಕು. ಕ್ರಿಯಾಶೀಲ ಪತ್ರಕರ್ತ ಸಂಸ್ಥೆಗಳಲ್ಲಿ ಕೆಲಸ ಮಾಡಬೇಕಾಗಿತ್ತು. ಈಗ ಸ್ವಂತ ಪತ್ರಿಕೆ, ಯ್ಯೂಟ್ಯೂಬ್ ಚಾನಲ್ ತೆರೆದು ಸಮಾಜಕ್ಕೆ ತಮ್ಮ ಕೌಶಲ್ಯ ವ್ಯಕ್ತಪಡಿಸುತ್ತಿದ್ದಾರೆ. ಪತ್ರಕರ್ತನೆಂದರೆ ಸಮಾಜ ಮತ್ತು ಸರ್ಕಾರದ ನಡುವಿನ ಕೊಂಡಿಯಾಗಿರಬೇಕು. ಬದಲಾವಣೆಗೆ ಹೊಂದಿಕೊಂಡಿರುವವರು, ವಸ್ತುನಿಷ್ಠವಾಗಿರುವವರು ಈ ಕ್ಷೇತ್ರದಲ್ಲಿ ಉಳಿಯುತ್ತಾರೆ. ನಕಾರಾತ್ಮಕ ಗುಣಗಳನ್ನು ಬೆಳೆಸಿಕೊಳ್ಳದೇ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ದೀರ್ಘಕಾಲ ಪತ್ರಿಕಾ ಸಂಸ್ಥೆಗಳು ಉಳಿಯುವಂತಹ ರೀತಿಯಲ್ಲಿ ಜನರ ವಿಶ್ವಾಸ ಗಳಿಸಿಕೊಳ್ಳಬೇಕು. ಪತ್ರಿಕಾ ಸಂಸ್ಥೆಗಳು ಉಳಿಯಬೇಕೆಂದರೆ ಉತ್ತಮ ಸಹಪಾಠಿಗಳು, ಉತ್ತಮ ಪತ್ರಕರ್ತರು ಅವಶ್ಯಕ ಎಂದರು.

ಸವಾಲಿಗೆ ತಕ್ಕಂತೆ ನಾವು ಹೊಂದಿಕೊಳ್ಳಬೇಕು. ಜನಜೀವನದ ಮೇಲೆ ಆಗುವ ಬದಲಾವಣೆಗಳನ್ನು ನಾವು ನೋಡಿಕೊಳ್ಳಬೇಕು. ರಾಜಕೀಯ ಸಮಸ್ಯೆಗಳನ್ನು ದೊಡ್ಡದಾಗಿ ಬಿಂಬಿಸುವ ನಾವು ಸಮಾಜದಲ್ಲಿನ ಸಮಸ್ಯೆಗಳನ್ನೂ ಎತ್ತಿ ತೋರಿಸಿ, ಬದಲಾವಣೆಗೆ ಒಳಗೊಳ್ಳಬೇಕು. ನಮ್ಮ ನಮ್ಮಲ್ಲೇ ಕಾಲೆಳೆಯುವ ಗುಣಗಳನ್ನು ಹೊಂದುವುದಕ್ಕಿಂತ ವೃತ್ತಿಬಾಂಧವರ ಯೋಗಕ್ಷೇಮವನ್ನು ನೋಡಿಕೊಳ್ಳುವ ಸದ್ಗುಣಗಳನ್ನೂ ಅಳವಡಿಸಿಕೊಳ್ಳಬೇಕು. ಸಂಕಷ್ಟಗಳಿಗೆ ಸ್ಪಂದಿಸಬೇಕು. ಪತ್ರಿಕಾವಲಯಗಳಲ್ಲೂ ಸಾಕಷ್ಟು ಒಡಕುಗಳಿವೆ. ಅದನ್ನು ಸರಿಪಡಿಸಿಕೊಳ್ಳುವ ಕೆಲಸ ಆಗಬೇಕು. ಯುವ ಜನರಲ್ಲಿ ಸುದ್ದಿಗೆ ಸಂಬಂಧಿಸಿದಂತೆ ಕಾಗುಣಿತಗಳ ಕೊರತೆ ಇದೆ. ಅವರಿಂದ ಶುದ್ಧವಾದ ಕನ್ನಡ ಪದ ಬಳಕೆ ಕ್ಷೀಣಿಸುತ್ತಿದೆ. ಜರ್ನಲಿಸಂ ಕೋರ್ಸ್‌ನಲ್ಲಿ ಬೋಧನೆ ವಿಧಾನ ಸಮರ್ಪಕವಾಗಿರಬೇಕು. ಹಾಗಾದಾಗ ಮಾತ್ರ ಯುವ ಪತ್ರಕರ್ತರು ಪತ್ರಿಕೋದ್ಯಮದಲ್ಲಿ ಉಳಿಯಲು ಸಾಧ್ಯ ಎಂದರು.

**ಸುಳ್ಳು, ಜೊಳ್ಳು ಮತ್ತು ಪೊಳ್ಳುಗಳ ಹಾವಳಿ ನಿಲ್ಲಬೇಕು:**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಬೆಂಗಳೂರು ನಗರ ಜಿಲ್ಲಾ ಘಟಕದ ಪತ್ರಕರ್ತರು ಕೌಶಲ್ಯಭರಿತರಿದ್ದಾರೆ. ಸಾಮಾಜಿಕ ಕಾರ್ಯ, ಕ್ರೀಡೆ, ಸಂಸ್ಕೃತಿ, ಕಲೆಗಳಲ್ಲಿ ಕರಗತರಾಗಿದ್ದಾರೆ. ಅವರು ಮನಸ್ಸು ಮಾಡಿದ್ದರೆ ಎಂದೋ ಸಂಘಕ್ಕೆ ಕಟ್ಟಡವನ್ನು ಹೊಂದಬಹುದಿತ್ತು ಎಂದರು. ಇಂದು ಪತ್ರಿಕಾ ಮಾಧ್ಯಮ ಕ್ಷೇತ್ರದಲ್ಲಿ ಅಕ್ಷರ ಬರೆಯಲು ಬಾರದವರು ಕೂಡ ನಾವು ಪತ್ರಕರ್ತರು ಎಂದು ಹೇಳಿಕೊಳ್ಳುತ್ತಿದ್ದಾರೆ. ವಿಸಿಟಿಂಗ್ ಕಾರ್ಡ್ ಉಳ್ಳ ಪತ್ರಕರ್ತರ ಸಂಖ್ಯೆ ಹೆಚ್ಚುತ್ತಿದೆ. ಈ ಕ್ಷೇತ್ರಕ್ಕೆ ಸುಳ್ಳು, ಪೊಳ್ಳು, ಜೊಳ್ಳು ಪತ್ರಕರ್ತರು ಬರುತ್ತಿದ್ದಾರೆ. ಅವರಿಗೆ ಸದಸ್ಯತ್ವ ಕೊಡಬೇಕೋ, ಬೇಡವೋ ಅರ್ಥವಾಗುತ್ತಿಲ್ಲ. ಕಾರ್ಯನಿರತರಿಗೆ ಮಾತ್ರ ಈ ಸಂಘ ಇದೆ. ನಗರ ಪತ್ರಕರ್ತರಿಗೆ ಎಲ್ಲ ಶಕ್ತಿ ಇದ್ದು ಸಂಘಕ್ಕಾಗಿ ಒಂದು ಕಾರ್ಪೋರೇಟ್ ಮಟ್ಟದ ಕಟ್ಟಡ ನಿರ್ಮಿಸಿಕೊಳ್ಳಬೇಕು ಎಂದರು. ಪತ್ರಿಕಾ ಮಾಧ್ಯಮ ನಾಲ್ಕು ಅಂಗಗಳಲ್ಲಿ ಪ್ರಮುಖವಾಗಿದ್ದು ಇಂದು ಸುಪ್ರೀಂ ಕೋರ್ಟ್ ನ್ಯಾಯಾಧೀಶರೂ ಕೂಡ ಪತ್ರಿಕಾರಂಗದ ಮುಂದೆ ಬರುತ್ತಿದ್ದಾರೆ. ಒಬ್ಬರ ಕಣ್ಣೀರು ಒರೆಸುವ, ನ್ಯಾಯ ಕೊಡಿಸುವುದಾದರೆ ನಮ್ಮ ವೃತ್ತಿಯಲ್ಲಿ ಸಾರ್ಥಕತೆ ಬರುತ್ತದೆ ಎಂದರು.

**ಪತ್ರಕರ್ತರಿಗೆ ನಿವೇಶನ:**

ಯಶವಂತಪುರ ಕ್ಷೇತ್ರದ ಶಾಸಕ ಎಸ್.ಟಿ.ಸೋಮಶೇಖರ್ ಸುರಕ್ಷತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಪತ್ರಕರ್ತರ ಸಂಘಕ್ಕೆ ಕಟ್ಟಡದ ಅವಶ್ಯಕತೆ ಇದೆ. ನಿವೇಶನಕ್ಕಾಗಿ ಒಂದೆರಡು ದಿನ ಬಿಟ್ಟು ನನ್ನ ಕಚೇರಿಗೆ ಬಂದರೆ ಬಿಡಿಎ ಅಧಿಕಾರಿಗಳನ್ನು ಸ್ಥಳಕ್ಕೆ ಆಹ್ವಾನಿಸಿ ನಿವೇಶನ ಕೊಡಿಸುವ ಪ್ರಯತ್ನ ಮಾಡುತ್ತೇನೆ. ಪತ್ರಕರ್ತರು ಸರ್ಕಾರಕ್ಕೆ ನಿರ್ದೇಶನ ಮಾಡಬೇಕು ಮತ್ತು ಈ ಕುರಿತು ನಿರಂತರ ಪ್ರಯತ್ನವನ್ನು ಮುಂದುವರಿಸಿದರೆ ಮುಂದಿನ ವರ್ಷದಲ್ಲಿ ಶಂಕುಸ್ಥಾಪನೆ ಮಾಡಲು ಸಾಧ್ಯ. ಉಪಮುಖ್ಯಮಂತ್ರಿಗಳು ಈಗಾಗಲೇ ಸಿಎ ಸೈಟ್‌ಗಳಿಗೆ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಕಟ್ಟಿ ಹಾಕಲಾಗುತ್ತಿದೆ : ರಾಮಲಿಂಗಾರೆಡ್ಡಿ

ನೋಟಿಫಿಕೇಶನ್ ಕೊಡಿಸಿದ್ದಾರೆ. ಪತ್ರಕರ್ತರು ನಿರಂತರ ಪ್ರಯತ್ನ ಮುಂದುವರಿಸಿದರೆ ಅಧಿಕಾರಿಗಳು ಮತ್ತು ಸರ್ಕಾರದ ಸಹಯೋಗದಲ್ಲಿ ನಿವೇಶನ ದೊರೆಯುತ್ತದೆ ಎಂದರು.

**ಎ-ಐ ತಾಂತ್ರಿಕತೆಯಿಂದ ಆತಂಕ:**

ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ಪತ್ರಕರ್ತರಾದವರು ತಮ್ಮ ತಪ್ಪುಗಳನ್ನು ಆತ್ಮಾವಲೋಕನ ಮಾಡಿಕೊಂಡು ಮುಂದೆ ಹೋದರೆ ಪತ್ರಿಕಾ ದಿನಾಚರಣೆಗೆ ಒಂದು ಅರ್ಥ ಬರುತ್ತದೆ. ಈ ಕ್ಷೇತ್ರದಲ್ಲಿ ಪತ್ರಕರ್ತರಲ್ಲದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇದರ ನಿಯಂತ್ರಣಕ್ಕೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಬಿಲ್ ಪಾಸ್ ಮಾಡುವುದಾಗಿ ಹೇಳಿದ್ದಾರೆ. ಸರ್ಕಾರದಿಂದ ಪಾಸ್ ಆಗುವ ಬಿಲ್ ಪತ್ರಕರ್ತರ ಗೌಪ್ಯತೆ, ಘನತೆ, ಸ್ವಾತಂತ್ರ ಕ್ಕೆ ವ್ಯತಿರಿಕ್ತವಾಗಿದ್ದರೆ ಖಂಡಿತವಾಗಿಯೂ ಈ ಬಿಲ್ ವಿರುದ್ಧವಾಗಿ ರಾಜ್ಯಾದ್ಯಂತ ಚಳುವಳಿ ರೂಪಿಸುವುದಾಗಿ ಎಚ್ಚರಿಸಿದರು. ಎಲ್ಲ ಕ್ಷೇತ್ರಗಳಲ್ಲೂ ಇಂದು ಬದಲಾವಣೆಗಳಾಗಿವೆ. ನಮ್ಮಲ್ಲೂ ಬದಲಾವಣೆಗಳಾಗಬೇಕು. ಎಲ್ಲ ಕ್ಷೇತ್ರಗಳೂ ಮಾರ್ಕೆಟಿಂಗ್ ವ್ಯವಸ್ಥೆಯಲ್ಲಿವೆ. ಪತ್ರಕರ್ತರು ತಮ್ಮನ್ನು ತಿದ್ದಿಕೊಂಡು ತಮ್ಮ ವ್ಯಕ್ತಿತ್ವ ಮತ್ತು ವೃತ್ತಿ ಪಾವಿತ್ರ ತೆಯನ್ನು ಕಾಪಾಡಿಕೊಳ್ಳಬೇಕೆಂದರು. ಎ-ಐ ಬಂದ ಮೇಲೆ ನಮ್ಮ ಭವಿಷ್ಯದ ಬಗ್ಗೆ ಆತಂಕ ಉಂಟಾಗಿದೆ. ಎ-ಐ ಮಾನವ ಬುದ್ಧಿ ಶಕ್ತಿ ಮೀರಿದ್ದಲ್ಲದಿದ್ದರೂ ಆ ಭೀತಿ ಎದುರಾಗಿದೆ ಎಂದರು.

**ಪತ್ರಕರ್ತರಿಗೆ ಸನ್ಮಾನ-ಪ್ರತಿಭಾನ್ವಿತರಿಗೆ ಪುರಸ್ಕಾರ:**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ರಾಜ್ಯ ಖಜಾಂಚಿ ವಾಸುದೇವ ಹೊಳ್ಳ ಮತ್ತು ಪದಾಧಿಕಾರಿಗಳು ವಿಜಯವಾಣಿಯ ನಿವೃತ್ತ ಸಹಾಯಕ ಸಂಪಾದಕ ವೀರಣ್ಣ ಜಿ., ವಿಜಯ ಕರ್ನಾಟಕ ಬೆಂಗಳೂರು ಸ್ಥಾನಿಕ ಸಂಪಾದಕ ಶಿವರಾಮ, ಪ್ರಜಾವಾಣಿ ನಿವೃತ್ತ ಸಹಾಯಕ ಸಂಪಾದಕ ಎಂ.ನಾಗರಾಜ್, ಹಿರಿಯ ಪತ್ರಕರ್ತೆ ಡಾ.ಆಶಾ ಕೃಷ್ಣಸ್ವಾಮಿ, ರಾಜ್ ನ್ಯೂಸ್ ನ ಹೆಚ್ ಜಿ ಶ್ರೀನಿವಾಸ್, ಗಗನ ಕುಸುಮ ಪತ್ರಿಕೆಯ ಸಂಪಾದಕ ಎಂ.ಪಿ.ಶರತ್ ಚಂದ್ರ ಮತ್ತು ಹಿರಿಯ ಪತ್ರಕರ್ತ ಕೆ.ಎನ್.ಜಯಸಿಂಹ ಅವರಿಗೆ ಸನ್ಮಾನಿಸಿ ಗೌರವಿಸಿದರು. ಇದೇವೇಳೆ ಪತ್ರಕರ್ತರ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಸ್ವರ ಚಿಂತನ ಮ್ಯೂಸಿಕೆ ಇವೆಂಟ್ಸ್ ನ ವೀರೇಶ್ ಎಂ.ಪಿ.ಎಂ. ಇವರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು. ಸಂಘದ ಅಧ್ಯಕ್ಷ ಕೆ.ಸತ್ಯನಾರಾಯಣ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರಾದ ಎಸ್.ಸೋಮಶೇಖರ(ಗಾಂಧಿ), ನಾಮನಿರ್ದೇಶಿತ ಸದಸ್ಯರಾದ ಕೆ.ಆರ್.ದೇವರಾಜ್, ಸಂಘದ ಜಿಲ್ಲಾ ಅಧ್ಯಕ್ಷರಾದ ಕೆ. ಸತ್ಯನಾರಾಯಣ, ಉಪಾಧ್ಯಕ್ಷರಾದ ಎನ್.ಶ್ರೀನಾಥ, ಕೆ.ಎನ್.ಜಕ್ರಿಯಾ, ಆರ್.ಜಯಕುಮಾರ್, ಪದಾಧಿಕಾರಿಗಳಾದ ನರೇಂದ್ರ ಎಂ.ಪಾರೆಕಟ್, ಪರಿಮಳ ಎಚ್ ಎಸ್., ರುದ್ರಸ್ವಾಮಿ ಅರ್., ಹೆಚ್ ಕೆ ಬಸವರಾಜ್, ಎಸ್.ಡಿ.ಚಿಕ್ಕಣ್ಣ, ಕೆ.ಎಲ್.ಲೋಕೇಶ್, ಹರೀಶ್ ಕೆ., ಟಿ.ಮೋಹನ್, ಕೆ.ವಿ.ಪರಮೇಶ್, ವೈ.ಎಸ್.ಎಲ್.ಸ್ವಾಮಿ, ಕೆ.ಯು.ವೆಂಕಟೇಶ್, ರಮೇಶ್ ಎಂ., ಡಿ.ಎಲ್. ಹರೀಶ್, ಮು.ವೆಂಕಟೇಶಯ್ಯ, ಕೆ.ಎಸ್.ಸ್ವಾಮಿ, ನರಸಿಂಹರಾಜು ಎಚ್., ನಾಗರಾಜ್ ಶೆಟ್ಟಿ, ಕೃಷ್ಣೇಗೌಡ, ಎ.ಬಿ.ಶಿವರಾಜು, ಗೋದಾವರಿ, ಡಿ.ಎಸ್., ನಾಮನಿರ್ದೇಶಿತ ಸದಸ್ಯರಾದ ಜಿ.ಟಿ.ಶ್ರೀನಿವಾಸ್, ಬಿ.ಸಿ.ಜಗಧೀಶ, ಎ.ವಿಜಯಕುಮಾರ್, ಆರ್.ವೆಂಕಟಮುನಿ ಇನ್ನಿತರರು ಇದ್ದರು.

## ಆಹಾರದ ಬಗ್ಗೆ ಗಂಭೀರವಾಗಿ ಪರಿಗಣನೆ : ಸಚಿವ ಖಂಡ್ರೆ

ಸಚಿವರು, ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಶಾಲಾ-ಕಾಲೇಜು ಕಟ್ಟಡಗಳು ಶಿಥಿಲಾವಸ್ಥೆಯಲ್ಲಿವೆ ಎಂಬ ಪಟ್ಟಿ ನೀಡುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಕೇಳಿದರು. ಯಾವ ಶಾಲೆಯ ಕೊಠಡಿ ಶಿಥಿಲವಾಗಿದೆ, ಅದನ್ನು ದುರಸ್ತಿ ಮಾಡಬಹುದೇ ಅಥವಾ ಒಡೆದು ಕಟ್ಟಬೇಕೆ ಎಂಬ ಬಗ್ಗೆ ನಿಗದಿತ ಕಾಲಮಿತಿಯಲ್ಲಿ ಸ್ಪಷ್ಟ ಮಾಹಿತಿಯನ್ನು ಕಡತದಲ್ಲಿ ಸಲ್ಲಿಸುವಂತೆ ಆದೇಶ ನೀಡಿದರು.

ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಯಾವ ವರ್ಷ ಕಟ್ಟಲಾಗಿದೆ, ಅದಕ್ಕೆ ಮಾಡಿರುವ ವೆಚ್ಚ ಎಷ್ಟು, ಇಷ್ಟು ಬೇಗ ಶಿಥಿಲಾವಸ್ಥೆಗೆ ಹೋಗಲು ಕಾರಣವೇನು ಎಂಬ ಬಗ್ಗೆ ಪರಿಶೀಲನಾ ವರದಿಯನ್ನು ಮುಂದಿನ ಕೆಡಿಪಿ ಸಭೆಯಲ್ಲಿ ಸಲ್ಲಿಸುವಂತೆಯೂ ಸೂಚಿಸಿದರು.

ಶಾಂತಿ-ಸುವ್ಯವಸ್ಥೆ ಕಾಪಾಡಲು ಸೂಚನೆ: ಅಪ್ರಾಪ್ತ ವಯಸ್ಕ ಹೆಣ್ಣುಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣದ ಬಗ್ಗೆ ಆಘಾತ ವ್ಯಕ್ತಪಡಿಸಿದ ಸಚಿವರು, ಬಾಲಕಿಯರ ಮತ್ತು ಮಹಿಳಾ ದೌರ್ಜನ್ಯ ಪ್ರಕರಣಗಳಲ್ಲಿ ತನಿಖೆ ತ್ವರಿತಗೊಳಿಸಲು ಡಿವೈಎಸ್.ಪಿ.ಗಳಿಗೆ ಸೂಚನೆ ನೀಡಿದರು.

ಮಹಿಳಾ ದೌರ್ಜನ್ಯ ನಡೆದ ಸಾರ್ವಜನಿಕ ಸ್ಥಳಗಳಲ್ಲಿ ಸಿಸಿ ಟಿವಿ ಕ್ಯಾಮರಾ ಇತ್ತೆ ಎಂದು ಪ್ರಶ್ನಿಸಿದ ಈಶ್ವರ ಖಂಡ್ರೆ ನಗರದ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಟಿವಿ ಕ್ಯಾಮರಾ ಇಲ್ಲದಿದ್ದರೆ ಅಳವಡಿಸಲು ತುರ್ತು ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು.

ಅಪರಾಧಿಗಳನ್ನು ಹಿಡಿದು ನ್ಯಾಯಾಲಯದ ಕಟಕಟೆಯಲ್ಲಿ ನಿಲ್ಲಿಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆದರೆ ಮಾತ್ರ ಇಂತಹ ಘಟನೆ ಮರುಕಳಿಸದಂತೆ ತಡೆಯಲು ಸಾಧ್ಯ ಎಂದೂ ಅವರು ಅಭಿಪ್ರಾಯಪಟ್ಟರು.

ಜಿಲ್ಲೆಯಲ್ಲಿ ಮಾನವ ಕಳ್ಳ ಸಾಗಣೆ ಮತ್ತು ಮಾದಕದ್ರವ್ಯ ಜಾಲದ ಬಗ್ಗೆ ನಿಗಾ ಇಡುವಂತೆ ಮತ್ತು ಇಂತಹ ಸಮಾಜಘಾತುಕ ಶಕ್ತಿಗಳ ಹೆಡೆಮುರಿ ಕಟ್ಟಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಿದರು.

ಕೌಶಲ್ಯ ತರಬೇತಿ: ಇನ್ನು ದೇಶದಾದ್ಯಂತ ಇರುವಂತೆಯೇ ನಮ್ಮ ಜಿಲ್ಲೆಯಲ್ಲಿ ಕೂಡ ನಿರುದ್ಯೋಗ ಸಮಸ್ಯೆ ಇದೆ. ಯುವಕರಿಗೆ ಸ್ವಾವಲಂಬಿಗಳಾಗಿ ಸ್ವಉದ್ಯೋಗ ಕೈಗೊಳ್ಳಲು ಸರ್ಕಾರದ ವಿವಿಧ ಯೋಜನೆ ಅಡಿ ಸಾಲ ಸೌಲಭ್ಯ ಕಲ್ಪಿಸಿ ಉತ್ತೇಜನ ನೀಡಬೇಕು. ಇದರ ಜೊತೆಗೆ ನಮ್ಮ ಜಿಲ್ಲೆಯ ಯುವಕರು ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಪಡೆಯುವಂತೆ ಅವರಿಗೆ ಕೌಶಲ್ಯ ತರಬೇತಿ ನೀಡಬೇಕು ಎಂದೂ ತಿಳಿಸಿದರು.

ನಮ್ಮ ಜಿಲ್ಲೆಯಲ್ಲಿ ಕೈಗಾರಿಕಾ ಕ್ರಾಂತಿ ಮಾಡಲು ನೈಸರ್ಗಿಕ ಸಂಪನ್ಮೂಲವಿಲ್ಲ. ಹೀಗಾಗಿ ನಮ್ಮ ಯುವಕರಿಗೆ ಸೇವಾ ವಲಯದಲ್ಲಿ ಹೆಚ್ಚು ಹೆಚ್ಚು ಉದ್ಯೋಗ ಲಭಿಸುವಂತೆ ಅಣಿಗೊಳಿಸಲು ಕೌಶಲ್ಯ ತರಬೇತಿ ನೀಡಿ ಎಂದು ಸಲಹೆ ನೀಡಿದರು.ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟವನ್ನು ಖಾತ್ರಿಪಡಿಸಲು, ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕನಿಷ್ಠ ತಲಾ 5 ಕಾಮಗಾರಿಗಳನ್ನು ಯಾಧೃಚ್ಛಿಕವಾಗಿ ಖುದ್ದು ಪರಿಶೀಲಿಸಬೇಕು ಎಂದು ಸೂಚಿಸಿದರು.

ಶಾಸಕ ಶೈಲೇಂದ್ರ ಬೆಲ್ದಾಳೆ ಮಾತನಾಡಿ, ಜಿಲ್ಲೆಯಲ್ಲಿ ಕಲಬೆರಕೆ ಅಡುಗೆ ಎಣ್ಣೆ ಮತ್ತು ಕಳಪೆ ಗುಣಮಟ್ಟದ ಆಹಾರ ಪೂರೈಕೆ ಆಗುತ್ತಿದೆ ಮತ್ತು ಅಧಿಕಾರಿಗಳು ಹೋಟೆಲ್ ಮತ್ತು ರೆಸ್ಟೋರೆಂಟ್ ಗಳಿಗೆ ಭೇಟಿ ನೀಡಿ ಗುಣಮಟ್ಟದ ಪರಿಶೀಲನೆ ಪಡಿಸಬೇಕು ಎಂದು ಸಭೆಗೆ ತಿಳಿಸಿದರು.

ಈ ಸಭೆಯಲ್ಲಿ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಶಾಸಕರಾದ ಸಿದ್ದಲಿಂಗಪ್ಪ ಪಾಟೀಲ, ಶರಣು ಸಲಗರ, ವಿಧಾನ ಪರಿಷತ್ ಸದಸ್ಯರಾದ ಎಂ.ಜಿ.ಮೂಳೆ, ಭೀಮರಾಯ ಪಾಟೀಲ, ಚಂದ್ರಶೇಖರ ಪಾಟೀಲ, ಮೀನುಗಾರಿಕೆ ನಿಗಮದ ಅಧ್ಯಕ್ಷೆ ಮಾಲಾ.ಬಿ.ನಾರಾಯಣ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ, ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಅಮರ ಖಂಡ್ರೆ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲಿಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಂದೀಪ್ ಡಿ, ಜಿಲ್ಲಾ ಉಪ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ ಸೇರಿದಂತೆ ಇಲಾಖೆಯ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.


ಆದೇಶ ಸಂಖ್ಯೆ: ಪಸಂಮೀ125 ಮೀಇಇ 2013.ಬೆಂಗಳೂರು ದಿನಾಂಕ:21-02-2014

ಅನುಬಂಧ-8

ಕರ್ನಾಟಕ ಸರ್ಕಾರ

(ಮೀನುಗಾರಿಕೆ ಇಲಾಖೆ)

ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕಛೇರಿ, ಬಸವಕಲ್ಯಾಣ

(ಸ್ಥಳ:- ತಾಲೂಕ ಪಂಚಾಯತ ಆವರಣ ಬಸವಕಲ್ಯಾಣ

ಸಂಖ್ಯೆ.ಮೀ ಸ.ನಿ ಬ. /ಹಗುಪ/ನೇಗು/02/2025-26 /77 ದಿನಾಂಕ 01-08-2025.

**ಸರ್ಕಾರಿ ಸ್ವಾಮ್ಯದ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು ನೇರಗುತ್ತಿಗೆ ಮುಂಖಾತರ ವಿಲೇವಾರಿ ಮಾಡುವ ಬಗ್ಗೆ**

**ಪ್ರಟಕಣೆ**

ಬೀದರ ಜಿಲ್ಲೆ ಬಸವಕಲ್ಯಾಣ, ತಾಲೂಕಿನ ಈ ಕೆಳಕಂಡ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು2025-26 ನೇ ಸಾಲಿನ ಮೀನುಗಾರಿಕೆ ಫಸಲಿ ವರ್ಷದಿಂದ 2029-30 ನೇ ಸಾಲಿನ ಫಸಲಿನ ವರ್ಷದವರೆಗೆ (ಅಂದರೆ ದಿನಾಂಕ 01-07-2025 ರಿಂದ 30-06-2030) ಗರಿಷ್ಠ ಐದು (05) ವರ್ಷಗಳ ಅವಧಿಗೆ ಸರಕಾರದ ನಿಯಮಗಳ ಮೇರೆಗೆ ಅರ್ಹ ಮೀನುಗಾರರ ಸಹಕಾರ ಸಂಘ/ರೈತ ಮೀನುಗಾರರ ಉತ್ಪಾದಕರ ಸಂಸ್ಥೆ(FFPO) ನೇರ ಗುತ್ತಿಗೆ ನೀಡಲಾಗುವುದು.

ವಿಲೇವಾರಿ ಮಾಡಲು ಪ್ರಸ್ತಾಪಿಸಿರುವ ಸರ್ಕಾರಿ ಜಲಸಂಪನ್ಮೂಲಗಳ (ಕೆರೆ /ಜಲಾಶಯದ) ವಿವರ

| ಕ್ರಂ | ಜಲಸಂಪನ್ಮೂಲದ ಹೆಸರು | ಗ್ರಾಮ/ಹೋಬಳಿ | ಜಲವಿಸ್ತೀರ್ಣ/ ಅಚ್ಚುಕಟ್ಟು ಪ್ರದೇಶ (ಹೇಕ್ಟರು ಗಳಲ್ಲಿ ) | ಗುತ್ತಿಗೆ ಮೊತ್ತ (ರೂ.ಗಳಲ್ಲಿ ) | ಭದ್ರತಾ ಠೇವಣಿ ಮೊತ್ತ (ರೂ.ಗಳಲ್ಲಿ) |
|---|---|---|---|---|---|
| 01 | ಚುಳಕಿನಾಲಾ ಜಲಾಶಯ | ಮುಸ್ತಾಪೂರ | 757 /4047 | 148385/- | 37096/- |
| 02 | ಕೋಹಿನೂರ ಕೆರೆ | ಕೋಹಿನೂರ | 120/15.12 | 34536/- | 8634/- |
| 03 | ಅಟ್ಟೂರ ಕೆರೆ | ಅಟ್ಟೂರ | 76/9.76 | 1687/- | 422/- |

ಮೇಲಕಂಡ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು( ಅನುಬಂಧ 10) ಪಡೆಯಲು ಇಚ್ಚಿಸಿರುವ ಅರ್ಹ ಮೀನುಗಾರರ ಸಹಕಾರ ಸಂಘ ಹಾಗೂ ರೈತ ಮೀನು ಉತ್ಪಾದಕರ ಸಂಸ್ಥೆ (FFPO) ಮಾತ್ರ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ದಿನಾಂಕ: 20-08-2025 ರ ಒಳಗಾಗಿ ಕಛೇರಿಯ ವೇಳೆಯಲ್ಲಿ ಈ ಕಛೇರಿಗೆ ಸಲ್ಲಿಸತಕ್ಕದು ನಿಗದಿತ ಅವಧಿ ನಂತರ ಸಲ್ಲಿಸುವ ಅರ್ಜಿಯನ್ನು ಪರಿಗಣಿಸುವುದಿಲ್ಲ.

ಗುತ್ತಿಗೆ ಪಡೆಯಲು ಸಲ್ಲಿಸಬೇಕಾದ್ ಅರ್ಜಿಯನ್ನು (ಅನುಬಂಧ -9) ಷರತ್ತು ಮತ್ತು ನಿಬಂಧಗಳು (ಅನುಬಂಧ -11) ಮತ್ತು ಗುತ್ತಿಗೆದಾರರು ಬರೆದುಕೊಡಬೇಕಾದ ಗುತ್ತಿಗೆ ಕರಾರಿನ ಮುಚ್ಚಳಿಕೆ ಪತ್ರದ (ಅನುಬಂಧ 10) ರ ಪ್ರತಿಗಳನ್ನು ಕಛೇರಿಯ ವೇಳೆಯಲ್ಲಿ ಪಡೆಯಬಹುದು.

ವಿಶೇಷ ಸೂಚನೆ-ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿ ಬಸವಕಲ್ಯಾಣ ರವರನ್ನು ಸಂಪರ್ಕಿಸಬಹುದು.

ಮೀನುಗಾರಿಕೆ ಸಹಾಯಕ ನಿರ್ದೇಶಕರು
ಮೀನುಗಾರಿಕೆ ಸಹಾಯಕ ನಿರ್ದೇಶಕರು
ಕಛೇರಿ ಬಸವಕಲ್ಯಾಣ


## ಕಾರ್ಯಕ್ರಮಕ್ಕೆ ಶಿಸ್ತುಬದ್ಧ ಸಿದ್ಧತೆಯಾಗಲಿ

ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಸಚಿವರು, ಶಾಸಕರು, ನಿಗಮ, ಸಮಿತಿ, ಪ್ರಾಧಿಕಾರದ ಅಧ್ಯಕ್ಷರು, ಹಿರಿಯ ಮುಖಂಡರು, ಗಣ್ಯರು, ಹಿರಿಯ ಅಧಿಕಾರಿಗಳು ಮತ್ತು ಇನ್ನೀತರರಿಗೆ ಶಿಷ್ಟಾಚಾರದಂತೆ ಆಸನದ ವ್ಯವಸ್ಥೆಯಾಗಬೇಕು.

ಸಮಾರಂಭದಲ್ಲಿ ಗೊಂದಲಕ್ಕೆ ಅವಕಾಶವಿಲ್ಲದಂತೆ ಸ್ವಾಗತ ಭಾಷಣ, ಸನ್ಮಾನ, ಸ್ಮರಣಿಕೆ ವಿತರಣೆ, ಸೌಲಭ್ಯಗಳ ವಿತರಣೆ ಎಲ್ಲವೂ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು.

ಕಂಪನಿಯ ಅಧಿಕಾರಿಗಳು ಮುಂಚಿತವಾಗಿ ಕಾರ್ಯಕ್ರಮದ ವಿವರದ ಪಟ್ಟಿ ತಯಾರಿಸಿ ಅದಕ್ಕೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.ಕಾರ್ಯಕ್ರಮಕ್ಕೆ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧಿಕಾರಿಗಳು, ಸಿಬ್ಬಂದಿ, ಕಂಪನಿಯ ಕಾರ್ಮಿಕರು, ಕಾರ್ಮಿಕರ ಕುಟುಂಬ ವರ್ಗದವರು ಸೇರಿದಂತೆ ಹಟ್ಟಿ, ಲಿಂಗಸಗೂರು, ಸಿರವಾರ ಸೇರಿದಂತೆ ಬೇರೆ ಬೇರೆ ಕಡೆಯಿಂದ ಆಗಮಿಸುವ ಸಾರ್ವಜನಿಕರಿಗೆ ಸರಿಯಾದ ರೀತಿಯಲ್ಲಿ ಊಟ ಉಪಹಾರ ಸಿದ್ಧತಾ ಕಾರ್ಯವನ್ನು ಈಗಿನಿಂದಲೇ ಆರಂಭಿಸಬೇಕು. ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳ ವ್ಯವಸ್ಥೆಗೆ ಏರ್ಪಾಡು ಮಾಡಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಬ್ಯಾನರ್ಸ್, ಹೋರ್ಡಿಂಗ್ಸ್, ಬ್ಯಾಡ್ಜ್ ಮುದ್ರಣ ಕಾರ್ಯ ಆಗಬೇಕು. ಜನಪ್ರತಿನಿಧಿಗಳಿಗೆ, ಗಣ್ಯರಿಗೆ, ಮಾಧ್ಯಮ ಪ್ರತಿನಿಧಿಗಳಿಗೆ, ಅಧಿಕಾರಿಗಳು, ಸಿಬ್ಬಂದಿ, ಕಂಪನಿಯ ಕಾರ್ಮಿಕರು, ಸ್ವಯಂ ಸೇವಕರು ಹಾಗೂ ಇನ್ನೀತರರಿಗೆ ಪ್ರತ್ಯೇಕವಾಗಿ ಪಾಸುಗಳನ್ನು ವಿತರಿಸಿ ಕಾರ್ಯಕ್ರಮದಲ್ಲಿ ಅಚ್ಚುಕಟ್ಟುತನ ಕಾಯ್ದುಕೊಳ್ಳಬೇಕು ಎಂದು ತಿಳಿಸಿದರು.ಕಾರ್ಯಕ್ರಮದ ಬಗ್ಗೆ ವ್ಯಾಪಕ ಪ್ರಚಾರ ಮಾಡಬೇಕು. ಆಹಾರ ಸಿದ್ಧತೆ, ವಿತರಣೆಯಲ್ಲಿ ಯಾವುದೇ ರೀತಿಯ ಲೋಪಗಳು ಆಗದಂತೆ ಆಹಾರ ಪರೀಕ್ಷೆ ಮತ್ತು ಕುಡಿಯುವ ನೀರಿನ ಪರೀಕ್ಷೆಗೆ ಆಹಾರ ಇಲಾಖೆಯ ಅಧಿಕಾರಿಗಳು ಮುತುವರ್ಜಿ ವಹಿಸಬೇಕು. ಕಾರ್ಯಕ್ರಮದ ಸ್ಥಳದಲ್ಲಿ ಅಂಬ್ಯುಲೆನ್ಸ್, ಅಗತ್ಯ ಸಂಖ್ಯೆಯಲ್ಲಿ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಇರುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ನೋಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರುವುದರಿಂದ ಜನಸಂದಣಿಯ ನಿಯಂತ್ರಣಕ್ಕೆ ಚಿನ್ನದ ಗಣಿ ಕಂಪನಿಯ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆಯು ಈಗಿನಿಂದಲೇ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಸಾರ್ವಜನಿಕರು, ಗಣ್ಯರು, ಜನಪ್ರತಿನಿಧಿಗಳು ಸರಳವಾಗಿ ಬಂದು ಹೋಗಲು ಪ್ರತ್ಯೇಕ ಮಾರ್ಗದ ವ್ಯವಸ್ಥೆಗೆ ಅಗತ್ಯ ಸಂಖ್ಯೆಯಲ್ಲಿ ಬ್ಯಾರಿಕೇಡ್ ಅಳವಡಿಸಲು ಸಿದ್ಧತೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿಗಳು, ಗಣಿ ಕಂಪನಿಯ ಅಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.ಇದೇ ಸಂದರ್ಭದಲ್ಲಿ ಲಿಂಗಸ್ಗೂರು ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ಲಿಂಗಸೂಗೂರು ತಹಶೀಲ್ದಾರ್ ಕೆ.ಸತ್ಯವಂತಿ, ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕರಾದ ಪ್ರಕಾಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಕಂಪನಿಯ ವಿವಿಧ ವಿಭಾಗದ ಅಧಿಕಾರಿಗಳು ಇದ್ದರು.

## ಸಂಗ್ರಹ ಬೆಳವಣಿಗೆ ಕುಸಿತ

ರೂ.ಗಳಿಂದ 7.5% ಹೆಚ್ಚಾಗಿದೆ. ಆದಾಗ್ಯೂ, ಮರುಪಾವತಿಗಳಿಗೆ ಹೊಂದಾಣಿಕೆ ಮಾಡಿದ ನಂತರ, ನಿವ್ವಳ ಉಖಖಿ ಆದಾಯವು 1,68,588 ಕೋಟಿ ರೂ.ಗಳಿಗೆ ತಲುಪಿದೆ, ಇದು ಜುಲೈ 2024 ರಲ್ಲಿ ಸಂಗ್ರಹಿಸಲಾದ 1,65,800 ಕೋಟಿ ರೂ.ಗಳಿಗಿಂತ ಸ್ವಲ್ಪ ಹೆಚ್ಚಾಗಿದೆ.

ದೇಶೀಯ ನಿವ್ವಳ ಆದಾಯವು ಸ್ಥಿರವಾಗಿಯೇ ಇದ್ದು, 0.2% ರಷ್ಟು ಸ್ವಲ್ಪ ಕಡಿಮೆಯಾಗಿ 1.26 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ, ಇದು ದೇಶೀಯ ಬಳಕೆಯಲ್ಲಿನ ನಿಧಾನಗತಿ ಅಥವಾ ಕಡಿಮೆ ತೆರಿಗೆ ಅನುಸರಣೆಯನ್ನು ಸೂಚಿಸುತ್ತದೆ. ಮತ್ತೊಂದೆಡೆ, ಆಮದುಗಳಿಂದ ನಿವ್ವಳ ಆದಾಯ ಶೇ.7.5 ರಷ್ಟು ಹೆಚ್ಚಾಗಿ 42,548 ಕೋಟಿ ರೂ.ಗಳಿಗೆ ತಲುಪಿದೆ. ಇದು ಆಮದು ಮಾಡಿದ ಸರಕುಗಳ ಮೇಲಿನ ಒಟ್ಟು ಐಜಿಎಸ್ಟಿ ಮತ್ತು ಸೆಸ್ ಸಂಗ್ರಹದಲ್ಲಿ ಶೇ. 9.7 ರಷ್ಟು ಹೆಚ್ಚಳದಿಂದ ಉಂಟಾಗಿದೆ.

ಮರುಪಾವತಿಗಳು ನಿವ್ವಳ ಆದಾಯದ ಮೇಲೆ ಪರಿಣಾಮ ಬೀರುತ್ತಲೇ ಇದ್ದು, ಜುಲೈನಲ್ಲಿ ಒಟ್ಟು ಉಖಖಿ ಮರುಪಾವತಿಗಳು ಶೇ. 66.8 ರಷ್ಟು ಹೆಚ್ಚಾಗಿ 27,147 ಕೋಟಿ ರೂ.ಗಳಿಗೆ ತಲುಪಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ ಇದು ಶೇ. 16,275 ಕೋಟಿ ರೂ.ಗಳಷ್ಟಿತ್ತು. ದೇಶೀಯ ವಹಿವಾಟುಗಳಿಗೆ ಮರುಪಾವತಿಗಳು ದ್ವಿಗುಣಗೊಂಡು ?16,983 ಕೋಟಿಗಳಿಗೆ ತಲುಪಿದ್ದರೆ, ರಫ್ತು ಸಂಬಂಧಿತ ಮರುಪಾವತಿಗಳು ಸಹ ವರ್ಷದಿಂದ ವರ್ಷಕ್ಕೆ ಶೇ. 20 ರಷ್ಟು ಹೆಚ್ಚಾಗಿವೆ.

ಘಟಕಗಳಲ್ಲಿ, ಐಜಿಎಸ್ಟಿ ಒಟ್ಟು ಜಿಎಸ್ಟಿ ಆದಾಯದಲ್ಲಿ ಅತಿ ದೊಡ್ಡ ಪಾಲು ?1.03 ಲಕ್ಷ ಕೋಟಿಗಳಾಗಿದ್ದು, ಎಸ್ಜಿಎಸ್ಟಿ 44,059 ಕೋಟಿಗಳಾಗಿದ್ದು, ಸಿಜಿಎಸ್ಟಿ 35,470 ಕೋಟಿಗಳಾಗಿದೆ. ಪರಿಹಾರ ಸೆಸ್ ರೂ. 12,670 ಕೋಟಿಗಳ ಕೊಡುಗೆ ನೀಡಿದೆ.

ಸಂಚಿತ ಆಧಾರದ ಮೇಲೆ, ಏಪ್ರಿಲ್-ಜುಲೈ 2025 ರ ಅವಧಿಯಲ್ಲಿ ಒಟ್ಟು ಜಿಎಸ್‌ಟಿ ಸಂಗ್ರಹವು ವರ್ಷದಿಂದ ವರ್ಷಕ್ಕೆ ಶೇ. 10.7 ರಷ್ಟು ಹೆಚ್ಚಾಗಿ 8.18 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ. ಇದೇ ಅವಧಿಯಲ್ಲಿ ನಿವ್ವಳ ಆದಾಯವು ಶೇ. 8.4 ರಷ್ಟು ಹೆಚ್ಚಾಗಿ 7.11 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ.

ರಾಜ್ಯವಾರು ಸಾಧನೆ

ಹಲವಾರು ದೊಡ್ಡ ರಾಜ್ಯಗಳು ಜಿಎಸ್‌ಟಿ ಆದಾಯದಲ್ಲಿ ಆರೋಗ್ಯಕರ ಬೆಳವಣಿಗೆಯನ್ನು ವರದಿ ಮಾಡಿವೆ. ಜುಲೈ ಸಂಗ್ರಹದಲ್ಲಿ ಬಿಹಾರ ಶೇ. 16 ರಷ್ಟು ಹೆಚ್ಚಳ ಕಂಡರೆ, ಮಧ್ಯಪ್ರದೇಶ ಮತ್ತು ಆಂಧ್ರಪ್ರದೇಶ ಕ್ರಮವಾಗಿ ಶೇ. 18 ಮತ್ತು ಶೇ. 14 ರಷ್ಟು ಬೆಳವಣಿಗೆಯನ್ನು ಕಂಡಿವೆ. ಅತಿ ಹೆಚ್ಚು ಕೊಡುಗೆ ನೀಡುವ ಮಹಾರಾಷ್ಟ್ರ ಶೇ. 6 ರಷ್ಟು ಹೆಚ್ಚಳವನ್ನು ವರದಿ ಮಾಡಿದೆ, ಕರ್ನಾಟಕ ಮತ್ತು ತಮಿಳುನಾಡು ಶೇ. 7-8 ರಷ್ಟು ಬೆಳವಣಿಗೆಯನ್ನು ಕಂಡಿವೆ.ಮತ್ತೊಂದೆಡೆ, ಮಣಿಪುರ (-36%), ಮಿಜೋರಾಂ (-21%), ಮತ್ತು ಜಾರ್ಖಂಡ್ (-3%) ಸೇರಿದಂತೆ ಕೆಲವು ರಾಜ್ಯಗಳು ಜಿಎಸ್‌ಟಿ ಸಂಗ್ರಹದಲ್ಲಿ ಕುಸಿತವನ್ನು ದಾಖಲಿಸಿವೆ.

## ಆ.5 ರಿಂದ ರಾಜ್ಯಾದ್ಯಂತ
### ಅನಿರ್ದಿಷ್ಟಾವಧಿ ಮುಷ್ಕರ:ಬಸ್ ಬಂದ್




ಕಲಬುರಗಿ: ಆ.1: ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳ ನೌಕರರ 38 ತಿಂಗಳು ಹಿಂಬಾಕಿ ವೇತನ ಪಾವತಿಸುವುದೂ ಸೇರಿದಂತೆ ಹಲವಾರು ಬೇಡಿಕೆಗಳನ್ನುಮುಂದಿಟ್ಟುಕೊಂಡು ಆಗಸ್ಟ್5ರಿಂದ ರಾಜ್ಯಾದ್ಯಂದ ಅನಿರ್ಧಿಷ್ಟಾವಧಿ ಮುಷ್ಕರ,ಬಸ್ ಬಂದ್ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯ ಕಲ್ಯಾಣ ಕರ್ನಾಟಕ ಸಮಿತಿಯ ಅಧ್ಯಕ್ಷ ಚಂದ್ರಕಾಂತ ಗದ್ದಗಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಸಾರಿಗೆ ಸಚಿವರಿಗೆ ಬೇಡಿಕೆಗಳ ಕುರಿತು ಚರ್ಚಿಸಿ ಇತ್ಯರ್ಥಪಡಿಸಲು ಹಲವಾರು ಬಾರಿ ಮನವಿ ಮಾಡಲಾಗಿದೆ. ಕಳೆದ 2024ರ ಅಕ್ಟೋಬರ್ 9ರಂದು ಸಾರಿಗೆ ಸಚಿವರು ಜಂಟಿ ಕ್ರಿಯಾ ಸಮಿತಿಯ ಸಭೆಯನ್ನು ವಿಧಾನಸೌಧದಲ್ಲಿ ಕರೆದಿದ್ದು, ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಟಿಕೆಟ್ ದರ ಹೆಚ್ಚಿಸದ ಹೊರತು ಸಾರಿಗೆ ನೌಕರರ ವೇತನ ಪರಿಷ್ಕರಣೆ ಮಾಡುವುದು ಕಷ್ಟ ಸಾಧ್ಯ ಎಂದು ಹೇಳಿದರು. ಹೀಗಾಗಿ ಸಭೆಯಲ್ಲಿ 38 ತಿಂಗಳ ಹಿಂಬಾಕಿ ವೇತನ ಹಾಗೂ 2024ರ ಜನವರಿ 1ರಿಂದ ವೇತನ ಪರಿಷ್ಕರಣೆಯ ಕುರಿತು ತೀರ್ಮಾನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೆಳಗಾವಿಯ ಅಧಿವೇಶನದಲ್ಲೂ ಸಹ ಧರಣಿ ಸತ್ಯಾಗ್ರಹ ಮಾಡಲಾಗಿತ್ತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಆಗಮಿಸಿದಾಗ ಅವರಿಗೆ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳುವ ಕುರಿತು ನೊಟಿಸ್ ನೀಡಲಾಯಿತು. ಹೀಗಾಗಿ ಮುಷ್ಕರ ಆರಂಭಿಸಲಾಗುವುದು ಎಂದು ಹೇಳಿದ ಅವರು, ಕಳೆದ 2024ರ ಡಿಸೆಂಬರ್ 29ರಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಆಧ್ಯಕ್ಷತೆಯಲ್ಲಿ ದ್ವಿಪಕ್ಷೀಯ ಸಭೆ ಜರುಗಿದ್ದು, ಸಭೆ ಕರೆಯುವ ಭರವಸೆ ನೀಡಿದ್ದರಿಂದ ಮುಷ್ಕರ ಕೈಬಿಡಲು ನಿರ್ಧರಿಸಲಾಗಿತ್ತು ಎಂದರು.

## ಕಿಶೋರಕುಮಾರ ೯೬ನೇ ಜನ್ಮದಿನಾಚರಣೆಯ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.1: ಇದೆ ಅಗಸ್ಟ್ 4 ರಂದು ಸಾಯಂಕಾಲ 6 ಗಂಟೆಗೆ ಜೈ ಮಾತಾ ದೀ ಮ್ಯೂಸಿಕ್ ಲವ್ವರ್ಸ್ ಆರ್ಕೆಸ್ಟ್ರಾ ವತಿಯಿಂದ ಎಸ್.ವಿ.ಪಿ.ಸಕ ಹತ್ತಿರ ಇರುವ ಕನ್ನಡ ಭವನದಲ್ಲಿ ಖ್ಯಾತ ಹಿನ್ನಲೆ ಗಾಯಕರಾದ ಕಿಶೋರಕುಮಾರ ಅವರ 96ನೇ ಹುಟ್ಟು ಹಬ್ಬದ ಹಿನ್ನಲೆಯಲ್ಲಿ ರಸ ಮಂಜರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಂಗೀತಾಸ್ತಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ತಂಡದ ನಾಯಕರಾದ ಮಧುಸೂಧನ ಮಲ್ಲಾಬಾದಿಯವರು ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಹಿರೇಮಠ ಸಂಸ್ಥಾನದಲ್ಲಿ ವ್ಯಸನಮುಕ್ತ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.1: ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ದುಶ್ಚಟ, ದುರ್ಗುಣಗಳಿಂದ ದೂರ ಉಳಿದು ಸುಂದರ ಜೀವನ ರೂಪಿಸಿ ಕೊಳ್ಳಬೇಕು ಎಂದು ಹಿರೇಮಠ ಸಂಸ್ಥಾನದ ಶಿವಬಸವ ಸ್ವಾಮೀಜಿ ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದ ಗುರುಪ್ರಸಾದ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಇಳಕಲ್‌ನ ಲಿಂಗೈಕ್ಯ ಡಾ.ಮಹಾಂತ ಸ್ವಾಮೀಜಿ ಈ ನಾಡಿಗೆ ಅದ್ಭುತ ಕೊಡುಗೆ ನೀಡಿದ್ದಾರೆ. ತಮ್ಮ ಬದುಕಿನುದ್ದಕ್ಕೂ ಧರ್ಮ, ಬಸವತತ್ವ ಪ್ರಚಾರ ಪ್ರಸಾರದ ಜತೆಗೆ ಜೋಳಿಗೆ ಹಿಡಿದು ಭಕ್ತರಲ್ಲಿನ ವ್ಯಸನಗಳನ್ನು ಬಿಡಿಸಿ ಸಾವಿರಾರೂ ಭಕ್ತರ ಬದುಕು ಉಜ್ವಲಗೊಳಿಸಿದ್ದಾರೆ.ಆ ಕಾರಣಕ್ಕಾಗಿಯೇ ಆ.1ರ ಪೂಜ್ಯರ ಜನ್ಮದಿನವನ್ನು ರಾಜ್ಯ ಸರಕಾರ ವ್ಯಸನಮುಕ್ತ ದಿನಾಚರಣೆವನ್ನಾಗಿ ಆಚರಿಸಿ ಪೂಜ್ಯರಿಗೆ ಗೌರವ ಸಲ್ಲಿಸುತ್ತಿದೆ. ಅದೇ ಮಾದರಿಯಲ್ಲಿ ಈ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹತ್ತಾರೂ ವರ್ಷಗಳಿಂದ ಗುರುಬಸವ ಪಟ್ಟದ್ದೇವರು ಕೂಡ ಜಾಗೃತಿ ಮೂಡಿಸಿ ಭಕ್ತರಲ್ಲಿ ಬೇರೂರಿರುವ ದುಶ್ಚಟಗಳನ್ನು ಬಿಡಿಸುವ ಪ್ರಯತ್ನ ಮಾಡುತ್ತಿದ್ದಾರೆ. ಅಂತಹ ಪೂಜ್ಯರ ಆದರ್ಶ ಎಲ್ಲ ವಿದ್ಯಾರ್ಥಿಗಳಿಗೆ ಆದರ್ಶವಾಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಸಿದ್ರಾಮ ರಾಜಪೂರೆ, ನಿರ್ಮಲಾ ಟೆಂಕಾಳೆ, ರೇಖಾ ತೇಲಿ, ಅಂಬಿಕಾ ಮಾಟೋರೆ, ವಿಜಯಲಕ್ಷ್ಮಿ ?? ಬಿರಾದಾರ್, ಶಾಮರಾವ, ಸುಭಾಷ ಸೂರ್ಯವಂಶಿ, ಪಾರ್ವತಿ ಮೇತ್ರೆ, ಭಾಗ್ಯಶ್ರೀ, ಸಂಗೀತಾ, ಅಂಬಾಜಿ ಸೇರಿದಂತೆ ಹಲವರು ಇದ್ದರು. ಮುಖ್ಯಗುರು ಬಾಬು ಬೆಲ್ದಾಳೆ ನಿರೂಪಿಸಿದರು. ಸವಿತಾ ಭೂರೆ ವಂದಿಸಿದರು.

## ತಾಯಿ ಎದೆ ಹಾಲು ಅಮೃತಕ್ಕೆ ಸಮಾನ:ಸವಿತಾ ರಾಂಪುರೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.1:ತಾಯಿ ಎದೆ ಹಾಲು ಅಮೃತಕ್ಕೆ ಸಮಾನ, ಮಗು ಜನಿಸಿದ ತಕ್ಷಣ ಎದೆ ಹಾಲು ಉಣಿಸಬೇಕು ಎಂದು ಅಂಗಡಿ ಕಾರ್ಯಕರ್ತೆ ಸವಿತಾ ರಾಂಪುರೆ ಹೇಳಿದರು.

ತಾಲೂಕಿನ ಡಿಗ್ಗಿ ಅಂಗನವಾಡಿ ಕೇಂದ್ರದಲ್ಲಿ

ಶುಕ್ರವಾರ ನಡೆದ ವಿಶ್ವ ಹಾಲುಣಿಸುವ ದಿನಾಚರಣೆ ನಿಮಿತ್ತ ಸ್ತನ್ಯಪಾನದ ಮಹತ್ವ ಬಗ್ಗೆ ಅವರು ಮಾತನಾಡಿದರು.

ಎದೆಹಾಲು ಉಣಿಸುವುದರಿಂದ ಮಗುವಿನಲ್ಲಿ ರೋಗನಿರೋಧಕ ಶಕ್ತಿ ಬಲಗೊಳ್ಳುತ್ತದೆ ಮತ್ತು ತಾಯಿ ಮಗುವಿನ ಬಾಂಧವ್ಯ ವೃದ್ಧಿಸುತ್ತದೆ,ನಿಯಮಿತವಾಗಿ ಮೊದಲ 6 ತಿಂಗಳು ಎದೆ ಹಾಲನ್ನೇ ನೀಡಬೇಕು ನಂತರ ಎಲ್ಲಿಯವರೆಗೆ ಸಾಧ್ಯವೋ ಅಲ್ಲಿಯವರೆಗೆ ಎದೆ ಹಾಲು ನೀಡಬೇಕು.

ಎದೆಹಾಲನ್ನುಉಣಿಸುವುದರಿಂದ ಇನ್ನೊಂದು ಮಗುವಿನ ಅಂತರವನ್ನು ಇಡಲು (ಗರ್ಭ ಧರಿಸದಂತೆ) ಸಹಕಾರಿಯಾಗುತ್ತದೆ. ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರಾದ ಸುಗುಣವತಿ ಬಿರಾದಾರ, ಆಶಾ ಕಾರ್ಯಕರ್ತೆ ದೇವಿಕಾ ಪಂಚಾಳ, ಸಹಾಯಕ ಸಿಬ್ಬಂದಿ ವಿಮಲಾ ಮೆಹತ್ರೆ ಮತ್ತು ಮಕ್ಕಳು ಹಾಗೂ ತಾಯಿಂದೆರು ಇದ್ದರು.

# ಪತ್ರಿಕೆಗಳು ಸಮಾಜದ ಕನ್ನಡಿಯಾಗಿವೆ:ತಹಸೀಲ್ದಾರ ಪಂಚಾಳ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಪತ್ರಕರ್ತರ ವರದಿ ಜನರ ಸಂವೇದನೆಗಳೊಂದಿಗೆ ಇರುವುದರಿಂದ ಸಮಾಜದಲ್ಲಿನ ಸೂಕ್ಷ್ಮತೆಗಳಬಗ್ಗೆಒಳನೋಟವಿರುತ್ತದೆ. ಈ ಕಾರಣಕ್ಕಾಗಿ ಪತ್ರಕರ್ತರ ವರದಿ ಸಮಾಜದ ಕನ್ನಡಿ ಎಂದು ಚಿಟಗುಪ್ಪದ ಜ್ಞಾನಗಂಗಾ ವಿಜ್ಞಾನ ಪದವಿ ಪೂರ್ವ ಕಾಲೇಜು ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ತಹಸೀಲ್ದಾರ ಮಂಜುನಾಥ್ ಪಂಚಾಳ ಮಾತನಾಡುತ್ತಾ ನುಡಿದರು. ಪತ್ರಕರ್ತರ ಲೇಖನಿಗೆ ಬಹುದೊಡ್ಡ ಹೊಣೆ ಇದೆ. ಅದನ್ನು ಎಚ್ಚರದಿಂದ ಬಳಸಬೇಕು. ಜವಾಬ್ದಾರಿ ಪತ್ರಕರ್ತ ದೇಶವನ್ನು ಕಾಯುವ ಸೈನಿಕರಿದ್ದಂತೆ. ಪ್ರಜಾಪ್ರಭುತ್ವ ಉಳಿಯುವಲ್ಲಿ ಪತ್ರಿಕಾ ಮಾಧ್ಯಮದ ಕೊಡುಗೆ ಅನನ್ಯ ಪತ್ರಿಕೆಗೆ ಹಾಗೂ ಪತ್ರಕರ್ತರಿಗೆ ಪತ್ರಿಕಾ ಧರ್ಮವೇ ಧರ್ಮವಾಗಬೇಕು ಎಂದರು. ಅನ್ಯಾಯದ ವಿರುದ್ಧ ಧ್ವನಿಯಾಗಿ ಸರ್ಕಾರದ ಮುಂದೆ, ಸಮಾಜದ ಮುಂದೆ ಬಿಚ್ಚಿಡುವ ಕೆಲಸ ಪತ್ರಿಕಾ ಮಾಧ್ಯಮದವರು ಮಾಡುತ್ತಾರೆ ಎಂದು ನುಡಿದರು. ಆಧುನಿಕ ಕಾಲದಲ್ಲಿ ಪತ್ರಕರ್ತರ ಕಾರ್ಯ ಅನೇಕ ಸವಾಲುಗಳಿಂದ ಕೂಡಿದೆ. ಪತ್ರಕರ್ತರು ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳನ್ನು ತಮ್ಮ ಹರಿತವಾದ ಬರವಣಿಗೆಯಿಂದ ಎಚ್ಚರಿಸುವ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡುತ್ತಿದ್ದಾರೆ ಎಂದು ಶ್ಲಾಘಿಸಿದರು. ಈ ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಹುಮನಾಬಾದ ಪತ್ರಕರ್ತ ಸಂಘದ ಅಧ್ಯಕ್ಷರಾದ ದುರ್ಯೋಧನ ಹೂಗಾರ್‌ರವರು ಮಾತನಾಡಿ, ಪತ್ರಕರ್ತರು ನಿಸ್ವಾರ್ಥ, ಸೇವಾ ಮನೋಭಾವದಿಂದ ಸಮಾಜದಲ್ಲಾಗುವ ಅನ್ಯಾಯವನ್ನು ಬಿತ್ತರಿಸುವ ಕಾರ್ಯ ಮಾಡುತ್ತಾರೆ. ಅವರಿಗೆ ಎದುರಾಗುವ ಸಮಸ್ಯೆಗಳು ಲೆಕ್ಕಿಸದೆ ವರದಿ ಮಾಡುವ ಕಾರ್ಯ ಮಾಡುತ್ತಾರೆ ಎಂದರು. ಪತ್ರಕರ್ತರು ಯಾರೇ ಆಗಲಿ ನಿಮ್ಮ ಸುದ್ದಿಗಳನ್ನು ಮಾಡಬೇಕಾದರೆ ದುಡ್ಡು ಇರುವುದಿಲ್ಲ, ದುಡ್ಡು ಯಾವುದಕ್ಕೆ ಇರುತ್ತದೆ ಎಂದರೆ ಅಡವೆಟೇಜಮೆಂಟ್‌ಗಳನ್ನು ಇರುತ್ತವೆ ಅದಕ್ಕೆ ದುಡ್ಡು ಕೊಡಬಹುದು. ಸುದ್ದಿಗಳಿಗೆ ಯಾರೂ ದುಡ್ಡು ಕೊಡಬೇಡಿ ಎಂದು ತಿಳಿ ಹೇಳಿದರು. ಸಂಜುಕುಮಾರ ಜುನ್ನಾ ಮಾತನಾಡಿ, ಇಂದಿನ ದಿನದಲ್ಲಿ ಮಕ್ಕಳಿಂದ ಹಿಡಿದು ವಯೋವೃದ್ಧರೂ ಸಹ ವಿದೇಶಿ ವ್ಯಾಮೋಹಕ್ಕೊಳಗಾಗಿ ಓದುವ ಹವ್ಯಾಸವನ್ನೆ? ಮರೆಯುತಿದ್ದಾರೆ. ಮೊಬೈಲ್ ಗೀಳಿಗೆ ಅಂಟಿಕೊಂಡು ತಮ್ಮ ಜ್ಞಾನದ ಅರಿವನ್ನೆ? ಅಂಧಕಾರಕ್ಕೆ ತಳ್ಳುತ್ತಿದ್ದಾರೆ. ಇಡೀ ಜಗತ್ತಿನಲ್ಲಿ ಬದಲಾವಣೆಯಾಗಬೇಕಾದರೆ ಅದು ಶಿಕ್ಷಣದಿಂದ ಮಾತ್ರ ಸಾಧ್ಯ. ಹೆಚ್ಚಾಗಿ ಒಳ್ಳೆಯ ಪುಸ್ತಕಗಳನ್ನು ಹಾಗೂ ದಿನಪತ್ರಿಕೆಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದರು.

ಪರಿಸರ ಪ್ರೇಮಿ ಶೈಲೇಂದ್ರ ಕೌಡಿ ಮಾತನಾಡಿ ಪ್ರಸ್ತುತ ಸಂದರ್ಭದಲ್ಲಿ ಪರಿಸರವು ತುಂಬಾ ಹಾಳಾಗಿದೆ ಅದನ್ನು ಸಂರಕ್ಷಿಸುವ ಜವಾಬ್ದಾರಿ ನಮ್ಮ ಮೇಲಿದೆ. ಪತ್ರಕರ್ತರು ಸಂವಿಧಾನದಲ್ಲಿನ ಪ್ರಜಾಪ್ರಭುತ್ವದಲ್ಲಿನ ಆಶಯಗಳನ್ನು ಎತ್ತಿ ಹಿಡಿಯುವ ಕೆಲಸ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದಲಿ ವಿಶೇಷ ಉಪನ್ಯಾಸ ಶಾಂತಕುಮಾರ್ ಪಾಟೀಲ್ ಡಿವಿಜಿಯವರ ಸಾಹಿತ್ಯ ಹಾಗೂ ಬದುಕು ಬರಹವನ್ನು ಕುರಿತು ಮಾತನಾಡಿದರು. ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದರು ಅನೀಲಕುಮಾರ ಸಿಂಧೆ ಕಾರ್ಯಕ್ರಮದ ಅಧ್ಯಕ್ಷತೆಯನು ವಹಿಸಿ ಮಾತನಾಡಿ, ಪತ್ರಕರ್ತರು ಸಾರ್ವಜನಿಕರನ್ನು ಜಾಗೃತಿಗೊಳಿಸುವ, ಮಾಹಿತಿ ನೀಡುವ, ಜವಾಬ್ದಾರಿಯುತ ವ್ಯಕ್ತಿಗಳಾಗಿದ್ದಾರೆ ಸತ್ಯಗಳನ್ನು ಪ್ರೋತ್ಸಾಹಿಸುವುದು ಪತ್ರಕರ್ತರಿಗೆ ಭದ್ರತೆ ನೀಡುವುದು ಅವರನ್ನು ಪ್ರೊತ್ಸಾಹಿಸುವ, ಪ್ರೇರೇಪಿಸುವುದು ಸರಕಾರದ ಕೆಲಸವಾಗ ಬೇಕು ಹಾಗೂ ಪತ್ರಿಕೋದ್ಯಮವು ದೇಶದ ನಾಲ್ಕನೇ ಕಂಬವೆಂದು ಪರಿಗಣಿಸಲಾಗುತ್ತದೆ ಎಂದರು. ಈ ಕಾರ್ಯಕ್ರಮ ದಿವ್ಯ ಸಾನಿಧ್ಯವನ್ನು ಪರಮ ಪೂಜ್ಯ ಗುರುಲಿಂಗ ಶಿವಾಚಾರ್ಯರು ವಹಿಸಿ ಮಾತನಾಡಿ, ಪತ್ರಕರ್ತರ ಬಗ್ಗೆ ಸಮಾಜ ಹಾಗೂ ಸರ್ಕಾರ ಗೌರವಯುತವಾಗಿ ಕಾಣಬೇಕಾಗಿದೆ. ಅಲ್ಲದೆ ಪತ್ರಕರ್ತರಿಗೆ ಎಲ್ಲಾ ವ್ಯವಸ್ಥೆಗಳು ಸಿಗುವಂತಾಗಬೇಕೆಂದು ನುಡಿದರು. ಪ್ರಾಸ್ತಾವಿಕವಾಗಿ ಸುರೇಶ ಕುಂಬಾರ ಮಾತನಾಡಿದರು. ಈ ಸಂದರ್ಭದಲ್ಲಿ ಶ್ರೀಮತಿ ಲಕ್ಷ್ಮಿ ಬಿರಾದಾರ್ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್ ಚಿಟಗುಪ್ಪ, ಹುಸಾಮೋದಿನ್ ಬಾಬಾ ಮುಖ್ಯ ಅಧಿಕಾರಿಗಳು ಪುರಸಭೆ, ಸಂಜುಕುಮಾರ ಜುನ್ನಾ, ರಾಜಪ್ಪಾ ಜಮಾದಾರ, ಪ್ರೇಮಿಳಾ ರೆಡ್ಡಿಯವರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಹುಮನಾಬಾದ ತಾಲೂಕಿನ ಹಾಗೂ ಚಿಟಗುಪ್ಪಾ ತಾಲೂಕಿನ ಪತ್ರಕರ್ತರು ಹಾಜರಿದ್ದರು. ಹುಮಬಾದ ಮತ್ತು ಚಿಟಗುಪ್ಪಾದ ಎಲ್ಲಾ ಪತ್ರಕರ್ತರಿಗೆ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಚಿಟಗುಪ್ಪಾ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ಈರಮ್ಮ ಜಮಗಿ ನಿರ್ವಹಿಸಿದರು. ಲಕ್ಷ್ಮೀಕಾಂತ ವಂದಿಸಿದರು.

ಆತ್ಮೀಯ ಪತ್ರಿಕಾ ರಂಗದ ಎಲ್ಲಾ ಗೌರವಾನ್ವಿತ ಸದಸ್ಯರಿಗೆ ಪತ್ರಿಕಾ ದಿನಾಚರಣೆ ಕಾರ್ಯಕ್ರಮಕ್ಕೆ ತಮ್ಮ ಅಮೂಲ್ಯವಾದ ಸಮಯವನ್ನು ನೀಡಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಿದಕ್ಕಾಗಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರ ಪರವಾಗಿ ಹಾಗೂ ಸಂಘದ ಎಲ್ಲಾ ಪದಾಧಿಕಾರಿಗಳ ಪರವಾಗಿ ತಮಗೆ ಹೃದಯ ಪೂರ್ವಕವಾದ ಧನ್ಯವಾದಗಳು.



**–ಅನೀಲ ಕುಮಾರ ಎಂ ಸಿಂಧೆ**
**ತಾಲೂಕ ಅಧ್ಯಕ್ಷರು ಕನ್ನಡ ಸಾಹಿತ್ಯ ಪರಿಷತ್ತು ಚಿಟಗುಪ್ಪ**

# ಮನೋರಂಜನೆ ಹೆಸರಲ್ಲಿ ಜೂಜಾಟ




ಲಿಂಗಸುಗೂರು: ತಾಲೂಕಿನಲ್ಲಿ ಮನೋರಂಜನೆ ಹೆಸರಲ್ಲಿ ಕ್ಲಬ್‌ಗಳನ್ನು ನಿರ್ಮಿಸಿಕೊಂಡು ಇಸ್ಪೀಟು ಜೂಜಾಟ ಭರ್ಜರಿಯಾಗಿ ನಡೆಯುತ್ತಿದೆ.

ಪಟ್ಟಣದ ಎರಡು ಕ್ಲಬ್‌ಗಳಲ್ಲಿ ಮನೋರಂಜನಾ ಪರವಾನಿಗೆ ಪಡೆದು ನಿರಂತರವಾಗಿ ಇಸ್ಪೀಟು ಆಟ ನಡೆಯುತ್ತಿವೆ ಇದರಲ್ಲಿ ಯುವಸಮುದಾಯ ಹಾಳಾಗುತ್ತಿದ್ದು ಕಡಿವಾಣ ಹಾಕಬೇಕಿದ್ದ ಅಧಿಕಾರಿಗಳು ಯಾವುದೇ ಕ್ರಮಕ್ಕೆ ಮುಂದಾಗುತ್ತಿಲ್ಲಾ ಪೋಲಿಸ್ ಇಲಾಖೆ ಸಂಪೂರ್ಣವಾಗಿ ಕಡಿವಾಣ ಹಾಕಬೇಕಿತ್ತು ಆದರೆ ಇಲ್ಲಿಯಬರೆಗೂ ಭೇಟಿಯೂ ಸಹ ನೀಡಲ್ಲ ಎಂದು ಸಾರ್ವಜನಿಕರು ಆರೋಪ ಮಾಡಿದ್ದಾರೆ ಇದರಲ್ಲಿ ಸರ್ಕಾರಿ ನೌಕರರು ಸಹ ತಮ್ಮ ಕೆಲಸವನ್ನು ಬಿಟ್ಟು ಈ ಆಟ ಆಡಲು ಕ್ಲಬ್‌ಗಳಲ್ಲಿಯೇ ಇರುತ್ತಿವುದು ಬೇಸರದ ಸಂಗತಿಯಾಗಿದೆ.

ಕ್ಲಬ್‌ಗಳು ಸಂಪೂರ್ಣವಾಗಿ ನಿಯಮವನ್ನು ಪಾಲಿಸದೆ ಇಸ್ಪೀಟು ಆಟವನ್ನು ನಡೆಸುತ್ತಿದ್ದಾರೆ ಇಂತಹ ಕ್ಲಬ್‌ಗಳ ಮೇಲೆ ಸಂಬಂಧಿಸಿದ ಅಧಿಕಾರಿಗಳು ದಾಳಿ ನಡೆಸಬೇಕಿದೆ ಅಮರ ಸ್ಪೋರ್ಟ್ಸ ಮತ್ತು ಕಲ್ಚರಲ್ ಮತ್ತು ಪ್ರೇಂಡ್ಸ ಸ್ಪೋರ್ಟ್ಸ ಹಾಗೂ ರಿಕ್ರಿಯೇಷನ್ ಅಸೋಸಿಯೇಷನ್ ಕ್ಲಬ್‌ಗಳ್ಲಿ ನಿರಂತರವಾಗಿ ಆಟವನ್ನು ಆಡಿಸುತ್ತಿದ್ದಾರೆ ಇಲ್ಲಿರುವ ಸಿಸಿ ಕ್ಯಾಮರಾಗಳ ಹಾಗೂ ಇಲ್ಲಿಗೆ ಬರುವ ಸದಸ್ಯರ ಲಿಷ್ಟ ಕಲೆ ಹಾಕಿ ಮಾಹಿತಿ ಪಡೆಯಬೇಕಿದೆ ರಾಜಕಾರಣಿಗಳ ಬೆಂಬಲ ಮೂಲಕ ಎಲ್ಲಾ ಅಕ್ರಮ ಚಟುವಟಿಕೆಗಳನ್ನು ಮಾಡುತ್ತಿದ್ದು ಕೂಡಲೇ ಮೇಲಾಧಿಕಾರಿಗಳು ಇದರ ಕಡಿವಾಣಕ್ಕೆ ಮುಂದಾಗಬೇಕು ಇಂತಹ ಅಕ್ರಮಗಳಿಂದ ಸಮಾಜ ಹಾಳಾಗಿ ಹೋಗುವುದು ಮಾತ್ರ ಸತ್ಯದ ವಿಷಯವಾಗಿದೆ.

# ಭಾರತ ಭಕ್ತಿಯ ಭವನ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :–ಆ. 1– ಭಕ್ತಿ, ಶ್ರದ್ಧೆ, ಆರಾಧನೆಯಂತಹ ಸಾತ್ವಿಕ ಪರಂಪರೆಯನ್ನು ಜಗತ್ತಿಗೆ ಪರಿಚಯಿಸಿದ ಶ್ರೇಷ್ಠ ನೆಲ ಭಾರತ ನಿಜವಾಗಿಯೂ ಭಕ್ತಿಯ ಭವನವೇ ಆಗಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಜಾಪುರವಾಡಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ವೀರ ಹನುಮಾನ ದೇವಸ್ಥಾನದ ಕಳಸಾರೋಹಣ ಹಾಗೂ ಪ್ರತಿಮೆ ಪ್ರಾಣ ಪ್ರತಿಷ್ಠಾಪನೆ ಸಮಾರಂಭದ ಸನ್ನಿಧಾನವಯಸಿ ಮಾತನಾಡಿದ ಶ್ರೀಗಳು, ಧೈರ್ಯ, ಶೌರ್ಯ, ಸಾಹಸ, ಪರಾಕ್ರಮ, ದೂರದೃಷ್ಟಿಗಳಂತಹ ಶ್ರೇಷ್ಠ ಗುಣ ವಿಶೇಷಣ ಹೊಂದಿರುವ ಹನುಮಂತ ಇಂದು ಹಾಗೂ ಮುಂದೆಂದಿಗೂ ಸ್ಫೂರ್ತಿಯ ಸಿಂಧು ವಾಗಿದ್ದಾರೆ.

ಹನುಮಂತನನ್ನು ಕೇವಲ ಮಂದಿರದಲ್ಲಿ ಮೂರ್ತಿ ರೂಪದಲ್ಲಿ ನೋಡದೆ, ಆತನ ಆದರ್ಶ ದೈನಂದಿನ ಬದುಕಿನಲ್ಲಿ ಅಳವಡಿಸಿಕೊಂಡು ಅನುಸರಿಸಿದರೆ ಆಂಜನೇಯ ಸ್ವಾಮಿ ಕೃಪೆ ನಿಶ್ಚಿತ ಎಂದು ನುಡಿದರು.

ಜಾಪೂರವಾಡಿ ಗ್ರಾಮದ ಎಲ್ಲಾ ಜನತೆ ಸೇರಿ ಭಕ್ತಿ, ಶ್ರದ್ಧೆಯಿಂದ ನಿರ್ಮಿಸಿದ ಹನುಮಾನ ಮಂದಿರ ಗ್ರಾಮದ ಅಧ್ಯಾತ್ಮ ಸೌಧವಾಗಿ ನಿರಂತರ ಧರ್ಮ ಕಾರ್ಯಗಳಿಗೆ ಸ್ಫೂರ್ತಿ ನೀಡುವಂತಾಗಲಿ ಹಾಗೂ ಸರ್ವರಿಗೂ ಸನ್ಮಂಗಳವಾಗಲೆಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಾಸಕರಾದ ಶರಣು ಸಲಗರ ಮಾತನಾಡಿ ಆಕಳು ಮತ್ತು ಎತ್ತುಗಳ ಉಪಯೋಗ ಮಾಡಿಕೊಂಡು, ಮಾರಾಟ ಮಾಡದೆ ಅವುಗಳನ್ನು ಕೊನೆತನಕ ಸಾಕಿ ಸಲುತ್ತೇವೆ ಎಂದು ಸಂಕಲ್ಪ ಮಾಡಬೇಕೆಂದು ರೈತಬಾಂಧವರಲ್ಲಿ ಮನವಿ ಮಾಡಿಕೊಂಡರು. ತ್ರಿಪುರಾಂತಿನ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಪೂಜ್ಯ ಶ್ರೀ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು ಮಳಖೇಡ ಮಾತ ನಾಡಿದರು.

ಹಿರನಾಗಾಂವ ಪೂಜ್ಯ ಶ್ರೀ ಜಯಶಾಂತಲಿಂಗಮಹಾಸ್ವಾಮಿಗಳು, ಪೂಜ್ಯ ಶ್ರೀ ಗುರುಪಾದಲಿಂಗ ಮಹಾಸ್ವಾಮಿಗಳು ಬಬಲಾದ, ಪೂಜ್ಯಶ್ರೀ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು ಮಳಖೇಡ, ಪೂಜ್ಯಶ್ರೀ ಶಿವಪ್ರಸಾದ ದೇವರು, ಗೋಕುಳ, ಬೀದರ ಜಿಲ್ಲಾ ಪಂಚಾಯತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಗುಂಡೂರ ಗ್ರಾಮ ಪಂಚಾಯತ ಅಧ್ಯಕ್ಷರಾದ ನಿರಂಜಪ್ಪ ಬಿರಾದಾರ. ಜಗನ್ನಾಥ ಪಾಟೀಲ, ಬಾಬು ಹೂನ್ನನಾಯಕ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಮಲ್ಲಿಕಾರ್ಜುನ ಆಲಗೂಡೆ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ. ಸಂಜು ಸ್ವಾಮಿ, ಮಲ್ಲಿಕಾರ್ಜುನ ನಾಗಮಾರಪಳ್ಳಿ ಸಂಗೀತ ಸೇವೆ. ನವಲಿಂಗ ಪಾಟೀಲ

# ಗವಿಮಠದಲ್ಲಿ ಶ್ರಾವಣ ಉಪನ್ಯಾಸ. ಪತ್ರಿಕಾ ದಿನಾಚರಣೆಯ ಹಾಗೂ ದಸರಾ ದರ್ಬಾರ್ ಯುವ ಘಟಕದ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಆ.1 –ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಸಮಾರಂಭವನ್ನು ಎಲ್ಲ ಯುವಕರು ಸೇರಿ ಐತಿಹಾಸಿಕ ಹಾಗೂ ಅರ್ಥಪೂರ್ಣ ನೆರವೇರಿಸಬೇಕು ಎಂದು ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಸಮಾರಂಭದ ಮಾರ್ಗದರ್ಶಕರು ಹಾಗೂ ಮೆಹಕರ ತಡೋಳಾದ ಪೂಜ್ಯಶ್ರೀ ಷ. ಬ್ರ. ರಾಜೇಶ್ವರ ಶಿವಾಚಾರ್ಯರು ನುಡಿದರು.

ನಗರದ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ಹಾಗೂ ದಸರಾ ದರ್ಬಾರ್ ಸ್ವಾಗತ ಸಮಿತಿ ಸಹಯೋಗದಲ್ಲಿ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಉಪನ್ಯಾಸ ಮಾಲೆ, ಪತ್ರಿಕಾ ದಿನಾಚರಣೆಯ ಮತ್ತು ದಸರಾ ದರ್ಬಾರ್ ಯುವಘಟಕ ಉದ್ಘಾಟನೆ ಸಮಾರಂಭ ದ ದಿವ್ಯಸಾನಿಧ್ಯ ವಹಿಸಿ ಮಾತನಾಡಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯವನ್ನು ಭಕ್ತರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಲ್ಲದೆ ಯುವಕರು ಸಮಾಜದ ದೊಡ್ಡ ಶಕ್ತಿಯಾಗಿದ್ದು ಯುವಕರಿಗೆ ಧರ್ಮ ಸಂಸ್ಕಾರ ಅವಶ್ಯವಾಗಿದ್ದು, ಮುಂಬರುವ ನವರಾತ್ರಿ ದಸರಾ ಸಂದರ್ಭದಲ್ಲಿ ಬಸವಕಲ್ಯಾಣದಲ್ಲಿ ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಸಮಾರಂಭವನ್ನು ಶ್ರದ್ಧಾ ಭಕ್ತಿಯಿಂದ ಸೇವೆ ಗೈದು ಯಶಸ್ವಿ ಗೊಳಿಸಬೇಕೆಂದು ಯುವಕರಿಗೆ ಕರೆನೀಡಿದರು.

ದಸರಾ ದರ್ಬಾರ್ ಸಮಾರಂಭದ ಇನ್ನೊರ್ವ ಮಾರ್ಗದರ್ಶಕರಾದ ತ್ರಿಪುರಾಂತಿನ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ ಡಾ. ಅಭಿನವ ಘನಲಿಂಗ ಶಿವಾಚಾರ್ಯರು ನೇತೃತ್ವ ವಹಿಸಿದ್ದರು.

ಚಂದ್ರಕಾಂತ ಹಾಲಣ್ಣ ಅಧ್ಯಕ್ಷತೆ ವಹಿಸಿದ್ದರು. ಡಾ. ಸಾಗರ ತುತಾರೆ ಅವರಿಗೆ ವಿಶೇಷ ಸನ್ಮಾನ ಮಾಡಲಾಯಿತು. ಸಮಿತಿಯ ಸುನೀಲ ಪಾಟೀಲ ರಾಮಚಂದ್ರ ಹುಡುಗೆ, ವೇದಿಕೆಮೇಲಿದ್ದರು.

ಪತ್ರಕರ್ತರಿಗೆ ಗೌರವ ಸನ್ಮಾನ ಬಸವಕಲ್ಯಾಣದ ಗವಿಮಠದಲ್ಲಿ ಶ್ರಾವಣ ಮಾಸ ನಿಮಿತ್ತ ಗವಿಮಠ ಟ್ರಸ್ಟ್ ಹಾಗೂ ದಸರಾ ದರ್ಬಾರ್ ಸಮಿತಿ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮೆಹಕರ ತಡೂಳಾದ ಪೂಜ್ಯಶ್ರೀ ರಾಜೇಶ್ವರ ಶಿವಾಚಾರ್ಯರು, ಗವಿಮಠದ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ಶಿವಾಚಾರ್ಯರು ಕಾರ್ಯನಿರತ ಪತ್ರಕರ್ತ ಸಂಘದ ಪದಾಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಿದರು. ಸಮಿತಿಯ, ಸೋಮಶೇಖರ ವಸ್ತ್ರದ, ಬಸವಂತಪ್ಪ ಲವಾರೆ, ಎ. ಜಿ. ಪಾಟೀಲ, ದಯಾನಂದ ಶೀಲವಂತ, ಸೂರ್ಯಕಾಂತ ಶೀಲವಂತ, ಮಲ್ಲಿಕಾರ್ಜುನ ಅಲುಗಡೆ, ಚಂದ್ರಶೇಖರ್ ಲಾತುರೆ, ರಾಕೇಶ ಪುರವಂತ, ಮಲ್ಲಿಕಾರ್ಜುನ ನಂದಿ, ರೇವಣಸಿದ್ದಯ್ಯ ಮಠಪತಿ, ಶ್ರೀಶೈಲ ವಾತಡೆ ಇದ್ದರು. ಈರಣ್ಣ ಶೀಲವಂತ ಪ್ರಾರ್ಥನಗೀತೆ ಹಾಡಿದರು. ಪ್ರೊ. ರುದ್ರೇಶ್ವರ ಸ್ವಾಮಿ ಸ್ವಾಗತಿಸಿದರು. ರಮೇಶ ರಾಜೋಳೆ ಸಂಚಾಲನೆ ಮಾಡಿದರು. ಶಕುಂತಲಾ ಮಠ ಮಂಗಲ ಗೀತೆ ಹಾಡಿದರು.

# ಉದ್ಯೋಗ ಖಾತ್ರಿ ಕೂಲಿ ಕಾರ್ಮಿಕಳ ಕುಟುಂಬಕ್ಕೆ 2ಲಕ್ಷ ರೂಪಾಯಿ ಪರಿಹಾರ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತನಲ್ಲಿ ಜರುಗಿದ ಕೆಡಿಪಿ ಸಭೆಯಲ್ಲಿ ತಾಲೂಕಿನ ಮುತ್ತಂಗಿ ಗ್ರಾಮ ಪಂಚಾಯತನ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾಗ ಇತ್ತೀಚೆಗೆ ಮರಣ ಹೊಂದಿದ ದೇವಮ್ಮ ಗಂಡ ಮಡಿವಾಳಪ್ಪ ಮುತ್ತಂಗಿ ಇವರ ಮಗನಾದ ಶಿವಪುತ್ರ ಇವರಿಗೆ ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ ಮಾರ್ಗಸೂಚಿಯಂತೆ 2ಲಕ್ಷ ರೂಪಾಯಿ ಪರಿಹಾರದ ಆದೇಶ ಪತ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಮ್ ಖಾನ, ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ಡಾ. ಸಿದ್ದು ಪಾಟೀಲ್, ಡಾ. ಚಂದ್ರಶೇಖರ್ ಪಾಟೀಲ್, ಭೀಮರಾವ ಪಾಟೀಲ ಇವರುಗಳು ಆದೇಶ ಪತ್ರ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮ, ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಚಿಟಗುಪ್ಪ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಗ್ರಾಮ ಪಂಚಾಯತ್ ಅಧ್ಯಕ್ಷೆ ನಾಗಮ್ಮ ತಾಳಮಡಗಿ, ಉಪಾಧ್ಯಕ್ಷ ಪರಶುರಾಮ, ಅಭಿವೃದ್ಧಿ ಅಧಿಕಾರಿ ಸಂಧ್ಯಾರಾಣಿ ಧೂಮಾಳೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀ ಜ್ಞಾನ ಪ್ರಕಾಶ ಪೂಜ್ಯರಿಂದ ಮಹಾವಿರ ಅಳ್ಳೊಳ್ಳಿಕರ್ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಸೇಡಂ,ಆ., 01,ತಾಲೂಕು ಜನತಾ ಪಾರ್ಟಿಯ ಮಂಡಲದ ನೂತನ ಕಾರ್ಯದರ್ಶಿಯಾಗಿ ಆಯ್ಕೆಯಾಗಿರುವ ಮಹಾವಿರ ಅಳ್ಳೊಳ್ಳಿಕರ ಅವರಿಗೆ ಶ್ರೀ ಕ್ಷೇತ್ರ ಕೊಡ್ಲಾ ಉರಿಲಿಂಗ ಪೆದ್ದಿಶ್ವರ್ ಮಹಾಸಂಸ್ಥಾನ ಮಠದ ಪಿಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಜ್ಞಾನಪ್ರಕಾಶ ಸ್ವಾಮಿಜಿ ಅವರು ಸನ್ಮಾನಿಸಿ ಅಭಿನಂದನೆಗಳನ್ನು ತಿಳಿಸಿದರು .

ಈ ಸಂಧರ್ಭದಲ್ಲಿ ಸಮಾಜದ ಮುಖಂಡರಾದ ಲಕ್ಷ್ಮಣ ಮಂತ್ರಿ, ಕಾಶಿರಾಯ ತೆಲಕುರ, ಹಣಮಂತ ನೆರಟಿ, ಮಲ್ಲಿಕಾರ್ಜುನ ಮಂತ್ರಿ, ಮಹಾದೇವ ಜಿ.ಮಹೇಶ, ಮಹಾದೇವ ನೆರಟಿ, ಮೌನೇಶ ರೆಬ್ಬದ ಇನ್ನಿತರರು ಇದ್ದರು.

# 'ನೂತನವಾಗಿ ಎಸ್. ಡಿ.ಎಂ.ಸಿ.ರಚನೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ. 1 ತಾಲೂಕಿನ ಆಲಗೂಡ ಸರ್ಕಾರಿ ಪ್ರೌಢ ಶಾಲೆಯಲ್ಲಿ ನೂತನ ಎಸ್. ಡಿ.ಎಂ.ಸಿ.ರಚನೆ ಮಾಡಲಾಯಿತು. ಅಧ್ಯಕ್ಷರಾಗಿ ಲಕ್ಷ್ಮಣ ಉಕ್ಕಾವಾಲೆ ಉಪಾಧ್ಯಕ್ಷರಾಗಿ ದತ್ತು ಪಾಟೀಲ್ ನಿರ್ದೇಶಕರಾಗಿ ವಿಜಯಕುಮಾರ ಜಾನವಾಲೆ ರೇಖಾ ಕೊಳ್ಳುರೆ. ಸಂಜುಕುಮಾರ ಕಾಂಬಳೆ. ಶಿಲ್ಪಾ ಶಿಂಧೆ. ಸುನಿತಾ ಸೂರ್ಯವಂಶಿ. ರವಿ ಪರಗೆ. ಖಾಜಾ ಅಲಿಮೊದ್ದಿನ್. ಶಿವಾಜಿ ಬಿರಾದಾರ. ಗಂಗಾಧರ ಸೋಮವಂಶಿ. ಕಾರ್ಯದರ್ಶಿಗಳಾಗಿ ಮುಖ್ಯ ಗುರುಗಳಾದ ರಮೇಶ ರಾಜೋಳೆ ಆಗಿರುತ್ತಾರೆ. ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಉಪನ್ಯಾಸ ಕಾರ್ಯಕ್ರಮ ದಿ. 3 ರಂದು

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 31 ದಿನಾಂಕ 3 ರಂದು ರವಿವಾರ ಸಾಯಂಕಾಲ 6.30 ಗಂ–ಟೆಗೆ ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ದಲ್ಲಿ ಪೂಜ್ಯ ಶ್ರೀ ಮ. ನಿ. ಪ್ರ. ಪ್ರಭುದೇವರು ಮಹಾಸ್ವಾಮಿಜಿ ಲಿಂಗಾಯತ ಮಹಾಮಠ ಗೋರ್ಟಾ( ಬಿ ) ಹಾಗೂ ಬಸವಗಿರಿ ಬೀದರ್ ಇವರಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿಯಿಂದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ 3ರ ಪರೀಕ್ಷೆ ಫಲಿತಾಂಶದಲ್ಲಿ

# ಹುಮನಾಬಾದ ತಾಲೂಕ ಜಿಲ್ಲೆಗೆ ಪ್ರಥಮ:– ವೆಂಟೇಶ್ ಗುಡಾಳ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಎಸ್‌ಎಸ್‌ಎಲ್‌ಸಿ 3ರ ಪರೀಕ್ಷೆಯ ಫಲಿತಾಂಶದಲ್ಲಿ ಹುಮನಾಬಾದ ತಾಲೂಕ ಜಿಲ್ಲೆಯಲ್ಲಿಯೇ ಪ್ರಥಮ ಸ್ಥಾನ ಪಡೆದಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್ ತಿಳಿಸಿದ್ದಾರೆ. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ಮಾಪನ ಮಂಡಳಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–3ರ ಫಲಿತಾಂಶ ಪ್ರಕಟಿಸಿದೆ. ಜುಲೈ 5ರಿಂದ 11ರ ವರೆಗೆ ಪರೀಕ್ಷೆಗಳು ನಡೆದಿದ್ದವು. ತಾಲೂಕಿನಲ್ಲಿ ಬಾಲಕರು ಒಟ್ಟು 1027 ಹಾಗೂ ಬಾಲಕಿಯರು 724 ಸೇರಿದಂತೆ ಒಟ್ಟು 1751 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಇದರಲ್ಲಿ 410 ಬಾಲಕರು ಹಾಗು 309 ಬಾಲಕಿಯರು ಒಟ್ಟು 719 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇಕಡಾವಾರು 41.06 ಫಲಿತಾಂಶ ಬಂದಿದೆ. ಸರಕಾರಿ ಶಾಲೆಗಳ ಫಲಿತಾಂಶ ನೋಡಿದಾಗ 740 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 247 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅನುದಾನಿತ ಶಾಲೆಗಳ 433 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 159 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಗ್ರಾಮೀಣ ಪ್ರದೇಶದ 1125 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 488 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ನಗರಪ್ರದೇಶದ 626 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 231 ವಿದ್ಯಾರ್ಥಿಗಳು ಉತ್ತೀರ್ಣಗೊಂಡಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗುಡಾಳ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಂಗಳೂರಿನ ವಿಕಾಶ ಸೌಧದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳನ್ನು ಹಿಂದುಳಿದ ವರ್ಗಗಳ ಹಿರಿಯ ನಾಯಕ ಹಾಗೂ ಕಾಂಗ್ರೇಸ್ ಪಕ್ಷದ ಮುಖಂಡರಾದ ಡಾ. ಸಿದ್ರಾಮ್ ಡಿ. ವಾಘಮಾರೆರವರು ಭೇಟಿಯಾಗಿ ಹಿಂದುಳಿದ ಅಲೆಮಾರಿ ಅರೆ ಅಲೆಮಾರಿ ಜನಾಂಗಗಳ ಮೂಲಭೂತ ಸೌಕರ್ಯಗಳ ಬಗ್ಗೆ ಚರ್ಚಿಸಿದರು. (ಮಲ್ಲಮ್ಮ ನುಡಿ ಚಿತ್ರ)

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಶಿಕ್ಷಣ ಅಂಕಗಳಿಗಷ್ಟೇ ಅಲ್ಲ, ರಾಷ್ಟ್ರ ನಿರ್ಮಾಣಕ್ಕೂ ಹಾದಿ :ಚಿತ್ರನಟ ಚೇತನ್




ಮಲ್ಲಮ್ಮ ನುಡಿ ವಾರ್ತೆ

ಸುರಪುರ: ತಾಲೂಕಿನ ಕೆಂಭಾವಿ ಪಟ್ಟಣಕ್ಕೆ ಆಗಮಿಸಿದ ಚಲನಚಿತ್ರನಟ ಚೇತನ್ ಸಮಾಜ ಪರಿವರ್ತನೆಯ ಪರಿವಾದಿಯಾಗಿ ಗುರುತಿಸಿಕೊಂಡಿರುವ ಶ್ರೀ ಚೇತನ್ ಅಹಿಂಸಾ ಅವರು, ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಕೆಂಭಾವಿ ಪಟ್ಟಣಕ್ಕೆ ಭೇಟಿ ನೀಡಿ, ಇಲ್ಲಿನ ಪದವಿ ಪೂರ್ವ ಹಾಗೂ ಪದವಿ ವಿದ್ಯಾರ್ಥಿಗಳೊಂದಿಗೆ ಅಮೂಲ್ಯವಾದ ಸಂವಾದ ನಡೆಸಿದರು.ವಿದ್ಯಾರ್ಥಿಗಳ ಸಾಂವಿಧಾನಿಕ ಜಾಗೃತಿ, ಸಮಾಜದ ಬಗ್ಗೆ ಹೊಣೆಗಾರಿಕೆ ಹಾಗೂ ನೈತಿಕ ಮೌಲ್ಯಗಳ ಕುರಿತು ಪ್ರೇರಕ ಮಾತುಕತೆ ನಡೆಯಿತು.ಚೇತನ್ ಅವರು ತಮ್ಮ ಭಾಷಣದಲ್ಲಿ ಹೇಳಿದರು:

"ನೀವು ಅಂಕ ಗಳಿಸುವದು ಮುಖ್ಯ, ಆದರೆ ಅದಕ್ಕಿಂತ ಮುಖ್ಯವಾದದ್ದು ಮೌಲ್ಯಗಳನ್ನು ಕಲಿಯುವುದು. ಈ ದೇಶವು ಯುವಕರ ಚಿಂತನೆಯಿಂದ ರೂಪುಗೊಳ್ಳುತ್ತದೆ. ನಿಮ್ಮಲ್ಲಿ ಸೇವಾ ಮನೋಭಾವ, ಸಹಾನುಭೂತಿ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಿರಬೇಕು. ಶಿಕ್ಷಣದಿಂದಾಗಿ ನೀವು ಒಂದು ಭದ್ರ ಭವಿಷ್ಯವನ್ನು ಮಾತ್ರವಲ್ಲ, ಒಂದು ಉತ್ತಮ ಸಮಾಜವನ್ನೂ ನಿರ್ಮಿಸಬೇಕು."

ವಿದ್ಯಾರ್ಥಿಗಳ ಪ್ರಶ್ನೆ–ಉತ್ತರ ಶಿಕ್ಷಣದ ತಾತ್ವಿಕತೆಯ ಬಗ್ಗೆ, ಸಮಾಜ ಸೇವೆಯಲ್ಲಿ ತೊಡಗುವ ಪ್ರಯತ್ನಗಳ ಬಗ್ಗೆ ಹಾಗೂ ಯುವಜನತೆಯ ಬದಲಾವಣೆ ಮಾಡಬಲ್ಲ ಶಕ್ತಿಯ ಬಗ್ಗೆ ಉದಾಹರಣೆಗಳೊಂದಿಗೆ ಸ್ಪಷ್ಟವಾದ ಉತ್ತರ ನೀಡಿದರು.

ಸ್ಥಳೀಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿನ ತಮ್ಮ ಅಭಿಪ್ರಾಯ ಹಂಚಿಕೊಂಡು, ಚೇತನ್ ಅವರ ಸಂದೇಶವು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಸಕಾರಾತ್ಮಕ ಬೆಳಕು ಮೂಡಬೇಕು ಎಂದು ಹೇಳಿದರು. "ಅವರ ಮಾತುಗಳು ನಮ್ಮೊಳಗಿನ ಶಕ್ತಿಯನ್ನು ಇನ್ನಷ್ಟು ಗಟ್ಟಿಗೊಳಿಸಿತು " ಎಂಬಂತಿತ್ತು ವಿದ್ಯಾರ್ಥಿಗಳ ಒಟ್ಟಾರೆ ಪ್ರತಿಕ್ರಿಯೆ.ಚೇತನ್ ಅವರ ಅಭಿಪ್ರಾಯ: "ಯಾದಗಿರಿ ಜಿಲ್ಲೆಯ ವಿದ್ಯಾರ್ಥಿಗಳಲ್ಲಿ ನಾನು ಕಂಡದ್ದು ಕೇವಲ ಆಸಕ್ತಿ ಅಲ್ಲ ಒಂದು ಸೇವಾ ಮನೋಭಾವ. ಈ ಜಿಲ್ಲೆಯ ಯುವಜನತೆ ದೇಶದ ನೂತನ ಭವಿಷ್ಯ ಕಟ್ಟಬಲ್ಲ ಶಕ್ತಿ ಹೊಂದಿದೆ ಎಂಬ ವಿಶ್ವಾಸ ನನಗೆ ಬಂದಿದೆ."ಈ ಸಂವಾದ ಕಾರ್ಯಕ್ರಮವು ಶಿಕ್ಷಣ ಹಾಗೂ ಸಾಮಾಜಿಕ ಚಿಂತನೆಗೆ ಪೂರಕವಾದ ಹಸಿರು ಬಿತ್ತನೆ ಮಾಡಿದ್ದು, ಇಂತಹ ಸಂವಾದಗಳು ನಿತ್ಯಜೀವನದಲ್ಲಿ ಯುವಕರಿಗೆ ಮಾರ್ಗದರ್ಶಕವಾಗಲಿವೆ ಎಂಬ ನಂಬಿಕೆ ಸ್ಥಳೀಯರಲ್ಲಿದೆ.!

# ಜಿಲ್ಲಾಧಿಕಾರಿಗಳ ತಾತ್ಕಾಲಿಕ ಕಛೇರಿಗೆ ಬಸ್ ಓಡಿಸಿ



ಮಲ್ಲಮ್ಮನುಡಿ ವಾರ್ತೆ ಬೀದರ. ಅ.01: ಜಿಲ್ಲಾಧಿಕಾರಿಗಳ ಕಛೇರಿ ಕಟ್ಟಡವು ಶಿಥಿಲಗೊಂಡಿರುವುದರಿಂದ ಬೀದರ ನಗರದ ಚಿಕ್ಕಪೇಟ್ ಬಳಿ ಇರುವ ಗಾಂಧಿ ಭವನಕ್ಕೆ ಸ್ಥಳಾಂತರಿಸಲಾಗಿದೆ. ಈ ಕಟ್ಟಡಕ್ಕೆ ಹೋಗಿ ಬರಲು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗುತ್ತಿದೆ. ಆಟೋ ಚಾಲಕರು ಹೆಚ್ಚಿನ ಹಣ ಪಡೆಯುತ್ತಿರುವುದರಿಂದ ಜನತೆಗೆ ಕಷ್ಟ ಅನುಭವಿಸಬೇಕಾಗುತ್ತಿದೆ. ಆದರಿಂದ ಮಾನ್ಯ ಜಿಲ್ಲಾಧಿಕಾರಿಗಳು ತಕ್ಷಣವೇ ತಾತ್ಕಾಲಿಕ ಕಛೇರಿಗೆ ಎನ್.ಈ.ಕೆ.ಆರ್.ಟಿ.ಸಿ ಬಸ್ ಅಥವಾ ಪ್ರವಾಸೋಧ್ಯಮ ಬಸ್‌ಗಳನ್ನು ಓಡಿಸುವಂತೆ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಸುನೀಲ ಭಾವಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಬಸ್ ರೂಟ್ – 1

ಬಸ್ ಸಂಚಾರ ನಗರ ಕೇಂದ್ರ ಬಸ್ ನಿಲ್ದಾಣದಿಂದ ಮಡಿವಾಳ ಚೌಕ್,ಡಾ.ಸಿದ್ದಾರೆಡ್ಡಿ ಆಸ್ಪತ್ರೆ, ಸಿದ್ಧಾರ್ಥ ಕಾಲೇಜು ಕ್ರಾಸ್,ನಾವದಗೇರಿ,ವಿಜಯ ಕಾಲೋನಿ, ಚಿಕ್ಕಪೇಟ್–ಗುರುದ್ವಾರಾ ಕ್ರಾಸ್ ಮೂಲಕ ಗಾಂಧಿ ಭವನದಲ್ಲಿರುವ ಡಿ.ಸಿ ಕಛೇರಿ ವರೆಗೆ ಓಡಿಸಬೇಕು.

ಬಸ್ ರೂಟ್ – 2

ಇನ್ನೊಂದು ರೂಟ್ ಕೇಂದ್ರ ಬಸ್ ನಿಲ್ದಾಣದಿಂದ ಖಂಡ್ರೆ ಪೆಟ್ರೋಲ್ ಪಂಪ್, ರಂಗ ಮಂದಿರ,ಕನ್ನಡಾಂಬೆ ರೋಟರಿ ಚೌಕ್, ಹಳೆ ಬಸ್ ನಿಲ್ದಾಣ, ಶಿವಾಜಿ ಚೌಕ್,ಡಾ.ಬಿ.ಆರ್. ಅಂಬೇಡ್ಕರ್ ಚೌಕ್, ಕೇಂದ್ರ ಗಂಥಾಲಯ,ಸಿದ್ಧಾರ್ಥ ಕಾಲೇಜು, ನಾವದಗೇರಿ,ವಿಜಯ ಕಾಲೋನಿ, ಚಿಕ್ಕಪೇಟ್–ಗುರುದ್ವಾರಾ ಕ್ರಾಸ್ ಮೂಲಕ ಗಾಂಧಿ ಭವನದಲ್ಲಿರುವ ಡಿ.ಸಿ ಕಛೇರಿ ವರೆಗೆ ಸಿಟಿ ಬಸ್‌ಗಳನ್ನು ಸಂಚರಿಸುವಂತೆ ವ್ಯವಸ್ಥೆ ಮಾಡಿಸಬೇಕೆಂದು ಭಾವಿಕಟ್ಟಿ ಕೋರಿದ್ದಾರೆ.

# ಖಾನಾವಳಿ ಚೆನ್ನಿ ನಾಟಕ

ಬೀದರ.ಅ . 01 : ಬೀದರ್ ನಗರದಲ್ಲಿ ಶ್ರೀ ಶಿರಡಿ ಸಾಯಿಬಾಬಾ ನಾಟ್ಯ ಸಂಘ ಕೊಡೇಕಲ ರವರಿಂದ ಖಾನಾವಳಿ ಚೆನ್ನಿ ನಾಟಕ ಹಾಗೂ ಸಂಗೀತ ರಸಮಂಜರಿ ಕಾರ್ಯಕ್ರಮವು

ನೀನ್ನೆಯಿಂದ ಪ್ರಾರಂಭವಾಗಿದ್ದು ಇವತ್ತು ಮತ್ತು ನಾಳೆ ಪ್ರದರ್ಶನವಾಗಲಿದೆ ಬೀದರ ನಗರದಲ್ಲಿ ಖ್ಯಾತ ಕಲಾವಿದರಿಂದ ಖಾನಾವಳಿ ಚೆನ್ನಿ ನಾಟಕ ಹಾಗೂ ಸಂಗೀತ ರಸಮಂಜರಿಯಲ್ಲಿ ಜೂನಿಯರ್ ವಿಷ್ಣುವರ್ಧನ ರವರು ಈ ನಾಟಕದಲ್ಲಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಳ್ಳುವವರು.

ನಗರದ ಗುಂಪಾ ರಸ್ತೆಯಲ್ಲಿರುವ ಬೆಲ್ದಾಳೆ ಪೆಟ್ರೋಲ್ ಪಂಪ್ ಹತ್ತಿರ ರವಿ ಸ್ವಾಮಿರವರ ಜಾಗದಲ್ಲಿ ಈ ನಾಟಕವು ಪ್ರದರ್ಶಿಸಿಸಲಿದ್ದು ಬೀದರ್ ಹಾಗೂ ಸುತ್ತಮುತ್ತಲಿನ ಗ್ರಾಮದ ಕಲಾಭಿಮಾನಿಗಳು ಬಂದು ಪ್ರೋತ್ಸಾಹಿಸಬೇಕೆಂದು ಸಂಘದ ಮಾಲೀಕರಾದ ಶ್ರೀ ಬಸವರಾಜ ಕಟ್ಟಿಮನಿಯವರು ವಿನಂತಿಸಿಕೊಂಡಿದ್ದಾರೆ.

# ದುಶ್ಚಟ ದುರ್ಗುಣದಿಂದ ಯುವಕರು ಹೊರಗೆ ಬರಲು ಕರೆ : ಡಾ. ಮಲ್ಲಿಕಾರ್ಜುನ ಜಿ.ಬಿ



ಬೀದರ.ಅ.01: ಯುವಕರು ಅನಾವಶ್ಯಕವಾಗಿ ದುಶ್ಚಟಗಳಿಗೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳುತ್ತಿರುವುದು ಅತ್ಯಂತ ವಿಷಾದಕರ ಸಂಗತಿ. ಯುವಕರಾದವರು ಜೀವನದ ಗುರಿಗೊತ್ತು ಅರ್ಥಹಿಸಿಕೊಂಡು ದಾರಿ ಕಂಡುಕೊಳ್ಳಲು ಧನಾತ್ಮಕ ಚಿಂತನೆಯಲ್ಲಿ ತೊಡಗಬೇಕೆಂದು ಎಲುಬು, ಮೂಳೆ, ಕೀಲು ತಜ್ಞರಾದ ಡಾ॥ಮಲ್ಲಿಕಾರ್ಜುನ ಜಿ.ಬಿ. ನುಡಿದರು.

ಸ್ಥಳಿಯ ವಚನ ಚಾರಿಟೇಬಲ್ ಸೊಸೈಟಿ (ರಿ) ಬೀದರ ಹಾಗೂ ಸರಕಾರಿ ಪದವಿ ಪೂರ್ವ ಕಾಲೇಜು (ಬಾಲಕಿಯರ) ಬೀದರ ಇವರ ಸಂಯುಕ್ತಾಶ್ರಯದಲ್ಲಿ ವ್ಯಸನ ಮುಕ್ತ ದಿನಾಚರಣೆಯನ್ನು ಡಾ. ಮಲ್ಲಿಕಾರ್ಜುನ ಜಿ.ಬಿ. ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಇಂದು ಹೆಣ್ಣುಮಕ್ಕಳು ಸಂಸ್ಕೃತಿ ಕಾಪಾಡಿದರೆ ಸುಂದರ ಸಮಾಜ ನಿರ್ಮಾಣಗೊಳ್ಳಲು ಸಾಧ್ಯ ಎಂದರು.

ಪೂಜ್ಯ ವಿಜಯಮಹಾಂತ ಅಪ್ಪಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಸೋಮಶೇಖರ ಬಿರಾದಾರ ಅಧ್ಯಕ್ಷರು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಬೀದರ ಅವರು ಮಾತನಾಡುತ್ತ ದೇಶದಲ್ಲಿ ಶೇ. 85. ಯುವಕರು ಶೇ. 15 ಯುವತಿಯರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ.ಯುವಕರು ತಮ್ಮ ಒಡನಾಟಿಗಳ ಮತ್ತು ಗೆಳೆಯರ ಒತ್ತಾಯಕ್ಕೆ ಮಣಿದು ಡ್ರಗ್ ಸೇವನೆ ಮಾಡಿ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಇದರಿಂದ ಹೊರ ಬರಲು ಕಾಲೇಜು ಓದುವ ಮಕ್ಕಳು ವೈಚಾರಿಕತೆ ಹಾಗೂ ವೈಜ್ಞಾನಿಕ ಮನೋಭಾವನೆ ಅಳವಡಿಸಿಕೊಳ್ಳಲು ತಿಳಿ ಹೇಳಿದರು.

ಲಿಂಗಾರತಿ ಅಲ್ಲಮಪ್ರಭು ನಾವದಗೇರೆ ಅಧ್ಯಕ್ಷರು ಅನುಭವ ಎಜ್ಯುಕೇಷನ್ ಆಯಿಂಡ್ ಚಾರಿಟೇಬಲ್ ಟ್ರಸ್ಟ್ ಬೀದರ ಮಾತನಾಡುತ್ತ ಮಹಾಂತ ಸ್ವಾಮಿಗಳು ತಮ್ಮ ಜೀವಮಾನದಲ್ಲಿ ಮನೆ ಮನೆಗೆ ಮಹಾಂತ ಜೋಳಿಗೆ ತೆಗೆದುಕೊಂಡು ಹೋಗಿ ಜನರ ದುಶ್ಚಟಗಳ ದಾಸ್ಯದದಿಂದ ಹೊರತರಲು ಪ್ರಯತ್ನಿಸಿದರು.ಇಂದು ಮೊಬೈಲ್ ನಮ್ಮ ಯುವಕರಿಗೆ ದಾರಿ ತಪಿಸುತ್ತಿದೆ.ತಾವು ಅದರಿಂದ ಒಳ್ಳಯದನ್ನು ಮಾತ್ರ ಗಮನಿಸಿ ಕೆಟ್ಟ ಸಂಗತಿಗಳು ಬಂದಾಗ ದೂರವಿರಲು ಹೇಳಿದರು.ಹೆಣ್ಣು ಸಮಾಜದ ಕಣ್ಣು ಎನ್ನುವ ದಿಸೆಯಲ್ಲಿ ವಿದ್ಯಾರ್ಥಿನಿಯರು ತಮ್ಮ ಓದಿನ ಜೊತೆಗೆ ಸಂಸ್ಕಾರಯುತ ಜೀವನ ಸಾಗಿಸಲು ಪ್ರಯತ್ನವಾದಿಗಳಾಗಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಿಜಯಕುಮಾರ ತೋರಣೆಕರ್ ಮಾನ್ಯ ಪ್ರಾಚಾರ್ಯರು ಸ.ಪ.ಪೂ ಕಾಲೀಜು (ಬಾಲಕಿಯರ) ಬೀದರ ಮಾತನಾಡಿ ಇಂದಿನ ಕಾರ್ಯಕ್ರಮ ನಮ್ಮ ಮಕ್ಕಳಿಗೆ ಅತ್ಯಂತ ಉಪಯುಕ್ತವಾಗಿದೆ ಎಂದು ನುಡಿದರು.ಪೂಜ್ಯಶ್ರೀ ಬಸವಮಹಾಂತ ಮಹಾಸ್ವಾಮಿಗಳು ಸಿರಸಂಗಿ ಮಠ ಬೆಳಗಾವಿ ಇವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.ಪ್ರಾಸ್ತವಿಕವಾಗಿ ಡಾ. ಸುರೇಶ ಪಾಟೀಲ ಅಧ್ಯಕ್ಷರು ವಚನ ಚಾರಿಟೇಬಲ್ ಸೊಸೈಟಿ (ರಿ) ಬೀದರ ಮಾತನಾಡಿದರು. ಮೊದಲಿಗೆ ಕಾಲೇಜಿನ ಅಕ್ಷತಾ, ವನೀತಾ,ನಾಡಗೀತೆ ಹಾಡಿದರು. ಪ್ರಾಧ್ಯಾಪಕರಾದ ಬಸವರಾಜ ಮಯೂರ ಸ್ವಾಗತಿಸಿದರೆ, ಪ್ರಾಧ್ಯಾಪಕರಾದ ರಾಜಶೇಖರ ಮಂಗಲಗಿ ವಂದಿಸಿದರೆ,ಶಿವಶಂಕರ ಟೋಕರೆ ನಿರೂಪಿಸಿದರು.

# ಮನುಕುಲ ಸೇವೆಗಾಗಿ ಮಾನವ ಧರ್ಮ ಫೌಂಡೇಷನ



ಬೀದರ. ಅ. 01 :ಸಮಾಜದಲ್ಲಿ ಹೇಚ್ಚುತಿರುವ ಸಾವು ನೋವು ಪ್ರಕರಣಗಳು ಜೀವನ ಶೈಲಿಗೆ ಸಂಬಂಧ ಪಟ್ಟ ಕಾಯಿಲೆಗಳು ಪ್ರಕೃತಿ ವಿಕೋಪ ಪ್ರಕರಣಗಳು, ಇವೆಲ್ಲದರ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಮತ್ತು ಜನರಿಗೆ ಆರೋಗ್ಯ ಅರಿವು ಮತ್ತು ಧ್ಯಾನ ಶಿಬಿರ ನಡೆಸುವ ಉದ್ದೇಶದಿಂದ ಅದರ ಜೊತೆಗೆ ಪ್ರಕೃತಿ ಸಂರಕ್ಷಣೆ ಮತ್ತು ಪಶುಸೇವೆ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಮಾನವ ಧರ್ಮ ಫೌಂಡೇಷನ ಹುಟ್ಟು ಹಾಕಲಾಗಿದೆ ಎಂದು ಸಂಘದ ಅಧ್ಯಕ್ಷರಾದ ಡಾ.ಕಲಾವತಿ ಪಾಟೀಲ ಉಧ್ಘಾಟನೆ ವೇಳೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಡಾ.ಕಿರಣ ಪಾಟೀಲ ಉಪಾಧ್ಯಕ್ಷರು,ಶ್ರೀಮತಿ ವರ್ಷಾ ಪಾಟೀಲ ಖಜಾಂಚಿ, ಮೀತ್ ಪಾಟೀಲ ಕಾರ್ಯದರ್ಶಿ,ಶ್ರೀ ಪ್ರಶಾಂತ ಕುಮಾರ ಏಳಗಿ, ಶ್ರೀಮತಿ ಕೃಪಾ ರಾಣಿ ಏಳಗಿ ನಿರ್ದೇಶಕರು ಸೇರಿದಂತೆ ಇತರರು ಉಪಸ್ಥಿತರಿದ್ದರೆಂದು ಸಂಘದ ಉಪಾಧ್ಯಕ್ಷರಾದ ಡಾ.ಕಿರಣ ಪಾಟೀಲ ತಿಳಿಸಿದರು.

# ಒಳಮೀಸಲಾತಿಗಾಗಿ ಮಾದಿಗ ಸಮಾಜದಿಂದ ಅರೆಬೆತ್ತಲೆ ಪ್ರತಿಭಟನಾ ಧರಣಿ



ಕಲಬುರಗಿ: ಆ.1: ಕಳೆದ 35 ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿ ಮಾಡಿ ಇಲ್ಲ ಮುಖ್ಯಮಂತ್ರಿ ಸಿದ್ಧರಾಮಯ್ಯ ಕುರ್ಚಿ ಖಾಲಿ ಮಾಡಿ ಎಂದು ಆಗ್ರಹಿಸಿ ಜಿಲ್ಲಾ ಮಾದಿಗ ಸಮಾಜದ ವಿವಿಧ ಸಂಘಟನೆಗಳ ಒಳ ಮೀಸಲಾತಿ ಹೋರಾಟ ಸಮಿತಿಯ ನೇತೃತ್ವದಲ್ಲಿ ಮಾದಿಗ ಸಮಾಜದವರು ಶುಕ್ರವಾರ ನಗರದ ಜಗತ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಅರೆಬೆತ್ತಲೆಯ ಬೃಹತ್ ಮೆರವಣಿಗೆ ಮಾಡಿ ಧರಣಿ ಕೈಗೊಂಡರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ,ಸುಪ್ರೀಂಕೋರ್ಟ್ ಪರಿಶಿಷ್ಟ ಸಮುದಾಯದೊಳಗಿನ ಅತೀ ಹಿಂದುಳಿದ ಮತ್ತು ಅವಕಾಶ ವಂಚಿತ ಸಮುದಾಯಗಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವ ಸಲುವಾಗಿ ದತ್ತಾಂಶಗಳ ಆಧಾರದ ಮೇಲೆ ಆಯಾ ರಾಜ್ಯಗಳು ಒಳಮೀಸಲಾತಿ ಜಾರಿ ಮಾಡಿ ಎಂದು ತೀರ್ಪು ನೀಡಿ ಒಂದು ವರ್ಷ ಗತಿಸಿತು. ಆದರೆ ವಿನಾಕಾರಣ ರಾಜ್ಯ ಕಾಂಗ್ರೇಸ್ ಸರ್ಕಾರ ಕುಂಟು ನೆಪವೊಡ್ಡಿ ವಿಳಂಬ ನೀತಿ ಅನುಸರಿಸುತ್ತಿದೆ.ಇದು ಖಂಡನೀಯ ಎಂದು ಆಕ್ಷೇಪಿಸಿದರು.ರಾಜ್ಯ ಸರ್ಕಾರದ ಈ ರೀತಿಯ ಅನಗತ್ಯ ವಿಳಂಬ ನೀತಿಯಿಂದ ನಮ್ಮ ಸಮುದಾಯ ಆತಂಕಕ್ಕೆ ಒಳಗಾಗಿದೆ. ವಿದ್ಯಾರ್ಥಿಗಳು, ಉದ್ಯೋಗಾಕಾಂಕ್ಷಿಗಳು,ಕಾರ್ಮಿಕರು ಮತ್ತು ಮಹಿಳೆಯರು ಹಾಗೂ ಒಟ್ಟಾರೆ ತಮ್ಮ ನ್ಯಾಯಯುತ ಹಕ್ಕುಗಳಿಂದ ವಂಚಿತರಾಗಿದ್ದಾರೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.ಸುಪ್ರಿಂಕೋರ್ಟ್ ತೀರ್ಪಿನ ಪ್ರಕಾರ ಹರಿಯಾಣ, ತೆಲಂಗಾಣ, ಆಂಧ್ರಪ್ರದೇಶ ಸರ್ಕಾರಗಳು ತುರ್ತು ನಿಗಾ ವಹಿಸಿ ತಮ್ಮ ರಾಜ್ಯಗಳಲ್ಲಿ ಒಳಮೀಸಲಾತಿ ಜಾರಿ ಮಾಡಿ ಅಗ್ರಪಂಕ್ತಿಯಲ್ಲಿವೆ. ಸರ್ಕಾರ ನಾಗಮೋಹನದಾಸ್ ಅವರ ಆಯೋಗಕ್ಕೆ ಸರಿಯಾಗಿ ಸಹಕಾರ ನೀಡುತ್ತಿಲ್ಲ. ಮಾಹಿತಿ ಅಪೂರ್ಣವಾಗಿವೆ. ಕಾಂತರಾಜು ವರದಿ ಸರ್ಕಾರದ ನಿರ್ಲಕ್ಷ್ಯದಿಂದ ಕಸದ ಬುಟ್ಟಿ ಸೇರಿದೆ. ಆಗಸ್ಟ್ 11 ರಿಂದ ವಿಧಾನಮಂಡಲ ಅಧಿವೇಶನ ಆರಂಭವಾಗುತ್ತಿದೆ. ಸರ್ಕಾರ ನಿರ್ಲಕ್ಷ್ಯ ತೋರಿದರೆ ಜನಾಕ್ರೋಶ ಉಗ್ರ ಸ್ವರೂಪ ತಾಳುತ್ತದೆ. ಅಷ್ಟೇ ಅಲ್ಲದೇ ಆಗಸ್ಟ್ 15ರ ನಂತರ ಕರ್ನಾಟಕ ಬಂದ್ ಮಾಡಲಾಬುದು ಎಂದು ಸರ್ಕಾರಕ್ಕೆ ಅವರು ಎಚ್ಚರಿಕೆ ನೀಡಿದರು.ಪ್ರತಿಭಟನೆಯ ನೇತೃತ್ವವನ್ನು ಗೌರವಾಧ್ಯಕ್ಷ ಮಲ್ಲಿಕಾರ್ಜುನ್ ಚಟ್ನಳ್ಳಿ,ಚಂದ್ರಕಾಂತ ನಾಟೀಕಾರ್,ಬಸವರಾಜ್ ಜವಳಿ, ಶಿವಕುಮಾರ್ ಆಜಾದಪೂರ್, ಸುಂದರಡಿ. ಸಾಗರ್, ಲಕ್ಕಪ್ಪ ಎಸ್. ಜವಳಿ, ಶ್ರೀಶೈಲ್ ಎಂ.ಜಿ., ರಮಾಕಾಂತ ವಿ. ಪೂಜಾರಿ,ಶಾಮ್ ನಾಟೀಕಾರ್, ಪರಮೇಶ್ವರ ಖಾನಾಪೂರ್, ಬಾಬು ಸುಂತಾಣ್, ದತ್ತು ಭಾಸಗಿ ಮುಂತಾದವರು ವಹಿಸಿದ್ದರು. ನೂರಾರು ಸಮಾಜದ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಸಂಪೂರ್ಣತ ಅಭಿಯಾನ ನಿಮಿತ್ತ ಸಮ್ಮಾನ ಸಮರೋಹ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.1:ಅರಣ್ಯ ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಇಂದು ಬೀದರ್ ಜಿಲ್ಲಾ ಪಂಚಾಯತನಲ್ಲಿ ಜಿಲ್ಲಾ ಆಡಳಿತ ಹಾಗೂ ಜಿಲ್ಲಾ ಪಂಚಾಯತ್ ಬೀದರ್ ಇವರ ಸಂಯುಕ್ತ ಆಶ್ರಯದಲ್ಲಿ ನೀತಿ ಆಯೋಗದ ಸಂಪೂರ್ಣತ ಅಭಿಯಾನ ಸಮ್ಮಾನ ಸಮರೋಹ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಬೀದರ ಜಿಲ್ಲೆಯಲ್ಲಿ ಔರಾದ ಕಮಲನಗರ,ಹುಮ್ನಾಬಾದ್, ಚಿಟಗುಪ್ಪ ತಾಲೂಕುಗಳು ಮಹತ್ವಕಾಂಕ್ಷಿ ತಾಲೂಕ ಕಾರ್ಯಕ್ರಮದಡಿ ಆಯ್ಕೆಯಾಗಿ ಕಳೆದ ಒಂದು ವರ್ಷದಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಮಹತ್ವಕಾಂಕ್ಷಿ ತಾಲೂಕು ಕಾರ್ಯಕ್ರಮವು ಜನರ ಪಾಲ್ಗೊಳ್ಳಯುವಿಕೆಯೊಂದಿಗೆ ಮತ್ತು ವಿವಿಧ ಇಲಾಖೆಗಳ ಮತ್ತು ವಿವಿಧ ಹಂತದ ಸರ್ಕಾರದ ನಡುವಿನ ಸಹಯೋಗ ಮತ್ತು ಸಹಕಾರ ವಿಧಾನದ ಮೂಲಕ ಜಿಲ್ಲೆಯಲ್ಲಿನ ನಾಲ್ಕು ತಾಲೂಕುಗಳಲ್ಲಿ ವಿಶಿಷ್ಟ ವಿನ್ಯಾಸದ ಅಭಿವೃದ್ಧಿ ತಂತ್ರಗಳ ಮೂಲಕ ಜನರ ಜೀವನ ಗುಣಮಟ್ಟ ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸುತ್ತಿದೆ.ಈ ಸಂಪೂರ್ಣತ ಅಭಿಯಾನದಡಿ ಆರೋಗ್ಯ ಶಿಬಿರಗಳು, ಕೃಷಿಗೆ ಸಂಬಂಧಿಸಿದ ಮಣ್ಣು ಪರೀಕ್ಷೆ ಗರ್ಭಿಣಿ ಮಹಿಳೆಯರಿಗೆ ಪೌಷ್ಟಿಕ ಆಹಾರದ ಮಹತ್ವದ ಕುರಿತು ಅರಿವು ಮೂಡಿಸಲಾಯಿತು

# ವಿಮಾ ಮೊತ್ತ ಕೋರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಬಪೂರಮ್ ಕೌತಳಂಮಂಡಲದನಿವಾಸಿಯಾದ ಚಲುವಾದಿ ಈರಮ್ಮ ಅವರು ಕರ್ನೂಲ್‌ನ ಚೋಲಮಂಡಲಂ ಎಂ.ಎಸ್.ಜನರಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ವ್ಯವಸ್ಥಾಪಕರ ವಿರುದ್ಧ, ಕಳ್ಳತನವಾದ ಟ್ರಾಕ್ಟರ್ ಟ್ರೈಲರ್ ಗೆ ವಿಮಾ ಪರಿಹಾರ ಮೊತ್ತರೂ.9,08,000/–ಕೋರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ದೂರುದಾರರು ಎದುರುದಾರರ ವಿಮಾ ಕಂಪನಿಯಿಂದ ತಮ್ಮ ವಾಹನ ಟ್ರಾಕ್ಟರ್ ನೋಂದಣಿ ಸಂಖ್ಯೆ:ಎ.ಪಿ–39/ಟಿ.ಎಸ್–7421ನೇ ಸಂಬಂಧಿಸಿದಂತೆ ಪಾಲಿಸಿ ಪಡೆದಿದ್ದು, ಈ ಪಾಲಿಸಿಯು 2022ರ ನವೆಂಬರ್ 22 ರಿಂದ 2023ರ ನವೆಂಬರ್ 24 ರ ವರೆಗೆ ಚಾಲ್ತಿಯಲ್ಲಿತ್ತು. ಬೊಬ್ಬನಹಾಳ್ ಗ್ರಾಮದ ಅವರ ಸ್ನೇಹಿತರಾದ ಮೋಹನ್ ರೆಡ್ಡಿ ಜಮೀನಿನ ಶೆಡ್ಡಿನಲ್ಲಿ 2023 ರ ಜೂನ್ 10 ರಂದು ಟ್ರಾಕ್ಟರ್ ಟ್ರೈಲರ್‌ನ್ನು ನಿಲ್ಲಿಸಿರುತ್ತಾರೆ.

ಮಾರನೇ ದಿನ ನೋಡಿದಾಗ ವಾಹನವು 2023ರ ಜೂನ್11 ರಂದು ಕಳ್ಳತನವಾಗಿದ್ದು, ಈ ಕುರಿತು ಸಂಬಂಧಪಟ್ಟ ವ್ಯಾಪ್ತಿಯ ಪೋಲಿಸ್ ಠಾಣೆಗೆ ದೂರು ನೀಡಿದ್ದರು. ಪೋಲಿಸ್ ಇಲ್ಲಾಖೆಯಿಂದ ವಾಹನ ಪತೆ–ಯಾಗದ ಬಗ್ಗೆ ಸಂಬಂಧಪಟ್ಟ ಕೊರ್ಟ್ ಗೆ "ಸಿ" ವರದಿ ಸಹ ಸಲ್ಲಿಸಿದ್ದರು.

ನಂತರ ಪಿರ್ಯಾದುದಾರರು ವಿಮಾ ಕಂಪನಿಗೆ ಮಾಹಿತಿ ನೀಡಿ ಅಗತ್ಯ ದಾಖಲೆಗಳನ್ನು ಸಲ್ಲಿಸಿದಾಗ್ಯೂ ಸಹ ಪರಿಹಾರ ಮೊತ್ತ ನೀಡಿದಿರುವ ಕಾರಣ ಆಯೋಗದಲ್ಲಿ ಪ್ರಕರಣ ದಾಖಲಿಸಿದ್ದರು. ಎದುರುದಾರರು ಪ್ರಕರಣದಲ್ಲಿ ಹಾಜರಾಗಿ ತಕರಾರು ಸಲ್ಲಿಸಿ, ವಾಹನ ಕಳ್ಳತನವಾದ 12 ದಿನಗಳ ನಂತರ ವಿಮಾ ಕಂಪನಿಗೆ ಹಾಗೂ ಪೋಲಿಸ್ ಠಾಣೆಗೆ ದೂರು ನೀಡಿರುವುದರಿಂದ ವಿಮಾ ಪಾಲಿಸಿಯ ಷರತ್ತನ್ನು ಉಲ್ಲಂಘಿಸಿದ್ದರು. ಅಲ್ಲದೇ ಕಳ್ಳತನವಾದ ವಾಹನ ದಾಖಲೆಗಳ ಪತ್ರಗಳನ್ನು ಸಲ್ಲಿಸಲು ಸೂಚಿಸಿದರೂ ದೂರುದಾರರು ಸಲ್ಲಿಸದೇ ಇರುವುದರಿಂದ ನೋ ಕ್ಲೈಮ್ ಎಂದು ವಿಲೇಗೊಳಿಸಿರುತ್ತಾರೆ ಎಂದು ಆಯೋಗಕ್ಕೆ ತಕರಾರು ಸಲ್ಲಿಸಿದ್ದರು.

ಆಯೋಗದ ಅಧ್ಯಕ್ಷರಾದ ಎನ್. ತಿಪ್ಪೇಸ್ವಾಮಿ ಹಾಗೂ ಮಹಿಳಾ ಸದಸ್ಯರಾದ ಮಾರ್ಲಾ ಶಶಿಕಲಾ ಇವರು ಉಭಯ ಪಕ್ಷಗಾರರ ವಾದ ವಿವಾದ ಆಲಿಸಿದ ನಂತರ ದೂರುದಾರರ ವಾಹನವು ಕಳ್ಳತನವಾದ ಬಗ್ಗೆ ಸಂಬಂಧಪಟ್ಟ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ ಬಳಿಕ ಬಳ್ಳಾರಿ ಜೆ.ಎಮ್.ಎಫ್.ಸಿ.ನ್ಯಾಯಲಯಕ್ಕೆ ಸಿ ವರದಿ ಸಲ್ಲಿಸಿರುವುದನ್ನು ಪರಿಶೀಲಿಸಿತು. ಎದುರುದಾರರು ಟ್ರಾಕ್ಟರ್ ಟ್ರೈಲರ್ ವಿಮಾ ಮೊತ್ತದ ಪರಿಹಾರ ನೀಡುವಲ್ಲಿ ಸೇವಾ ನ್ಯೂನ್ಯತೆ ಎಸಗಿದ್ದಾರೆ ಎಂದು ಪರಿಗಣಿಸಿ

ತಡವಾಗಿ ವಿಮಾ ಕಂಪನಿಗೆ ಮಾಹಿತಿ ಸಲ್ಲಿರುವುದು ಷರತ್ತು ಉಲ್ಲಂಘಿಸಿದಂತೆ ಆಗುವುದಿಲ್ಲ ಎಂಬ ಆಧಾರದಲ್ಲಿ ಪ್ರಕರಣವನ್ನು ಭಾಗಶ:ಪುರಸ್ಕರಿಸಿ ಎದುರುದಾರರು ಟ್ರಾಕ್ಟರ್ ಇಂಜಿನ್‌ನ ವಿಮಾ ರಕ್ಷಣೆಯ ಐ.ಡಿ ಮೊತ್ತ ರೂ.4,56,000,ಮಾನಸಿಕ ಹಿಂಸೆಗೆ ರೂ.10,000 ಮತ್ತು ಪ್ರಕರಣದ ವೆಚ್ಚ ರೂ.5000 ಆದೇಶದ ದಿನದಿಂದ 45 ದಿನಗಳೊಳಗಾಗಿ ದೂರುದಾರರಿಗೆ ಪಾವತಿಸಲು, ತಪ್ಪಿದಲ್ಲಿ ರೂ.4,56,000/– ಗಳಿಗೆ ವಾರ್ಷಿಕ ಶೇ.6 ರಷ್ಟು ಬಡ್ಡಿ ಪಾವತಿಸಲು ಸಹ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಆದೇಶಿದೆ.

# ಕೊಪ್ಪಳ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಯಾಗಿ ಟಿ.ಕೃಷ್ಣಮೂರ್ತಿ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾ ಪಂಚಾಯತ್ ನೂತನ ಉಪ ಕಾರ್ಯದರ್ಶಿಯಾಗಿಟಿ.ಕೃಷ್ಣಮೂರ್ತಿ ಅವರು ಜುಲೈ. 31 ರಂದು ಗುರುವಾರ ಅಪರಾಹ್ನ ಅಧಿಕಾರ ಸ್ವೀಕರಿಸಿದರು.

ಕೊಪ್ಪಳ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಧಾರವಾಡ ಜಿಲ್ಲೆಗೆ ವರ್ಗಾವಣೆಗೊಂಡ ಹಿನ್ನೆಲೆ ಈ ಸ್ಥಾನಕ್ಕೆ ಟಿ.ಕೃಷ್ಣಮೂರ್ತಿ ಅವರನ್ನು ಸರ್ಕಾರದ ನೇಮಿಸಿದೆ.

ಟಿ.ಕೃಷ್ಣಮೂರ್ತಿ ಅವರು ವಿಜಯಪುರ ಜಿಲ್ಲೆಯ ಸಹಕಾರ ಇಲಾಖೆಯಲ್ಲಿ ಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದರು. ಇವರು ಈ ಹಿಂದೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ಮತ್ತು ಕೊಪ್ಪಳ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಹಾಗೂ ಕೊಪ್ಪಳ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾಗಿ ಸೇವೆ ಸಲ್ಲಿಸಿದ ಅನುಭವವನ್ನು ಹೊಂದಿದ್ದಾರೆ.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಯೋಜನಾ ನಿರ್ದೇಶಕ ಪ್ರಕಾಶ ವಿ. ಸೇರಿದಂತೆ ಜಿಲ್ಲಾ ಪಂಚಾಯತ್ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಪರವಾನಿಗೆ ಕಡ್ಡಾಯ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೊಪ್ಪಳದ ಭಾಗ್ಯನಗರ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವ ಉದ್ದಿಮೆಗಳು ಕರ್ನಾಟಕ ಮುನ್ಸಿಪಾಲಟಿ ಬೈಲಾ 2020ರ ನಿಯಮಾನುಸಾರ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ತಂಬಾಕು ಮಾರಾಟ ಪರವಾನಿಗೆಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಕೊಪ್ಪಳ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿಗಳಾದ ಶಾಂತಮ್ಮ ಕಟ್ಟಿಮನಿ, ಸಾಮಾಜಿಕ ಕಾರ್ಯಕರ್ತೆ ಸರಸ್ವತಿ ಹಾಗೂ ಭಾಗ್ಯನಗರ ಪ.ಪಂಚಾಯತ ಮುಖ್ಯಾಧಿಕಾರಿ ಸುರೇಶ ಬಬಲಾದ ಇವರ ನೇತೃತ್ವದ ತಂಡವು ಜುಲೈ 24 ರಂದು ದಾಳಿ ನಡೆಸಿ ಪರವಾನಿಗೆ ರಹಿತ ಮಾರಾಟಗಾರರಿಗೆ ದಂಡ ವಿಧಿಸಿ ಸರ್ಕಾರದ ನಿಯಮದಂತೆ ಷರತ್ತುಗಳನ್ನು ಪಾಲಿಸಿ ಪರವಾನಿಗೆ ಪಡೆಯಲು ತಿಳಿಸಿದರು.

ಷರತ್ತುಗಳು: ನಿಯಮ 4ರ ಅನ್ವಯ ವ್ಯಾಪಾರ ಸ್ಥಳದಲ್ಲಿ ಕಡ್ಡಾಯವಾಗಿ 60+45 ಸೇಂ ಮೀ ಅಳತೆಯ ಧೂಮಪಾನ ನಿಷೇಧಿಸಿದೆ ಎಂಬ ನಾಮ ಫಲಕ ಅಳವಡಿಸುವುದು ಹಾಗೂ ಧೂಮಪಾನ ಆಗದಂತೆ ಮತ್ತು ಉತ್ತೇಜಿಸುವ ಬೆಂಕಿ ಪೊಟ್ಟಣ ಲೈಟರ್, ಆಶ್ ಟ್ರೇಗಳನ್ನು ಇಡುವಂತಿಲ್ಲ. ನಿಯಮ 5 ರ ಅನ್ವಯ ವ್ಯಾಪಾರ ಸ್ಥಳದ ಮುಂಭಾಗ ಅಥವಾ ಒಳಗಡೆ ತಂಬಾಕು ಉತ್ಪನ್ನಗಳ ಪ್ರತ್ಯಕ್ಷ ಹಾಗೂ ಪರೋಕ್ಷ ಜಾಹಿರಾತುಗಳನ್ನು ಮಾಡುವಂತಿಲ್ಲ. ನಿಯಮ 6ಎ ಅನ್ವಯ ವ್ಯಾಪಾರದ ಸ್ಥಳದಲ್ಲಿ ಕಡ್ಡಾಯವಾಗಿ 60+30ಸೆಂ.ಮೀ ಅಳತೆಯ 18 ವರ್ಷದ ಒಳಗಿನ ಮಕ್ಕಳಿಗೆ ತಂಬಾಕು ಮಾರಾಟ ನಿಷೇಧ ಎಂಬ 'ನಾಮಫಲಕ ಅಳವಡಿಸುವುದು ಹಾಗೂ 18 ವರ್ಷದ ಒಳಗಿನ ಮಕ್ಕಳಿಂದ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ ಹಾಗೂ ಅವರ ಮೂಲಕ ಮಾರಾಟ ಮಾಡಿಸುವಂತಿಲ್ಲ. ನಿಯಮ 6ಬಿ ಪ್ರಕಾರ ಶೈಕ್ಷಣಿಕ ಸಂಸ್ಥೆಯ 100 ಗಜದ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಲಾಗಿದೆ ಒಂದುವೇಳೆ ಉಲ್ಲಂಘನೆಆದಲ್ಲಿಪರವಾನಿಗೆಯನ್ನು ರದ್ದುಪಡಿಸಲಾಗುವುದು. ನಿಯಮ 7ರ ಪ್ರಕಾರ ತಂಬಾಕು ಉತ್ಪನ್ನಗಳ ಮೇಲೆ ಶೇಕಡಾ 85 ರಷ್ಟು ಆರೋಗ್ಯ ಎಚ್ಚರಿಕೆ ಚಿಹ್ನೆಗಳಿಲ್ಲದ ಹಾಗೂ ಸ್ಪಷ್ಟ ಚಿಹ್ನೆಗಳಿಲ್ಲದ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಕಡ್ಡಾಯವಾಗಿ ನಿಷೇಧಿಸಿದೆ ಅಲ್ಲದೆ ಈ ಉದ್ದಿಮೆಯನ್ನು ಪ್ರಾರಂಭಿಸುವ ಮುನ್ನ ಕರ್ನಾಟಕ ಮುನ್ಸಿಪಾಲಟಿ ಬೈಲಾ 2020ರ ಅನ್ವಯ ಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಬಳಸುವ ಸ್ಥಳಗಳ ನಿಯಂತ್ರಣ ಮತ್ತು ತಪಾಸಣೆ ಮಾಡುವುದು ಕಡ್ಡಾಯವಾಗಿದೆ ಎಂದು ಭಾಗ್ಯನಗರ ಪ.ಪಂಚಾಯತ ಮುಖ್ಯಾಧಿಕಾರಿ ಸುರೇಶ ಬಬಲಾದ ಅವರು ತಿಳಿಸಿದ್ದಾರೆ.

# ಡಾ.ಶರಣಪ್ರಕಾಶ ಪಾಟೀಲ: ರೈಲ್ವೆ ನಿಲುಗಡೆಗೆ ಮನವಿ

ರಾಯಚೂರು ಆಗಸ್ಟ್ 01– ವೈದ್ಯಕೀಯ ಶಿಕ್ಷಣ ಹಾಗೂ ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ನವದೆಹಲಿಗೆ ತೆರಳಿ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರನ್ನು ಶುಕ್ರವಾರ ಭೇಟಿ ಮಾಡಿದರು. ಸೇಡಂ ಮಾರ್ಗವಾಗಿ ತೆರಳುವ ರೈಲುಗಳನ್ನು ಮಳಖೇಡ ರೋಡ್ (ಸ್ಟೇಷನ್) ಹಾಗೂ ಕುರುಕುಂಟಾ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆಗೊಳಿಸಬೇಕು. ಸೇಡಂ ತಾಲೂಕಿನ ಅತಿದೊಡ್ಡ ಪಂಚಾಯತ್ ಹೊಂದಿರುವ ಮಳಖೇಡ ರೋಡ್ ರೈಲ್ವೆ ನಿಲ್ದಾಣದಲ್ಲಿ ಹಾಗೂ ಕುರುಕುಂಟಾ ರೈಲ್ವೆ ನಿಲ್ದಾಣದಲ್ಲಿ ರೈಲು ನಿಲುಗಡೆ ಯಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಕೇಂದ್ರ ಸಚಿವರಾದ ವಿ.ಸೋಮಣ್ಣ ಅವರಲ್ಲಿ ಮನವಿ ಮಾಡಿದರು. ರೈಲು ನಿಲುಗಡೆ ಕುರಿತಂತೆ ಮನವಿ ಸಲ್ಲಿಸಿದ ನಂತರ ಡಾ.ಶರಣಪ್ರಕಾಶ ಪಾಟೀಲ ಅವರು ಕೇಂದ್ರ ಸಚಿವರೊಂದಿಗೆ ಉಭಯ ಕುಶಲೋಪರಿ ನಡೆಸಿದರು.

# ಯುವ ಪೀಳಿಗೆ ವ್ಯಸನ ಮುಕ್ತರಾಗಿ ಸುಂದರ ಜೀವನ ರೂಪಿಸಿಕೊಳ್ಳಿ– ಜ್ಯೋತಿಲತಾ ಉಪನ್ಯಾಸಕರು.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಗುರುಮಠಕಲ್: ಪೂಜ್ಯ ಶ್ರೀ ಶ್ರೀ ಶ್ರೀ ಮ.ನಿ.ಪ್ರ. ಡಾ॥ ಮಹಾಂತ ಶಿವಯೋಗಿ ಸ್ವಾಮಿಜಿ ಅವರ ಜನ್ಮ ದಿನದ ಪ್ರಯುಕ್ತ ಇಂದು ತಹಸೀಲ್ದಾರ್ ಕಛೇರಿ ಗುರುಮಠಕಲ್ ದಿಂದ

ಬಸ್ ನಿಲ್ದಾಣ ಮಾರ್ಗದಿಂದ ಬಸವೇಶ್ವರ ವೃತ್ತದ ವರೆಗೆ

ತಾಲೂಕ ಆಡಳಿತ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ವೈದ್ಯಕೀಯ ಇಲಾಖೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಮಾಜ ಕಲ್ಯಾಣ ಇಲಾಖೆ, ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ವ್ಯಸನ ಮುಕ್ತ ದಿನಾಚರಣೆ–ಯ ಜಾಥಾ ಕಾರ್ಯಕ್ರಮದ ಜೊತೆಗೆ ಯುವ ಜನತೆಯಲ್ಲಿ ಜಾಗೃತಿ ಮೂಡಿಸುವ ಕಾರ್ಯ ಜರುಗಿತು.

ತಹಶೀಲ್ದಾರ್ ಶಾಂತಗೌಡ ಬೀರಾದರ ವ್ಯಸನದಿಂದ ದೂರ ಉಳಿಯಲು ಅಲ್ಲಿನೇರದಿರುವವರಿಗೆ ಪ್ರತಿಜ್ಞೆ ಮಾಡಿಸಿದರು, ಜ್ಯೋತಿಲತಾ ಉಪನ್ಯಾಸಕರು ಮಹಾಂತ ಶಿವಯೋಗಿಗಳು ತಮ್ಮ ಜೋಳಿಗೆ ಹಿಡಿದು ಜನರಲ್ಲಿ ದುಷ್ಚಟಗಳನ್ನು ಬಿಡಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ, ಆವರ ಮಾರ್ಗದಲ್ಲಿ ಯುವ ಪೀಳಿಗೆ ಮುಂದೆ ಸಾಗಲಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಶಾಂತಗೌಡ ಬೀರಾದರ, ಉಪ ತಹಶೀಲ್ದಾರ್ ನರಸಿಂಹಮೂರ್ತಿ, ಉಪ ತಹಶೀಲ್ದಾರ್ ಬಸವರಾಜ್ ಸಜ್ಜನ್, ಸೋಮಶೇಖರ್ ಪತ್ತರ, ಶಿವ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಭಾರತೀ ದಂಡೆ, ರಾಮಚಂದ್ರಪ್ಪ, ಮಹಿಪಾಲರೆಡ್ಡಿ, ಇನ್ನುಳಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ಮೀಸಲಾತಿಗಾಗಿ ಮಹಾಯುದ್ಧ ಮಾದಿಗರೇ ಬೆಂಗಳೂರು ಚಲೋ ಹೋರಾಟ 18 ಕ್ಕೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ರಾಜ್ಯ ಸರಕಾರದ ವಿರುದ್ಧ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಆಗಸ್ಟ್ 18ರಂದು ಬೆಂಗಳೂರು ನಲ್ಲಿ ಜರುಗುವ ಬೃಹತ್ ಪ್ರತಿಭಟನೆಯ ಪ್ರಯುಕ್ತ ಬುಧವಾರ 30–07–2025 ರಂದು ವಡಿಗೇರಾ ತಾಲೂಕಿನ ಡಾ. ಬಾಬುಜಗಜೀವನ ರಾಮ್ ವೃತ್ತ ದಲ್ಲಿ ಪೂರ್ವ ಭಾವಿ ಸಭೆ ಜರುಗಿತು ಈ ಕುರಿತು ಮಾದಿಗ ದಂಡೋರ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಕಾಶಪ್ಪ ಮಾದಿಗ ಹೆಗ್ಗಣಗೇರಾ ಕರ ಪತ್ರ ನೀಡಿ ಮಾತನಾಡಿದರು. ಮಾದಿಗರ ಮಹಾ ಯುದ್ಧ ಚಲೋ ಬೆಂಗಳೂರು ಹೋರಾಟಕ್ಕೆ ಸನ್ಮಾನ್ಯ ಪದ್ಮಶ್ರೀ ಮಂದಕೃಷ್ಣ ಮಾದಿಗ,

ರಾಜ್ಯ ಉಪಾಧ್ಯಕ್ಷ ಗಣೇಶ್ ದುಪ್ಪಲ್ಲಿ ಅವರು ಭಾಗವಹಿಸಿಲಿದ್ದಾರೆ. ಕಾರಣ ತಾಲೂಕಿನಿಂದ ಸಮಾಜದ ಭಾಂದವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಹೇಳಿದರು.

ಮಾದಿಗ ಸಮಾಜದ ಬಹು ದಿನಗಳ ಈಡೇರಿಕೆಗೆ ಹಲವು ದಿನಗಳಿಂದ ಪ್ರತಿಕ್ರಯಿಸಿದರು ಸರಕಾರ ಸ್ಪಂದನೆ ನೀಡುತ್ತಿಲ್ಲ ಅದಕ್ಕಾಗಿ ಪ್ರತಿಭಟನೆ ಒಂದೇ ದಾರಿಯಾಗಿದೆ ಮಾದಿಗ ಸಮಾಜದ ಬಂಧುಗಳು ತಮ್ಮ ತಮ್ಮ ವೈಯಕ್ತಿಕ ಕೆಲಸಗಳನ್ನು ಬದಿಗೊತ್ತಿ ಆಗಸ್ಟ್ 18 ರಂದು ಬೆಂಗಳೂರಿನಲ್ಲಿ ಜರುಗುವ ಹೋರಾಟದಲ್ಲಿ ಮಾದಿಗ ಭಾಂದವರು ಅತೀ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಈ ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದ್ರುನಡುಮನಿ ಮುಂಡರಗಿ, ಉಪಾಧ್ಯಕ್ಷ ಮಲ್ಲು ಬೆಳಗೆರೆ, ವಡಿಗೇರಾ ತಾಲೂಕ ಅಧ್ಯಕ್ಷ ಶರಣು, ತಾಲೂಕು ಗೌರವಧ್ಯಕ್ಷ ಮರೆಪ್ಪ, ಕಾರ್ಯದರ್ಶಿ ಕಿರಣ್, ಶಾಮು, ಕುಮಾರ್ ತುಮಕೂರು, ವಿದ್ಯಾರ್ಥಿ ಘಟಕ ತಾಲೂಕು ಅಧ್ಯಕ್ಷ ವಿಲ್ಸನ್ ಹಲಗೇರಾ, ಮಲ್ಲು ಕುಮನೂರ್, ಹಾಗೂ ಇನಿತರ ವಡಿಗೇರಾ ತಾಲೂಕಿನ ಮಾದಿಗ ದಂಡೊರ ಪದಾಧಿಕಾರಿಗಳು ಭಾಗವಹಿಸಿದ್ದರು

# ಲಿಂಗಸಗೂರು ಮುಕ್ತ ವಿಶ್ವವಿದ್ಯಾಲಯ ಪರೀಕ್ಷೆಗಳಲ್ಲಿ ಸಮೂಹ ನಕಲು

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು, ಆ.1: ಲಿಂಗಸೂಗೂರು ತಾಲೂಕಿನ ಏಕೈಕ ಕಲಿಕಾರ್ಥಿ ಸಹಾಯ ಅಧ್ಯಯನ ಕೇಂದ್ರ ಹಾಗೂ ಪರೀಕ್ಷಾ ಕೇಂದ್ರದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಧಾರವಾಡ ಮೈಸೂರು ನಡೆಸಿದ ಬಿ.ಎಡ್ ಪರೀಕ್ಷೆಯಲ್ಲಿ ಶೋಕಾಜನಕ ರೀತಿಯಲ್ಲಿ ಸಮೂಹ ನಕಲು ನಡೆಯುತ್ತಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ಕತ್ತಲ ಗೊಳಿಸುವಂತಹದ್ದಾಗಿದ್ದು ಮುಕ್ತ ವಿಶ್ವವಿದ್ಯಾಲಯದ ಶಿಸ್ತಿಗೆ ದೊಡ್ಡ ಪೆಟ್ಟು ನೀಡಿದೆ.

ಸ್ಥಳೀಯ ಶಿಕ್ಷಣ ಪ್ರೇಮಿಗಳು, ಪೋಷಕರು ಹಾಗೂ ಸಾಮಾಜಿಕ ಕಾರ್ಯಕರ್ತರು ಈ ವಿಷಯವನ್ನು ತೀವ್ರವಾಗಿ ಗಂಭೀರವಾಗಿ ಪರಿಗಣಿಸಿ, ಈ ನಕಲು ಪದ್ದತಿಯನ್ನು ತಡೆಯಲು ಶಿಘ್ರ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳಾದ ಉನ್ನತ ಶಿಕ್ಷಣ ಇಲಾಖೆ, ಪರೀಕ್ಷಾ ಪ್ರಾಧಿಕಾರ ಹಾಗೂ ವಿಶ್ವವಿದ್ಯಾಲಯದ ಆಡಳಿತ ಮಂಡಳಿಗೆ ಒತ್ತಾಯಿಸಿದ್ದಾರೆ.

ವಿಶೇಷವಾಗಿ ಈ ಕೆಳಗಿನ ಕ್ರಮಗಳನ್ನು ಜಾರಿಗೆ ತರಲು ಆಗ್ರಹಿಸಲಾಗಿದೆ:

. ಲಿಂಗಸೂಗೂರಿನ ಬಿ.ಎಡ್ ಪರೀಕ್ಷಾ ಕೇಂದ್ರವನ್ನು ಕೂಡಲೇ ಬಂದ್ ಮಾಡಬೇಕು.

ನಕಲು ವ್ಯವಸ್ಥೆಗೆ ಸಹಕರಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಜಾರಿಗೆ ತರಬೇಕು.

ಮುಕ್ತ ವಿಶ್ವವಿದ್ಯಾಲಯದ ಶ್ರೇಷ್ಟತೆಯನ್ನು ಕಾಪಾಡುವ ನಿಟ್ಟಿನಲ್ಲಿ ಪರಿಷ್ಕೃತ ತಪಾಸಣಾ ಕ್ರಮಾವಳಿಗಳನ್ನು ಜಾರಿಗೆ ತರಬೇಕು.

ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ವ್ಯವಸ್ಥೆ, ನಿರೀಕ್ಷಕರ ತಂಡ ಮತ್ತು ತಪಾಸಣಾ ಅಭಿಯಾನವನ್ನು ಬಲಪಡಿಸಬೇಕು.

ಇದನ್ನು ಲಿಂಗಸೂಗೂರು ತಾಲ್ಲೂಕಿನ ಜನತೆ ಶಿಕ್ಷಣ ಕ್ಷೇತ್ರದಲ್ಲಿ ಶಿಸ್ತಿನ ವ್ಯವಸ್ಥೆ ಪಟ್ಟುಹಿಡಿಯಲು ಸರ್ಕಾರದ ಉನ್ನತ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸುತ್ತಿದ್ದಾರೆ.

ಸಮರ್ಪಕ ರಸಗೊಬ್ಬರ ಪೂರೈಕೆ ಕುರಿತು ಸಚಿವ ಜೆಪಿ ನಡ್ಡಾ ಜೊತೆ ಸಂಸದ ಕುಮಾರ

# ನಾಯಕ ಚರ್ಚೆ ರೈತರ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ಪೂರೈಸಿ– ಜಿ ಕುಮಾರ ನಾಯಕ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ರಾಜ್ಯದಾದ್ಯಂತ ಉತ್ತಮ ಮಳೆಯಾಗಿದ್ದರಿಂದ ಮುಂಗಾರು ಕೃಷಿ ಚಟುವಟಿಕೆಗಳು ಚುರುಕುಗೊಂಡಿವೆ. ರೈತರ ಬೆಳೆಗಳಿಗೆ ಅನುಗುಣವಾಗಿ ರೈತರ ಬೇಡಿಕೆಯಂತೆ ರಸಗೊಬ್ಬರ ಪೂರೈಕೆ ಮಾಡಬೇಕೆಂದು ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಇಲಾಖೆ ಸಚಿವ ಜೆ.ಪಿ.ನಡ್ಡಾ ಅವರೊಂದಿಗೆ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ ನಾಯಕ ಅವರು ಚರ್ಚಿಸಿದರು.

ನವದೆಹಲಿಯ ಕೇಂದ್ರ ಸಚಿವರ ಕಾರ್ಯಾಲಯದಲ್ಲಿ ಭೇಟಿ ಮಾಡಿ ರಾಜ್ಯದಲ್ಲಿ 1.65 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಕುರಿತು ಮುಖ್ಯಮಂತ್ರಿಗಳು ಪತ್ರ ಬರೆದಿದ್ದಾರೆ, ರೈತರ ಬೇಡಿಕೆ ಹೆಚ್ಚಿರುವುದರಿಂದ ಶೀಘ್ರ ಹೆಚ್ಚುವರಿ ರಸಗೊಬ್ಬರ ಹಂಚಿಕೆ ಮಾಡುವಂತೆ ಮಾನವಿ ಮಾಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ರೈತರು ಅನುಭವಿಸುತ್ತಿರುವ ಸಂಕಷ್ಟಗಳ ಬಗ್ಗೆ ಸಚಿವರ ಗಮನಕ್ಕೆ ತಂದರು.

ರಾಜ್ಯದಲ್ಲಿಉತ್ತಮಮಳೆಯಾಗುತ್ತಿರುವ ಕಾರಣ ಎಲ್ಲೆಡೆ ಕೃಷಿ ಚಟುವಟಿಕೆ ಬಿರುಸುಗೊಂಡಿದೆ. ಹಾಗಾಗಿ ರಸಗೊಬ್ಬರಕ್ಕೆ ರೈತರಿಂದ ಹೆಚ್ಚಿನ ಬೇಡಿಕೆಯಿದೆ. ರೈತರ ಬೇಡಿಕೆ ಸಮಯದಲ್ಲಿ ರಸಗೊಬ್ಬರ ಪೂರೈಸದಿದ್ದರೆ ರೈತರು ಸಂಕಷ್ಟ ಎದುರಿಸಲಿದ್ದಾರೆ. ನಮಗೆಲ್ಲ ತುತ್ತು ಅನ್ನ ನೀಡುವ ದೇಶದ ಬೆನ್ನೆಲುಬಾದ ರೈತರನ್ನು ಸಂರಕ್ಷಿಸಬೇಕಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ವ್ಯಸನಮುಕ್ತ ವ್ಯಕ್ತಿ, ಕುಟುಂಬ ಹಾಗೂ ಸಮಾಜಕ್ಕಾಗಿ

# ಅವಿರತವಾಗಿ ಶ್ರಮಿಸಿದ ಡಾ.ಮಹಾಂತ ಶಿವಯೋಗಿಗಳು ಡಾ.ಎಂ.ಎಸ್.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:1–: ಮಹಾಂತ ಜೋಳಿಗೆ ಎಂಬ ವಿಶೇಷ ಯೋಜನೆ ಮೂಲಕ ಡಾ.ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ, ಕುಟುಂಬ ,ಸಮಾಜ ಹಾಗೂ ಗ್ರಾಮಗಳ ನಿರ್ಮಾಣಕ್ಕೆ ಅವಿರತವಾಗಿ ಶ್ರಮಿಸಿದರು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ಎಂ.ಎಸ್. ಪಾಟೀಲ್ ಅವರು ಬಣ್ಣಿಸಿದರು.

ನಗರದ ಜವಾಹರ್ ಸಂಯುಕ್ತ ಪದವಿಪೂರ್ವ ಕಾಲೇಜುದಲ್ಲಿ ಇಂದು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವೈದ್ಯಕೀಯ ವಿಜ್ಞಾನ ಸಂಸ್ಥೆ, ಶಿಕ್ಷಣ ಇಲಾಖೆ ಹಾಗೂ ಜವಾಹರ್ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಿದ್ದ,ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವ್ಯಸನಮುಕ್ತ ದಿನಾಚರಣೆಯಾಗಿ ಆಚರಣೆ ಕುರಿತ ಕಾರ್ಯಕ್ರಮವನ್ನು ಉದ್ಘಾಟಿಸಿ,ಡಾ.ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪೂಜೆ, ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯದಾದ್ಯಂತ ಮಾತ್ರ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನವನ್ನು ವ್ಯಸನಮುಕ್ತ ದಿನಾಚರಣೆಯಾಗಿ ಆಚರಿಸುತ್ತಿರುವುದು ವಿಶೇಷ.ರಾಜ್ಯ ಸರ್ಕಾರದ ನಿರ್ದೇಶನದಂತೆ ಈ ಕಾರ್ಯಕ್ರಮ ಆಯೋಜಿಸಿದ್ದು, ರಾಜ್ಯವನ್ನು ವ್ಯಸನಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತರಾಗಲು ಈ ದಿನಾಚರಣೆ ಪ್ರೇರಣೆಯಾಗಿದೆ ಎಂದು ಹೇಳಿದರು.

ಮದ್ಯಪಾನ,ತಂಬಾಕು,ನಶೆಯುಕ್ತ ಪದಾರ್ಥಗಳ ಮಿತಿಮೀರಿದ ಸೇವನೆಯು ವ್ಯಸನವಾಗಿ ಮಾರ್ಪಾಡಾಗುತ್ತದೆ. ದೇಹದ ಅಂಗಾಂಗಗಳ ಹಾನಿಗೆ, ಕ್ಯಾನ್ಸರ್ ಗೂ ಕಾರಣವಾಗುತ್ತದೆ. ಕಾರಣ ಇಂತಹ ದುಶ್ಚಟಗಳಿಂದ ಯುವಕರು ದೂರವಿದ್ದು,ಶ್ರಮಜೀವಿಗಳಾಗಿ, ದೇಶದ ಆರ್ಥಿಕ ವೃದ್ಧಿಯಲ್ಲಿ ಕೈಜೋಡಿಸಬೇಕು.ಮೋಬೈಲ್ ಗೀಳು ಸಹ ಹಾನಿಕಾರಕವಾಗಿದ್ದು,ಮಕ್ಕಳನ್ನು ಇದರಿಂದ ದೂರವಿರಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಸಲಹೆಗಾರ, ಮಹಾಲಕ್ಷ್ಮಿ ಸಜ್ಜನ್ ಅವರು, ಇತ್ತೀಚೆಗೆ ಹೆಚ್ಚಿನ ಯುವಜನಾಂಗ ಮದ್ಯಪಾನ, ವಿವಿಧ ದುಶ್ಚಟಗಳ ದಾಸರಾಗುತ್ತಿರುವುದು ಸರಿಯಲ್ಲ. ಪಾಲಕರ ಶ್ರಮಕ್ಕೆ ಗೌರವ ನೀಡಿ ಉನ್ನತ ಶಿಕ್ಷಣ, ಉದ್ಯೋಗದಲ್ಲಿ ಉನ್ನತ ಹುದ್ದೆ ಪಡೆದು ತಮ್ಮ ಹಾಗೂ ಕೌಟುಂಬಿಕ ಜೀವನ ಸುಧಾರಿಸಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಜವಾಹರ್ ಸಂಯುಕ್ತ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಶ್ರೀ ಶರಣಪ್ಪ ರಾಹುಲ್ ಅವರು, ಸಮಾಜಪರ ಕಳಕಳಿ ಹೊಂದಿದ್ದ ಡಾ.ಮಹಾಂತಶಿವಯೋಗಿಗಳಜೀವನ ಸಾಧನೆ, ಮಾರ್ಗದರ್ಶಿಯಾಗಿವೆ. ಯಾರೂ ಕೂಡ ದುಶ್ಚಟಗಳಿಗೆ ಬಲಿಯಾಗಬಾರದು. ಕೆಟ್ಟ ವ್ಯಸನಗಳಿಂದ ದೂರವಿರಬೇಕು. ಗುಣವಂತ, ಶಿಕ್ಷಣವಂತ ಹಾಗೂ ಉದ್ಯೋಗವಂತರಾಗಿ ಕುಟುಂಬಕ್ಕೆ ಆಸರೆಯಾಗಬೇಕು. ವಿಶೇಷವಾಗಿ ಮಕ್ಕಳ

ಬಾಲ್ಯಜೀವನಸುರಕ್ಷಿತವಾಗಿರುವಂತೆ ಪಾಲಕರು ನೋಡಿಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಎ.ಎಸ್.ಐ ನಾಗಮ್ಮ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕನಿರ್ದೇಶಕಉತ್ತರಾದೇವಿ ಮಠಪತಿ,ಉಪಸ್ಥಿತರಿದ್ದರು.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು ಸುಲೈಮಾನ್ ನದಾಫ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಉಪನ್ಯಾಸಕರಾದ ವೆಂಕಪ್ಪ ಅವರು ಕಾರ್ಯಕ್ರಮ ನಿರೂಪಿಸಿ ಕೊನೆಯಲ್ಲಿ

ವಂದಿಸಿದರು.ಸುಷ್ಮಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು.

# ಕ್ರೀಡೆಗಳು ಆತ್ಮವಿಶ್ವಾಸ ಹೆಚ್ಚಿಸಲು ಸಹಕಾರಿ: ಹನುಮಂತಪ್ಪ ಬನ್ನಿಕೊಪ್ಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶಿಕ್ಷಣ ಎಷ್ಟು ಮುಖ್ಯವೋ ಅಷ್ಟೇ ಮುಖ್ಯ ಕ್ರೀಡೆಯೂ ಆಗಿದೆ. ಶಿಕ್ಷಣವು ಜ್ಞಾನ ಮತ್ತು ಕೌಶಲ್ಯಗಳನ್ನು ಒದಗಿಸಿದರೆ, ಕ್ರೀಡೆಯು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಸುಧಾರಿಸುತ್ತದೆ, ತಂಡದ ಮನೋಭಾವವನ್ನು ಬೆಳೆಸುತ್ತದೆ ಮತ್ತು ಜೀವನ ಕೌಶಲ್ಯಗಳನ್ನು ಕಲಿಸುತ್ತದೆ. ಎಂದು ಗ್ರಾಮ ಪಂಚಾಯತ್ ಅಧ್ಯಕ್ಷ ಹನುಮಂತಪ್ಪ ಬನ್ನಿಕೊಪ್ಪ ಹೇಳಿದರು.

ಇಂದು ತಾಲೂಕಿನ ಮಸಬಹಂಚಿನಾಳ ಗ್ರಾಮದ ಗೌರಮ್ಮ ಬಸಪ್ಪ ಆಚಾರ್ ಸರ್ಕಾರಿ ಫ್ರೌಢ ಶಾಲೆಯಲ್ಲಿ 2025–26ನೇ ಸಾಲಿನ ಕುಕನೂರ ಪೂರ್ವ ವಲಯ ಮಟ್ಟದ ಫ್ರೌಢ ಶಾಲೆಗಳ ಕ್ರೀಡಾಕೂಟ ಸಮಾರಂಭ ನಡೆಯಿತು.

ಈ ಕ್ರೀಡಾಕೂಟವನ್ನು ಉದ್ದೇಶಿಸಿ ಮಾತನಾಡಿದ ಅವರು,'ಕ್ರೀಡೆಗಳು ಆತ್ಮವಿಶ್ವಾಸವನ್ನು ಹೆಚ್ಚಿಸಲು ಮತ್ತು ಮಾನಸಿಕ ಸ್ಥಿತಿಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಮುಂದೊಂದು ದಿನ ದೇಶದ ಸೈನಿಕರಾಗಿ ಹಾಗೂ ಉನ್ನತ ಮಟ್ಟದಲ್ಲಿ ಗುರುತಿಸಿಕೊಳ್ಳಲು ಕ್ರೀಡೆ ಸಹಾಯಕವಾಗಲಿದೆ ಎಂದರು.

ದೈಹಿಕ ಶಿಕ್ಷಣಾಧಿಕಾರಿ ವೀರಭದ್ರಪ್ಪ ಅಂಗಡಿ, ಗ್ರಾಮದ ಹಿರಿಯ ಮುಖಂಡ ಪ್ರಭು ಆಚಾರ್, ವಿವಿಧ ಶಾಲೆಯ ದೈಹಿಕ ಶಿಕ್ಷಕರು, ಸಿಆರ್‌ಪಿ ಪೀರ್‌ಸಾಬ್ ದಫೇದಾರ್, ಯುವ ನಾಯಕ ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ಮಹೇಶ್ ಗಾವರಾಳ್, ಅಂದಪ್ಪ ರಾಜೂರು, ರಾಘವೇಂದ್ರದೇಸಾಯಿ, ದೇವಪ್ಪ ದ್ಯಾಪುರ, ಪ್ರಭುಗೌಡ ಪಾಟೀಲ್, ಕಮಲಮ್ಮ.ಹಾ. ಉ. ಸಂಘದ ನಿರ್ದೇಶಕರು, ಶಿಕ್ಷಕ ವರ್ಗದವರು, ಊರಿನ ಗುರು ಹಿರಿಯರು, ಕ್ರೀಡಾ ಪ್ರೇಮಿಗಳು, ಕ್ರೀಡಾಪಟುಗಳಿದ್ದರು.

# ಗೌತಮ್ ಕಾಲೇಜಿನಲ್ಲಿ ದೀಪೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಆ.1:– ನಗರದ ಗೌತಮ್ ನರ್ಸಿಂಗ್ ಮಹಾವಿದ್ಯಾಲಯದ ವತಿಯಿಂದ ಇಂದು ನಡೆದ ದೀಪೋತ್ಸವ ಮತ್ತು ಮೊದಲ ವರ್ಷದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಲಾಯಿತು. ಮಣಿಪಾಲ ಆಸ್ಪತ್ರೆಯ ನರ್ಸಿಂಗ್ ಮುಖ್ಯಸ್ಥೆ ಜೀಜಿರಾಜನ್ ಅವರು ಭಾಗವಹಿಸಿ ನರ್ಸಿಂಗ್ ತರಬೇತಿಯಲ್ಲಿ ಇರಬೇಕಾದ ರೊಗಿಗಳಿಗೆ ಆದ್ಯತೆ ಮತ್ತು ನರ್ಸಿಂಗ್ ವಿದ್ಯಾರ್ಥಿಗಳ ಕಲಿಕಾ ವಿಚಾರವನ್ನು ತಿಳಿಸಿದರು. ಸಂಸ್ಥೆಯ ಮುಖ್ಯಸ್ಥರಾದ ಡಾ. ಎ.ಟಿ.ಎಸ್. ಗಿರಿಯವರು ಮಾತನಾಡಿ, ರೋಗಿಗಳ ಜೊತೆ ಮೃಧುಸ್ವಭಾವ ಮತ್ತು ರೋಗಿಗಳ ಆರೈಕೆಯನ್ನು ಶ್ರದ್ಧೆಯಿಂದ ಮಾಡಬೇಕೆಂದು ತಿಳಿಸಿದರು. ಅಧ್ಯಕ್ಷೆ ಲೀಲಾವತಿ, ಆಡಳಿತಾಧಿಕಾರಿ ಸತೀಶ್ ಕುಮಾರ್, ಮಣಿಮಾಲ, ರೀನಾ ಮತ್ತಿತರರು ಉಪಸ್ಥಿತರಿದ್ದರು.

ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕ ಆಲಂಬಾಷ ಅಭಿಪ್ರಾಯ

# ಯುವ ಸಮುದಾಯ ವಿದ್ಯೆಗೆ ದಾಸರಾಗಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.0–ಯುವಸಮುದಾಯ ವಿದ್ಯೆಗೆದಾಸರಾಗಬೇಕೇ ಹೊರತು, ದುಶ್ಚಟ ವ್ಯಸನಗಳಿಗಲ್ಲ ಎಂದು ಸತ್ಯಂ ಶಿಕ್ಷಣ ವಿದ್ಯಾಲಯದ ಸಹಾಯಕಪ್ರಾಧ್ಯಾಪಕ ಆಲಂಬಾಷ ಅವರು ಹೇಳಿದರು.



ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಬೆಂಗಳೂರು ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಛಯ ಆವರಣದ ಹೊಂಗಿರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆಯ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಸದೃಢ ದೇಹದಲ್ಲಿ, ಸದೃಢ ಮನಸ್ಸು ಹೊಂದಿರಲು ಯುವಕರು ದುಶ್ಚಟಗಳಿಗೆ ದಾಸರಾಗಬಾರದು. ಸ್ವಾಸ್ಥ್ಯ ಸಮಾಜನಿರ್ಮಾಣವಾಗಬೇಕೆಂದರೆ ಎಲ್ಲರೂ ವ್ಯಸನಮುಕ್ತ ಸಮಾಜದೆಡೆಗೆ ಸಾಗಬೇಕಿದೆ ಎಂದರು.

ದುಶ್ಚಟಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ, ಮನಸ್ಸು ಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು ಡಾ.ಮಹಾಂತ ಶಿವಯೋಗಿಗಳು ಎಂದು ತಿಳಿಸಿದರು.

ಹನ್ನೆರಡನೆಯ ಶತಮಾನದ ಬಸವಣ್ಣನವರ ಕಾಲದಲ್ಲಿನ ಶರಣರು ಸಮ–ಸಮಾಜ ನಿರ್ಮಾಣಕ್ಕೆ ಸಾಕಷ್ಟು ಶ್ರಮಿಸಿದ್ದಾರೆ.

ನಮ್ಮ ದೇಶ ಅತಿಹೆಚ್ಚು ಯುವ ಪೀಳಿಗೆಯನ್ನು ಹೊಂದಿದ ದೇಶ. ಯಾವುದೇ ರೀತಿಯ ದುಶ್ಚಟಗಳಿಗೆ ಬಲಿಯಾಗದೇ ಅವುಗಳನ್ನು ಮೆಟ್ಟಿ ನಿಲ್ಲಬೇಕು. ಯುವಕರು ತಂದೆ–ತಾಯಿಯವರ ಆಶೋತ್ತರಗಳನ್ನು ಈಡೇರಿಸುವಂತವರಾಗಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಂ ಅವರು ಮಾತನಾಡಿ, ಮನಸ್ಸು, ದೇಹ, ಕುಟುಂಬ ಹಾಗೂ ದೇಶದ ಸ್ವಾಸ್ಥ್ಯ ಹಾಳು ಮಾಡುವ ವ್ಯಸನ ದಾಸ್ಯವೂ ಸಾಮಾಜಿಕ ಪಿಡುಗುಗಳಲ್ಲಿ ಒಂದು. ಹಾಗಾಗಿ ಇಂದಿನ ಯುವಪೀಳಿಗೆಯು ಯಾವುದೇ ತರಹದ ದುಶ್ಚಟಗಳಿಗೆ ಬಲಿಯಾಗದೇ ಉತ್ತಮ ಆರೋಗ್ಯಕರ ಜೀವನವನ್ನು ರೂಪಿಸಿಕೊಳ್ಳಬೇಕು. ಮುಖ್ಯವಾಗಿ ವಿದ್ಯಾರ್ಥಿಗಳು ಮೊಬೈಲ್ ಗೀಳಿಗೆ ಬೀಳಬಾರದು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗದ ಅಧಿಕಾರಿ ಶರ್ಮಸ್ ವಲಿ ಅವರು ಮಾತನಾಡಿ, ಮಾದಕ ವಸ್ತು ವ್ಯಸನಿಗಳಾಗಿದ್ದಲ್ಲಿ ರಾಜ್ಯ ಸರ್ಕಾರವು ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಟೆಲಿ ಮೆನಸ್ ಎಂಬ 14416 ಉಚಿತ ಸಹಾಯವಾಣಿ ಆರಂಭಿಸಿದ್ದು, ಸಹಾಯವಾಣಿಗೆ ಕರೆ ಮಾಡಿ ಆಪ್ತಸಮಾಲೋಚನೆ ಪಡೆಯಬಹುದು ಎಂದರು.

ಕಾರ್ಯಕ್ರಮದಲ್ಲಿ ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ–ಯ ಅಂಗವಾಗಿ ಮದ್ಯಪಾನ, ಮಾದಕವಸ್ತು, ತಂಬಾಕು ವಸ್ತುಗಳ ವ್ಯಸನ ಮುಕ್ತನಾಗುತ್ತೇನೆ ಎಂದು ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಹಿಂದುಸ್ತಾನಿ ಗಾಯಕ ನಾಗಭೂಷಣ ಬಾಪುರೆ ಅವರು ವಚನ ಸಂಗೀತ ಪ್ರಸ್ತುತಪಡಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ಗುರುರಾಜ.ವಿ.ಸಿ., ಸಿಬ್ಬಂದಿಗಳಾದ ವಿಜಯ್ ಕುಮಾರ್, ಮಲ್ಲೇಶಪ್ಪ, ಹನುಮೇಶ್, ಹನುಮಂತಪ್ಪ, ತೇಜ, ದಿವಾಕರ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

**ಗಮನಸೆಳೆದ ಜಾಗೃತಿ ಜಾಥಾ:**

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಡಾ.ಮಹಾಂತ ಶಿವಯೋಗಿಗಳ ಜನ್ಮದಿನದ ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕಾಲೇಜು ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ನಡೆಯಿತು.

ಜಾಥಾಗೆ ಸರ್ಕಾರಿ (ಮಾಪು) ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಸುಂಕಪ್ಪ ಅವರು ಚಾಲನೆ ನೀಡಿದರು.

ಜಾಥಾವು ನಗರದ ಸರ್ಕಾರಿ (ಮಾಪು) ಪದವಿ ಪೂರ್ವ ಕಾಲೇಜು ಆವರಣದಿಂದ ಆರಂಭವಾಗಿ ಡಾ.ರಾಜ್‌ಕುಮಾರ್ ರಸ್ತೆಯಲ್ಲಿನ ಸಾಂಸ್ಕೃತಿಕ ಸಮುಚ್ಛಯ ಆವರಣದ ಹೊಂಗಿರಣದವರೆಗೆ ತಲುಪಿ ಸಂಪನ್ನಗೊಂಡಿತು.

ಜಾಥಾದಲ್ಲಿ 'ಕುಡಿತಕ್ಕಿಳಿಯುವ ಮೊದಲು ನೆನಪಾಗಲಿ–ನಿಮ್ಮ ಮುದ್ದು ಮಗುವಿನ ತೊದಲು', 'ಬಿಡಿರೋ ಬಿಡಿರೋ ಕುಡಿತವ–ಕಾಣಿರೋ ಸುಖ ಸಂತೋಷದ ನವಜೀವನ', 'ಆಗದಿರಿ ಮಾದರಿ ವ್ಯಸನಿ–ಆಗಿರಿ ಬದುಕಿಗೆ ಸಂಜೀವಿನಿ', 'ಮಡದಿ ಮಕ್ಕಳು ಸುಂದರ ಸಂಸಾರ–ಕುಡಿತದಿಂದ ಎಲ್ಲವೂ ನಿಸ್ಸಾರ', 'ಕುಡಿತದಾಸೆಗೆ ಕಡಿವಾಣ–ಹಾಕಿದವನೇ ಬಲುಜಾಣ' ಎನ್ನುವ ಜಾಗೃತಿ ಮಾಹಿತಿ ಫಲಕಗಳು ವಿದ್ಯಾರ್ಥಿಗಳ ಕೈಯಲ್ಲಿ ರಾರಾಜಿಸಿದವು.

## ತಾಯಿ, ಮಕ್ಕಳು ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ಕುರುಗೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಮತ ಎನ್ನುವ 25 ವರ್ಷದ ಮಹಿಳೆ ಮತ್ತು ಮಕ್ಕಳಾದ 04 ವರ್ಷದ ದೇವಂತಾ ರೆಡ್ಡಿ ಹಾಗೂ 02 ವರ್ಷದ ಧನ್ವತಾ ಎನ್ನುವ ಮಗು ಜು.29 ರಂದು ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

*ಮಹಿಳೆ ಮತ್ತು ಮಕ್ಕಳ ಚಹರೆ:*

ಮಮತ: ಎತ್ತರ 4.5 ಅಡಿ, ದುಂಡು ಮುಖ, ಗೋಧಿ ಮೈಬಣ್ಣ, ದುಂಡನೆಯ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಹಸಿರು ಬಣ್ಣದ ಟಾಪ್ ಮತ್ತು ಕ್ರಿಮ್ ಬಣ್ಣದ ಪ್ಯಾಂಟ್ ಧರಿಸಿರುತ್ತಾಳೆ. ಕನ್ನಡ, ತೆಲುಗು ಮತ್ತು ಹಿಂದಿ ಭಾಷೆ ಮಾತನಾಡುತ್ತಾಳೆ.

ದೇವಂತಾ ರೆಡ್ಡಿ: ಸುಮಾರು 03 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾದಾರಣ ಮೈಕಟ್ಟು ಹೊಂದಿದ್ದು, ಕಾಣೆ–ಯಾದ ಸಂದರ್ಭದಲ್ಲಿ ಕೆಂಪು ಅಂಗಿ, ಬಿಳಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ಧನ್ವತಾ: ಸುಮಾರು 02 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾದಾರಣ ಮೈಕಟ್ಟು ಹೊಂದಿದ್ದು, ಕಾಣೆ–ಯಾದ ಸಂದರ್ಭದಲ್ಲಿ ಬಿಳಿ ಅಂಗಿ, ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ತೆಲುಗು ಭಾಷೆ ಮಾತನಾಡುತ್ತಾಳೆ.

ಮೇಲ್ಕಂಡ ಚಹರೆಗುರುತುಗಳುಳ್ಳ ಮಹಿಳೆ ಮತ್ತು ಮಕ್ಕಳ ಬಗ್ಗೆ ಮಾಹಿತಿ ದೊರೆತಲ್ಲಿ ಕುರುಗೋಡು ಪೊಲೀಸ್ ಠಾಣೆಯ ದೂ.08392–263433 ಅಥವಾ ಮೊ.9480803051,9480803039 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ತಿ ಪ್ರಮಾಣದ ವಿಮಾ ಪರಿಹರ ಮೊತ್ತ ಪಾವತಿಸುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ಸಿರುಗುಪ್ಪ ತಾಲ್ಲೂಕಿನ ಅರಳಿಗನೂರು ಗ್ರಾಮದ ಡಿ.ರಾಮಲಿಂಗ ಆಚಾರಿ ಅವರ ಶೆಡ್‌ಗೆ ಬೆಂಕಿ ತಗುಲಿ ಸುಟ್ಟುಭಸ್ಮವಾದ ಹಾನಿಗೆ ಬಳ್ಳಾ–ರಿಯ ಮೆ.ನ್ಯೂ ಇಂಡಿಯಾ ಅಶೂರೆನ್ಸ್ ಕಂಪನಿ ಲಿಮಿಟೆಡ್ ವಿಭಾಗೀಯ ವ್ಯವಸ್ಥಾಪಕರಿಗೆ ಪೂರ್ತಿ ಪ್ರಮಾಣದ ವಿಮಾ ಪರಿಹಾರ ಮೊತ್ತ ಪಾವತಿಸುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಆದೇಶಿಸಿದೆ.

ದೂರುದಾರ ಡಿ.ರಾಮಲಿಂಗ ತಮ್ಮ ಶೆಡ್‌ಗೆ ರೂ.8,00,000/–ಗಳ ವಿಮೆ ಪಾಲಿಸಿ ಮಾಡಿಸಿದ್ದು, ವಿಮೆಯು 2023 ರ ಮೇ 11 ರಿಂದ 2024 ರ ಮೇ 10 ರವರೆಗೆ ಚಾಲ್ತಿಯಲ್ಲಿದ್ದು, 2024 ರ ಮೇ 04 ರಂದು ಶೆಡ್ಡಿನ ಮೇಲೆ ಹಾದುಹೋದ ಹೈಟೆನ್ಷನ್ ವಿದ್ಯುತ್ ತಂತಿಗಳ ಶಾರ್ಟ್ ಸರ್ಕ್ಯೂಟ್‌ನಿಂದ ದೂರುದಾರರ ಶೆಡ್ಡಿಗೆ ಬೆಂಕಿ ತಗುಲಿ ಅದರಲ್ಲಿದ್ದ ದಾಸ್ತಾನು ವಸ್ತುಗಳು, ಯಂತ್ರೋಪಕರಣಗಳು, ಪೀಠೋಪಕರಣಗಳು, ಶೇ.75 ರಷ್ಟು ಸುಟ್ಟುಭಸ್ಮವಾಗಿ ರೂ.31,25,000/–ಮೊತ್ತದ ಹಾನಿಯಾಗಿರುತ್ತದೆ. ಈ ಪ್ರಕರಣವನ್ನು ವಿಮೆ ಕಂಪನಿಗೆ ಹಾಗೂ ಸಾಲ ಪಡೆದ ಬ್ಯಾಂಕ್‌ಗೆ ಮಾಹಿತಿ ನೀಡಿದ್ದರು. ನಷ್ಟ ಪರಿಹಾರ ಮೊತ್ತ ಕೋರಿ ವಿಮಾ ಕಂಪನಿಗೆ ಕ್ಲೈಮ್ ಸಲ್ಲಿಸಿದ್ದರು.

ನಂತರ ಕ್ಲೈಮ್ ಪರಿಹಾರ ನೀಡದ ಕಾರಣ ಕಾನೂನಿನ ಅನ್ವಯ ನೋಟಿಸ್‌ನ್ನು ಸಹ ಜಾರಿ ಮಾಡಿದ ನಂತರ ದೂರುದಾರರ ಖಾತೆಗೆ ವಿಮಾ ಕಂಪನಿಯು ರೂ.60,664/–ಮಾತ್ರ ಪಾವತಿ ಮಾಡಿತ್ತು. ವಿಮಾ ಪಾಲಿಸಿಯ ಮೊತ್ತವು ರೂ.8,00,000/–ಇದ್ದು ಬಾಕಿ ರೂ.7,39,336/–ಗಳನ್ನು ಶೇ.9 ಬಡ್ಡಿಯೊಂದಿಗೆ ಪರಿಹಾರ ನೀಡಲು ಒದಗಿಸುವಂತೆ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಆಯೋಗದ ಅಧ್ಯಕ್ಷ ಎನ್.ತಿಪ್ಪೇಸ್ವಾಮಿ ಹಾಗೂ ಮಹಿಳಾ ಸದಸ್ಯರಾದ ಮಾರ್ಲಾ ಶಶಿಕಲ ಇವರು ಉಭಯ ಪಕ್ಷಗಾರರ ವಾದ ವಿವಾದ ಆಲಿಸಿದ ನಂತರ ಪ್ರಕರಣದಲ್ಲಿ ದೂರುದಾರರ ಶೆಡ್ಡಿಗೆ ಬೆಂಕಿ ತಗುಲಿ ಅವಘಡ ನಡೆದಿದ್ದು, ಎದುರುದಾರರು ಘಟನಾ ಸ್ಥಳದಲ್ಲಿ ತಪಾಸಣೆ ಮಾಡಿ ಪೂರ್ಣ ಪ್ರಮಾಣದ ವರದಿ ನೀಡದಿರುವುದು. ದೂರುದಾರರ ಶೆಡ್ಡಿನಲ್ಲಿ ಪಾಲಿಸಿಗೆ ಒಳಪಟ್ಟ ದಾಸ್ತಾನು ಹಾಗೂ ಕರಕುಶಲ ವಸ್ತುಗಳು ಸುಟ್ಟಿರುತ್ತದೆ ಎಂದು ಸಾಬೀತುಪಡಿಸಿರುವುದರಿಂದ ದೂರನ್ನು ಭಾಗಶಃ ಪುರಸ್ಕರಿಸಿ ಎದುರುದಾರರು ಬಾಕಿ ವಿಮಾ ಮೊತ್ತ ರೂ.1,11,250/–ಪರಿಹಾರ, ಮಾನಸಿಕ ಹಿಂಸೆಗೆ ರೂ.10,000/–ಹಾಗೂ ದೂರಿನ ವೆಚ್ಚ ರೂ.5000/– ಗಳನ್ನು ದೂರುದಾರಿಗೆ ಪಾವತಿಸುವಂತೆ ಆದೇಶಿಸಿದ್ದಾರೆ. ಈ ಪರಿಹಾರ ಮೊತ್ತವನ್ನು 45 ದಿನಗಳೊಳಗೆ ಪಾವತಿಸಬೇಕು. ತಪ್ಪಿದಲ್ಲಿ ಪರಿಹಾರದ ಮೊತ್ತ ರೂ.1,11,250/–ಶೇ.6 ಬಡ್ಡಿ ಮೊತ್ತವನ್ನು ಆದೇಶ ಹೊರಡಿಸಿದ ದಿನದಿಂದ ಪಾವತಿಸಲೂ ಅವರು ಆದೇಶಿದ್ದಾರೆ.

## ಯೂರಿಯಾ, ಡಿಎಪಿ, ಕಾಂಪ್ಲೆಕ್ಸ್ ರಸಗೊಬ್ಬರ ಕೊರತೆ ಆತಂಕ ಬೇಡ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 1– 2025–26 ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ನಿಗದಿಪಡಿಸಿದ ಗುರಿಯಂತೆ ಹಂತ ಹಂತವಾಗಿ ವಿವಿಧ ಸಂಸ್ಥೆಗಳಿಂದ ಯೂ–ರಿಯಾ, ಡಿ.ಎ.ಪಿ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರ ಜಿಲ್ಲೆಗೆ ಬರುತ್ತಿದೆ.

ಮುಂಬರುವ ದಿನಗಳಲ್ಲಿ ಸಹ ರಸಗೊಬ್ಬರ ಜಿಲ್ಲೆಗೆ ಬರುತ್ತದೆ. ರೈತರು ರಸಗೊಬ್ಬರ ಕೊರತೆ ಇದೆ ಎಂದು ಭಾವಿಸದೆ ಬೆಳೆಗೆ ಬೇಕಾಗುವ ಒಟ್ಟು ರಸಗೊಬ್ಬರವನ್ನು ಒಂದೇ ಸಲ ಖರೀದಿಸಲು ಮುಂದಾಗಬಾರದು. ಬೆಳೆಗಳಿಗೆ ಬೇಕಾಗುವ ರಸಗೊಬ್ಬರವನ್ನು ಆಯಾ ಹಂತಕ್ಕೆ ಅವಶ್ಯಕತೆಗನುಗುಣವಾಗಿ ಮಾತ್ರ ಖರೀದಿಸಬೇಕೆಂದು ತಿಳಿಯಪಡಿಸಿದೆ. ರಸಗೊಬ್ಬರ ವಿತರಕರಿಗೆ ದಿನಾಂಕ:01.08.2025 ರಂದು ಯೂರಿಯಾ ರಸಗೊಬ್ಬರವನ್ನು ನೀಡಲಾಗಿರುತ್ತದೆ. ರೈತರು ಬೆಳೆಗೆ ಅವಶ್ಯಕತೆ ಇರುವ ಆಧಾರದ ಮೇಲೆ ರಸಗೊಬ್ಬರವನ್ನು ಬೆಳೆಗೆ ನೀಡಬೇಕು ಮತ್ತು ಯೂ–ರಿಯಾ ರಸಗೊಬ್ಬರವನ್ನು ಕಳೆನಾಶಕ ಜೊತೆಗೆ ಬಳಸದೆ ಅನ್ಯ ಮಾರ್ಗವಾಗಿ ಮರಳು ಅಥವಾ ಮಣ್ಣು ಬಳಸಬೇಕು ಹಾಗೂ ರಸಗೊಬ್ಬರದ ಕೊರತೆ ಬಗ್ಗೆ ಆತಂಕ ಪಡುವ ಅವಶ್ಯಕತೆ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ರಾಯಚೂರ ಜಿಲ್ಲೆಯ ರೈತ ಬಾಂಧವರಲ್ಲಿ ಮನವಿ ಮಾಡಿದ್ದಾರೆ.

## ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ,ಆ.01–ಧಾರವಾಡದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯದಿಂದ 2025–26ನೇ ಶೈಕ್ಷಣಿಕ ಸಾಲಿಗೆ ಬಳ್ಳಾರಿ ಜಿಲ್ಲೆಯ ಮಿಲಿಟರಿ ಪಿಂಚಣಿ ರಹಿತ ಮಾಜಿ ಸೈನಿಕರ ಹಾಗೂ ಕರ್ನಾಟಕದಲ್ಲಿ ನೆಲೆಸಿರುವ ಹೊರ ರಾಜ್ಯದ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ ಕಲ್ಯಾಣ ನಿಧಿ ಮತ್ತು ವಿಶೇಷ ನಿಧಿಗಳಿಂದ ಶಿಷ್ಯವೇತನ ಮಂಜೂರು ಮಾಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಲ್ಯಾಣ ನಿಧಿಯಿಂದ ಒಂದನೇ ತರಗತಿಯಿಂದ ಪಿಯುಸಿ ಎರಡನೇ ವರ್ಷದವರೆಗೆ ಓದುವ ಮಕ್ಕಳಿಗೆ (ಅಧಿಕಾರಿಗಳನ್ನು ಹೊರತುಪಡಿಸಿ) ಪುಸ್ತಕ ಅನುದಾನ ಮತ್ತು ವಿಶೇಷ ನಿಧಿಯಿಂದ ಡಿಗ್ರಿ, ಡಿಪ್ಲೋಮಾ ಜೆ.ಓ.ಸಿ/ ಪ್ರೋಫೆಷನಲ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳಿಗೆ (ಅಧಿಕಾರಿಗಳನ್ನು ಹೊರತುಪಡಿಸಿ) ಶಿಷ್ಯವೇತನ ಮಾಡಲಾಗುವುದು.

ಶುಲ್ಕ ರಹಿತ ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಧಾರವಾಡ ಕಾರ್ಯಾಲಯದಿಂದ ಪಡೆದು ಭರ್ತಿ ಮಾಡಿ ನವೆಂಬರ್ 30 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡ ಅಥವಾ ದೂ.08362440176 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## "ಜನರಲ್ ಕೆ ಎಸ್ ತಿಮ್ಮಯ್ಯ" ನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–2024–25ನೇ ಶೈಕ್ಷಣಿಕ ಸಾಲಿನಲ್ಲಿ ನಡೆದಂತಹ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕ ಪಡೆದ ಜಿಲ್ಲೆಯ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ "ಜನರಲ್ ಕೆ ಎಸ್ ತಿಮ್ಮಯ್ಯ" ನಗದು ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಧಾರವಾಡ ಕಾರ್ಯಾಲಯದಿಂದ ಪಡೆದು ಭರ್ತಿ ಮಾಡಿ ನವೆಂಬರ್ 30 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡ ಅಥವಾ ದೂ.08362440176 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ 110/11ಕೆ.ವಿ ವಿದ್ಯುತ್ ಲೈನುಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಆ.02 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ಎಫ್–6 ವ್ಯಾಪ್ತಿಯ ನಗರದ ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಜಡ್ಜ್ ಬಂಗಲೆ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ

## ಸ್ಥಳಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಭೇಟಿ; ಪರಿಶೀಲನೆ

ರಾಯಚೂರು ಜುಲೈ 31–ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆಗಸ್ಟ್ 1ರಂದು, ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯ ಉದ್ದೇಶಿತ ಸ್ಥಳವಾದ ಯರಮರಸ್ ಹೊರವಲಯದ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.

ಪ್ರಸ್ತುತ ವಿಮಾನ ನಿಲ್ದಾಣದ ಬಾಂಡರಿ ನಿರ್ಮಾಣ ಕಾಮಗಾರಿ ಹಾಗೂ ಪ್ಯಾಸೆಂಜರ್ ಟರ್ಮಿನಲ್ ಕಟ್ಟಡಕ್ಕೆ ಬುನಾದಿ ಫೂಟಿಂಗ್ ಹಾಕುವ ಕಾಮಗಾರಿಯ ಪರಿವೀಕ್ಷಣೆ ನಡೆಸಿದರು.

ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಪ್ರಸ್ತಾಪಿಸಿರುವ ರನ್‌ವೇ, ಸಿಆರ್‌ಎಫ್ ಕಟ್ಟಡ, ಎಟಿಸಿ ಕಟ್ಟಡ ಮತ್ತು ಮಾಸ್ಟರ್ ಪ್ಲಾನ್‌ದಲ್ಲಿ ತೋರಿಸಿದಂತೆ ಸದರಿ ಸ್ಥಳದ ವೀಕ್ಷಣೆ ನಡೆಸಿದರು.

## ಆ.02 ರಂದು ಗಾರ್ಮೆಂಟ್ಸ್ ಉದ್ದಿಮೆದಾರರೊಂದಿಗೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ (ಕೆ.ಐ.ಎ.ಡಿ.ಬಿ) ಬಳ್ಳಾ–ರಿಯ ಸಂಜೀವರಾಯನಕೋಟೆ ಗ್ರಾಮದಲ್ಲಿ 154–58 ಎಕರೆಯಲ್ಲಿ ಜೀನ್ಸ್ ಪಾರ್ಕ್ ಸ್ಥಾಪಿಸಲು ಉದ್ದೇಶಿದ್ದು, ಅದರಲ್ಲಿನ ಕೈಗಾರಿಕಾ ನಿವೇಶನಗಳಿಗಾಗಿ ಬೇಡಿಕೆ ಕುರಿತು ಆಸಕ್ತ ಗಾರ್ಮೆಂಟ್ಸ್ ಉದ್ದಿಮೆದಾರರೊಂದಿಗೆ ಆಗಸ್ಟ್ 02 ರಂದು ಬೆಳಿಗ್ಗೆ 11 ಗಂಟೆಗೆ ಕೆಐಎಡಿಬಿ ಬಳ್ಳಾರಿ ಕಚೇರಿಯಲ್ಲಿ ಸಭೆ ಆಯೋಜಿಸಲಾಗಿದೆ.

ಕೆಐಎಡಿಬಿ ವತಿಯಿಂದ ಬಳ್ಳಾರಿ ತಾಲ್ಲೂಕಿನ ಸಂಜೀವರಾಯನಕೋಟೆ ಗ್ರಾಮದಲ್ಲಿ 154–58 ಎಕರೆ ಪ್ರದೇಶದಲ್ಲಿ ಜೀನ್ಸ್ ಪಾರ್ಕ್ ಸ್ಥಾಪಿಸಲು ಭೂ–ಅಭಿವೃದ್ಧಿ ಪಡಿಸಲಾಗುವುದು ಎಂದು ಕೆ–ಐಎಡಿಬಿ ಅಧಿಕಾರಿಗಳು ತಿಳಿಸಿದ್ದು, ಜಮೀನಿನಲ್ಲಿ ಹೂಡಿಕೆ ಮಾಡಲು ಆಸಕ್ತಿ ಇರುವ ಜೀನ್ಸ್/ಜವಳಿ ಉದ್ದಿಮೆದಾರರಿಂದ ನಿವೇಶನ ಹಂಚಿಕೆಗಾಗಿ ಬೇಡಿಕೆಯ ಬಗ್ಗೆ ಈಗಾಗಲೇ ಅರ್ಜಿ ಆಹ್ವಾನಿಸಲಾಗಿತ್ತು.

ಈ ಪ್ರದೇಶದಲ್ಲಿನ ಕೈಗಾರಿಕಾ ನಿವೇಶನಗಳಿಗಾಗಿ ಬೇಡಿಕೆ ಕುರಿತು ಆಸಕ್ತ ಗಾರ್ಮೆಂಟ್ಸ್ ಉದ್ದಿಮೆದಾರರೊಂದಿಗೆ ಸಭೆ ಹಮ್ಮಿಕೊಳ್ಳಲಾಗಿದೆ.

ಸಭೆಗೆ ಬಳ್ಳಾರಿಯ ಆಸಕ್ತ ಜೀನ್ಸ್, ಗಾರ್ಮೆಂಟ್ಸ್ ಉದ್ದಿಮೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಮಾಹಿತಿಗಾಗಿ ಮೊ.9901313417, 7975234573 ಮತ್ತು 9844837264 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆ: ಮರುವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ತೋಟಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರುವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ರೈತರು ನೋಂದಾಯಿಸಿಕೊಳ್ಳಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು/ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ, ಸಿಡಿಲಿನಿಂದ ಉಂಟಾಗುವ ಬೆಂಕಿ ಅವಘಡ ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡುವುದರ ಮೂಲಕ ರೈತರಿಗೆ ನೆರವಾಗುತ್ತದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳ ಬಳ್ಳಾರಿ, ಮೋಕಾ, ರೂಪನಗುಡಿ, ಕೋಳೂರು, ಕುರುಗೋಡು ಮತ್ತು ಕಂಪ್ಲಿ ಹೋಬಳಿಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಸಿಮೆಣಸಿನಕಾಯಿ ಮತ್ತು ದಾಳಿಂಬೆ ಬೆಳೆಯನ್ನು ಅಧಿಸೂಚಿಸಲಾಗಿದೆ.

ಬೆಳೆವಿಮೆಗೆ ನೋಂದಾಯಿಸಿಕೊಳ್ಳಲು ಆಗಸ್ಟ್ 11 ಕೊನೆಯ ದಿನ. ವಿಮಾ ಕಂಪನಿ–ಎಸ್‌ಬಿಐ ಇನ್ಸುರೆನ್ಸ್.

**ಹಸಿಮೆಣಸಿನಕಾಯಿ:** ವಿಮಾ ಮೊತ್ತ–ರೂ.71,000(ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿ ಹೆಕ್ಟೇರ್‌ಗೆ)–ರೂ.3,550.

*ದಾಳಿಂಬೆ:* ವಿಮಾ ಮೊತ್ತ–ರೂ.1,27,000(ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿ ಹೆಕ್ಟೇರ್‌ಗೆ)– ರೂ.6,350 ಪಾವತಿಸಬೇಕು. ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಹಾಗೂ ಪಾವತಿಸಬೇಕಾದ ವಿಮಾ ಕಂತಿನ ಮೊತ್ತವು ಒಂದೇ ಆಗಿರುತ್ತದೆ. ನೋಂದಣಿ ಮಾಡಲು ಉದ್ದೇಶಿಸಿರುವ ಬೆಳೆಯು ಹಿಂದಿನ ವರ್ಷಗಳ, ಋತುಗಳ (ಮುಂಗಾರಿನ) ಬೆಳೆ ಸಮೀಕ್ಷೆಯಲ್ಲಿ ಕಂಡುಬರದಿದ್ದರೆ ನೋಂದಣಿಗೆ ಅನುಮತಿ ಇರುವುದಿಲ್ಲ.

ರೈತರು ಪ್ರಸಕ್ತ ಸಾಲಿನ ಪಹಣಿ, ಎಫ್‌ಐಡಿ ಸಂಖ್ಯೆ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸಕ್ತದ ಪ್ರತಿಯೊಂದಿಗೆ ಹತ್ತಿರದ ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್‌ಗಳಲ್ಲಿ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ನೋಂದಾಯಿಸಿಕೊಳ್ಳಬೇಕು.

ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಬಳ್ಳಾರಿ ಜಿಲ್ಲೆಗೆ ಎಸ್.ಬಿ.ಐ ಇನ್ಸುರೆನ್ಸ್ ಕಂಪನಿಯು ವಿಮಾ ಸಂಸ್ಥೆಯಾಗಿರುತ್ತದೆ.

ಹವಾಮಾನ ಅಂಶಗಳಾದ ಮಳೆ ಪ್ರಮಾಣ, ಗಾಳಿಯ ವೇಗ, ಆರ್ದ್ರತೆ ಇತ್ಯಾದಿ ಮಾಹಿತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಟೆಲಿ ಮೆಟ್ರಿಕ್ ಮಳೆಮಾಪನ ಕೇಂದ್ರಗಳಲ್ಲಿ ದಾಖಲಿಸುವ ಅಂಶಗಳ ಆಧಾರದ ಮೇಲೆ ಬೆಳೆ ವಿಮೆ ನಷ್ಟ ತೀರ್ಮಾನಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆ ಕಚೇರಿ, ರೈತ ಸಂಪರ್ಕ ಕೇಂದ್ರದ ಅಧಿಕಾರಿ, ಸಿಬ್ಬಂದಿ ಹಾಗೂ ಹತ್ತಿರದ ಬ್ಯಾಂಕ್ ಶಾಖೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹತ್ತಿ ಬೆಳೆಯಲ್ಲಿ ಗುಲಾಬಿ ಕಾಯಿ ಕೊರಕರ ನಿರ್ವಹಣೆ ಕುರಿತು ತರಬೇತಿ

## ರೈತರು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಿ: ಎಸ್.ಎನ್.ಮಂಜುನಾಥ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.01–ರೈತರು ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ಆದಾಯ ದ್ವಿಗುಣಗೊಳಿಸಿಕೊಳ್ಳಬೇಕು ಎಂದು ಉಪ ಕೃಷಿನಿರ್ದೇಶಕ ಎಸ್.ಎನ್.ಮಂಜುನಾಥ ಅವರು ತಿಳಿಸಿದರು.

ಕೃಷಿ ಇಲಾಖೆ ವತಿಯಿಂದ ಆತ್ಮ ಯೋಜನೆಯಡಿ ಬಳ್ಳಾರಿ ತಾಲ್ಲೂಕಿನ ಸಂಜೀವರಾಯನಕೋಟೆ ಗ್ರಾಮದಲ್ಲಿ ಶುಕ್ರವಾರ ಏರ್ಪಡಿಸಿದ್ದ ರೈತರ ತರಬೇತಿ ಕಾರ್ಯಕ್ರಮ, ರೈತ ಕ್ಷೇತ್ರ ಪಾಠಶಾಲೆ, ಹತ್ತಿ ಬೆಳೆಯಲ್ಲಿ ಗುಲಾಬಿ ಕಾಯಿ ಕೊರಕದ ನಿರ್ವಹಣೆ ಕುರಿತ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹತ್ತಿ ಬೆಳೆಯಲ್ಲಿ ಗುಲಾಬಿ ಕಾಯಿ ಕೊರಕ ಎಂಬ ಕೀಟ ಅತಿಯಾಗಿ ಹಾನಿಯನ್ನುಂಟು ಮಾಡುತ್ತದೆ. ಇದರ ನಿರ್ವಹಣೆಗೆ ರೈತರು ಬೇವಿನ ಕಶಾಯ ಅಥವಾ ಥಯೋಡಿಕಾರ್ಬ್ ಸಿಂಪಡಿಸಬೇಕು ಎಂದು ತಿಳಿಸಿದರು.

ರೈತರು ಒಂದೇ ಬೆಳೆಯನ್ನು ಅವಲಂಬಿಸದೇ ಬೆಳೆ ಪರಿವರ್ತನೆಯನ್ನು ಕೈಗೊಳ್ಳಬೇಕು. ನ್ಯಾನೋ ಯೂ–ರಿಯಾ ಹಾಗೂ ನ್ಯಾನೋ ಡಿಎಪಿ ಬಳಕೆಯನ್ನು ರೈತರು ಉಪಯೋಗಿಸುವುದರಿಂದ ಬೇಸಾಯದ ಖರ್ಚನ್ನು ತಗ್ಗಿಸಬಹುದು ಎಂದು ರೈತರಿಕೆ ಮನವರಿಕೆ ಮಾಡಿಕೊಟ್ಟರು.

ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಅವರು ಮಾತನಾಡಿ, ರೈತರು ತಾವು ಬೆಳೆದ ಬೆಳೆಗಳಿಗೆ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕು. ಅತಿವೃಷ್ಟಿ ಅಥವಾ ಅನಾವೃಷ್ಟಿ ಸಂಭವಿಸಿ ಬೆಳೆ ಹಾನಿಯಾದರೆ ವಿಮಾ ಯೋಜನೆಯಿಂದ ರೈತರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು. ಹತ್ತಿ ಬೆಳೆಯಲ್ಲಿ ರಸ ಹೀರುವ ಕೀಟಗಳನ್ನು ನಿರ್ವಹಣೆ ಮಾಡಲು ಬೇವು ಆಧಾರಿತ ಕೀಟನಾಶಕಗಳನ್ನು ಸಿಂಪಡಣೆ ಮಾಡಬೇಕು. ಗುಲಾಬಿ ಕಾಯಿ ಕೊರಕದ ನಿರ್ವಹಣೆಗೆ ಪ್ರತಿ ಎಕರೆಗೆ 2 ರಂತೆ ಲಿಂಗಾಕರ್ಷಕ ಬಲೆಗಳನ್ನು ನೆಡಬೇಕು ಎಂದು ಹೇಳಿದರು.

ಹಗರಿ ಕೃಷಿ ವಿಜ್ಞಾನ ಕೇಂದ್ರದ ಬೇಸಾಯಶಾಸ್ತ್ರ ವಿಜ್ಞಾನಿಗಳಾದ ಮಲ್ಲೇಶ್ ಅವರು ಮಾತನಾಡಿ, ರೈತರು ಎಕರೆಗೆ 2 ರಿಂದ 3 ಪ್ಯಾಕೆಟ್ ಹತ್ತಿ ಬೀಜವನ್ನು ಉಪಯೋಗಿಸದೆ, ಒಂದು ಪ್ಯಾಕೆಟ್ ಬೀಜವನ್ನು ಉಪಯೋಗಿಸಬೇಕು. ಗಿಡದಿಂದ ಗಿಡಕ್ಕೆ ಅಂತರ ಕಾಪಾಡುವುದರಿಂದ ಇಳುವರಿಯನ್ನು ಹೆಚ್ಚಿಸಬಹುದು ಎಂದು ತಿಳಿಸಿದರು.

ಬಿಟಿ ಹತ್ತಿ ಬೆಳೆಯಲು ಅನುಮತಿ ನೀಡಿದಾಗಿನಿಂದಲೂ ಇಲ್ಲಿಯವರೆಗೆ ಬಿಟಿರಹಿತ ಹತ್ತಿ (ರೆಫ್ಯೂಜಿ)ಯನ್ನು ಬೆಳೆಯದಿರುವುದು ಗುಲಾಬಿ ಕಾಯಿ ಕೊರಕದ ಉಲ್ಬಣಕ್ಕೆ ಕಾರಣವಾಗಿದೆ ಎಂದರಲ್ಲದೇ ಕೀಟನಾಶಕಗಳನ್ನು ಶಿಫಾರಸ್ಸು ಮಾಡಿರುವುದಕ್ಕಿಂತ ಹೆಚ್ಚಿನ ಬಳಕೆ ಮಾಡಿರುವುದರಿಂದ ಈ ಕೀಟವು ಹಲವು ಕೀಟನಾಶಕಗಳಿಗೆ ನಿರೋಧಕಶಕ್ತಿಯನ್ನು ಬೆಳೆಸಿಕೊಂಡಿದೆ ಎಂದರು. ಗುಲಾಬಿ ಕಾಯಿ ಕೊರಕ ಕಂಡುಬಂದಲ್ಲಿ 3 ಮಿ.ಲೀ. ಬೇವಿನ ಮೂಲದ ಕೀಟನಾಶಕ ಅಥವಾ 1 ಗ್ರಾಂ ಥಯೋಡಿಕಾರ್ಬ್ ಪ್ರತಿ ಲೀಟರ್ ನೀರಿಗೆ ಬೆರೆಸಿ ಕೀಟನಾಶಕವನ್ನು ಸಿಂಪಡಿಸಬೇಕು ಎಂದು ಮಾಹಿತಿ ನೀಡಿದರು. ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜ್ ಸಿಂಧಿಗೇರಿ, ಕೃಷಿ ಇಲಾಖೆಯಡಿ ಲಭ್ಯವಿರುವ ವಿವಿಧ ಯೋಜನೆಗಳ ಬಗ್ಗೆ ಸಂಕ್ಷಿಪ್ತವಾಗಿ ವಿವರಣೆ ನೀಡಿದರು.

ಇಫ್ಕೊದವರಿಂದ ರೈತ ಕ್ಷೇತ್ರ ಪಾಠಶಾಲೆಯಡಿ ಹತ್ತಿಬೆಳೆಗೆ ನ್ಯಾನೋ ಯೂರಿಯಾ ಹಾಗೂ ಸಾಗರಿಕಾ ಎಂಬ ದ್ರಾವಣವನ್ನು ಡ್ರೋನ್ ಮೂಲಕ ಸಿಂಪಡಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಸಹಾಯಕ ಕೃಷಿ ನಿರ್ದೇಶಕ ಗುರುಸಿದ್ದಮೂರ್ತಿ, ಆತ್ಮ ಯೋಜನೆಯ ಉಪ ಯೋಜನಾ ನಿರ್ದೇಶಕಿ ಕವಿತಾ ಕುಮಾರಿ, ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕಿ ವಾಣಿ ಕೋರಪ್ಪಳ, ಸಹಾಯಕ ತಾಂತ್ರಿಕ ವ್ಯವಸ್ಥಾಪಕಿ ಶಿಲ್ಪಾ, ರೇಣುಕಾರಾದ್ಯ, ಕೃಷಿ ಸಂಜೀವಿನಿ ಮಣಿಕೃಷ್ಣ, ಇಫ್ಕೊ ಕಂಪನಿಯ ಕ್ಷೇತ್ರಾಧಿಕಾರಿಗಳಾದ ಸಾಗರ್, ಸಚಿನ್ ಸೇರಿದಂತೆ ಇತರೆ ಸಿಬ್ಬಂದಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

ಮೆಡಿಕಲ್ ಕಾಲೇಜಿನಲ್ಲಿ ವ್ಯಸನಮುಕ್ತ ದಿನಾಚರಣೆ

# ವ್ಯಸನಮುಕ್ತ ಸಮಾಜ ನಿರ್ಮಾಣ ಎಲ್ಲರ ಜವಾಬ್ದಾರಿ: ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ವ್ಯಸನಮುಕ್ತ ಆರೋಗ್ಯಕರ ಸಮಾಜ ನಿರ್ಮಾಣ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಮೇಲಿದೆ ಎಂದು ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು.

ನಗರದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಶುಕ್ರವಾರ ಜರುಗಿದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಲಿಂ.ಪೂಜ್ಯ ಮಹಾಂತಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಮಾತನಾಡಿದ ಅವರು, ಪೂಜ್ಯ ಮಹಾಂತಸ್ವಾಮಿಗಳು ಜನರ ದುಶ್ಚಟಗಳ ನಿರ್ಮೂಲನೆಗಾಗಿ ಕೈಗೊಂಡಿದ್ದ ಮಹಾಂತಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಠವಾಗಿತ್ತು ಎಂದರು.

ಪೂಜ್ಯರು ಜೋಳಿಗೆ ಹಿಡಿದು ದುಶ್ಚಟಗಳ ಭಿಕ್ಷೆ ಬೇಡಿದರು. ಅವರ ಜನ್ಮದಿನವನ್ನು ಕರ್ನಾಟಕ ಸರ್ಕಾರ ವ್ಯಸಮುಕ್ತ ದಿನವೆಂದು ಆಚರಿಸುತ್ತಿರುವುದು ಅಭಿನಂದನಾರ್ಹ ನಡೆಯಾಗಿದೆ. ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಸಾರ್ವಜನಿಕರು ದುಶ್ಚಟಗಳಿಂದ ದೂರಾಗುವುದು ಬಹಳಷ್ಟು ಅಗತ್ಯವಾಗಿದೆ ಎಂದ ಚರಂತಿಮಠ, ಕರ್ನಾಟಕ ಸರ್ಕಾರದ ಪ್ರಥಮ ಸಂಯಮ ಪ್ರಶಸ್ತಿಯನ್ನು ಮೆಡಿಕಲ್ ಕಾಲೇಜಿನ ಸಭಾಭವನದಲ್ಲಿ ಪೂಜ್ಯ ಮಹಾಂತ ಸ್ವಾಮಿಗಳಿಗೆ ನೀಡಿ ಗೌರವಿಸಿದ್ದನ್ನು ಸ್ಮರಿಸಿದರು.

ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ಮಾತನಾಡಿ, ದುಶ್ಚಟಗಳು ರಾಷ್ಟ್ರದ ಅಭಿವೃದ್ಧಿಗೆ ಮಾರಕವಾಗಿವೆ. ವ್ಯಸನಮುಕ್ತ ಆರೋಗ್ಯಕರ ಸಮಾಜದಿಂದ ಮಾತ್ರ ರಾಷ್ಟ್ರದ ಅಭಿವೃದ್ಧಿ ಸಾಧ್ಯ ಎಂದರು.

ಪ್ರಭಾರ ಪ್ರಾಚಾರ್ಯ ಡಾ.ಸಿ.ಎಸ್.ಹಿರೇಮಠ ವ್ಯಸನಮುಕ್ತ ಸಮಾಜ ನಿರ್ಮಾಣದ ಸಂಕಲ್ಪ ಮಾಡಲು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ ರಾಷ್ಟ್ರದ ಪ್ರಗತಿಗಾಗಿ ಯುವಜನತೆಯನ್ನು ದುಶ್ಚಟಗಳಿಂದ ಮುಕ್ತರನ್ನಾಗಿಸುವುದು ಪ್ರಮುಖ ಆದ್ಯತೆಯಾಗಿದೆ ಎಂದರು. ನಂತರ ವೈದ್ಯರು ಮತ್ತು ವಿದ್ಯಾರ್ಥಿಗಳಿಂದ ಮಹಾವಿದ್ಯಾಲಯದ ಆವರಣದಲ್ಲಿ ಜಾಥಾ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಡೆಂಟಲ್ ಕಾಲೇಜಿನ ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ, ನರ್ಸಿಂಗ್ ಕಾಲೇಜಿನ ಪ್ರಾಚಾರ್ಯ ಡಾ.ದಿಲೀಪ ನಾಟೆಕಾರ, ಡಾ.ಮಹಾಂತೇಶ ಬಿರಡಿ, ಡಾ.ಸಂಜೀವ ಕೊಳಗಿ, ಡಾ.ಅಶೋಕ ಡೋರ್ಲೆ, ಡಾ.ಸೊಲಬಣ್ಣವರ, ಡಾ.ಯರನಾಳ, ಡಾ.ಮನಿಯಾರ, ಡಾ.ವಿಜಯ ಮಹಾಂತೇಶ, ಡಾ.ಕಾಶಿನಕುಂಟಿ, ಡಾ.ಸುರೇಖಾರಾಣಿ, ವೈದ್ಯರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಹಾಂತಶ್ರೀ ವ್ಯಸನಿಗಳ ಬದುಕು ಬದಲಾಯಿಸಿದ ಸಂತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ವ್ಯಸನಿಗಳ ಬದುಕು ಬದಲಾಯಿಸಿರುವ ಲಿಂ.ಡಾ.ಮಹಾಂತ ಶಿವಯೋಗಿಗಳು ಮಹಾಂತ ಜೋಳಿಗೆ ಮೂಲಕ ಸಮಾಜಕ್ಕೆ ಮಾರಕವಾಗಿರುವ ದುಶ್ಚಟಗಳನ್ನು ತಮ್ಮ ಜೋಳಿಗೆಯಲ್ಲಿ ಹಾಕಿಸಿಕೊಂಡು, ಆರೋಗ್ಯಕರ ಸಮಾಜವನ್ನು ಕಟ್ಟಿರುವ ಮಹಾಶರಣರು ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ಶುಕ್ರವಾರ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಲಿಂಗೈಕ್ಯ ಡಾ.ಮಹಾಂತ ಶಿವಯೋಗಿಗಳವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾತನಾಡಿದ ಅವರು, ಪೂಜ್ಯರು ಹಾಕಿಕೊಟ್ಟಿರುವ ತತ್ವಗಳಲ್ಲಿ ನಮ್ಮ ಸಮಾಜ ನಿರ್ಮಾಣವಾಗಬೇಕು ಎಂದರು.

ಸಮಾಜದಲ್ಲಿರುವ ದುರ್ವ್ಯಸನ ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಸ್ಸು ಪರಿವರ್ತಿಸಿ, ಜನರಲ್ಲಿರುವ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಪಡೆದು ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಡಾ.ಮಹಾಂತ ಶಿವಯೋಗಿಗಳು, ನಾಡಿನ ಪ್ರಖ್ಯಾತ ವೈದ್ಯರು, ವಿಜ್ಞಾನಿಗಳು, ಸಾಹಿತಿಗಳು, ಸಾಮಾಜಿಕ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ವ್ಯಸನಗಳಿಂದ ಆಗುವ ಹಾನಿಗಳ ಕುರಿತು ವಿಶೇಷ ಉಪನ್ಯಾಸಗಳನ್ನು ಮಾಡಿಸಿದ್ದರು ಎಂದು ಡಾ.ಗಾಳಿ ಹೇಳಿದರು.

ಸಾಂಸ್ಕೃತಿಕ ವಿಭಾಗದಡಿಯಲ್ಲಿ ವ್ಯಸನ ಮುಕ್ತ ದಿನಾಚರಣೆ 2025ರ ಅಂಗವಾಗಿ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಮತ್ತು ಪುಸ್ತಕ ಬಹುಮಾನ ನೀಡಲಾಯಿತು. ನಂತರ ವಿದ್ಯಾರ್ಥಿಗಳಿಂದ ಮಹಾಂತ ಜೋಳಿಗೆ ನಾಟಕ ಪ್ರದರ್ಶನ ಜರುಗಿ ದುಶ್ಚಟಗಳ ಕುರಿತು ಅರಿವು ಮೂಡಿಸಲಾಯಿತು.

ವ್ಯಸನಮುಕ್ತ ದಿನಾಚರಣೆ ಪ್ರಯುಕ್ತ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು ಮತ್ತು ಬೋಧ–ಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಜಮಖಂಡಿ, ರಬಕವಿ–ಬನಹಟ್ಟಿ ತಾಲೂಕಾ ವ್ಯಾಪ್ತಿಯಲ್ಲಿ ನಿಗದಿತ ಸಮಯಕ್ಕೆ ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಜಿಲ್ಲೆಯ ಜಮಖಂಡಿ ಹಾಗೂ ರಬಕವಿ–ಬನಹಟ್ಟಿ ತಾಲೂಕಾ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಶುಕ್ರವಾರ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯಡಿ ನಡೆಯುತ್ತಿರುವ ಕುಡಿಯುವ ನೀರು ಪೂರೈಕೆ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿ, ನಿಗದಿತ ಸಮಯಕ್ಕೆ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಹುಲ್ಯಾಳ, ಮರೇಗದ್ದಿ, ಕೊಣ್ಣೂರು, ಬುದ್ನಿ, ಜಕನೂರ, ಹಿಪ್ಪರಗಿ, ಕುಳಹಳ್ಳಿ ಮತ್ತು ಆಸಂಗಿ ಗ್ರಾಮಗಳಿಗೆ ಭೇಟಿ ನೀಡಿದಾಗ ಗ್ರಾಮ ಪಂಚಾಯತ ಸದಸ್ಯರು, ಗ್ರಾಮಸ್ಥರು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರೊಂದಿಗೆ ಚರ್ಚೆ ನಡೆಸಿ ಕಾಮಗಾರಿಗಳ ಸ್ಥಿತಿಗತಿಯ ಬಗ್ಗೆ ಮಾಹಿತಿ ಪಡೆದುಕೊಂಡರು.

ನಲ್ಲಿ, ಓವರ್‌ಹೆಡ್ ಟ್ಯಾಂಕ್‌ಗಳು, ಪೈಪ್‌ಲೈನ್ ಕಾಮಗಾರಿಗಳು, ಪಂಪ್ ಹೌಸ್‌ಗಳು ಹಾಗೂ ನೀರಿನ ಗುಣಮಟ್ಟದ ವರದಿ ದಾಖಲೆಗಳನ್ನು ಪರಿಶೀಲಿಸಿದರು. ಅನುಷ್ಠಾನ, ಗುಣಮಟ್ಟ ಕಾಯ್ದುಕೊಳ್ಳುವುದು ಹಾಗೂ ಕಾಮಗಾರಿಗಳನ್ನು ನಿಗಧಿತ ಸಮಯದೊಳಗೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ ಸಿಇಓ, ಕೆಲ ಗ್ರಾಮಗಳಲ್ಲಿ ಕಾಮಗಾರಿ ನಿರ್ವಹಣೆಗೆ ಮೆಚ್ಚುಗೆ ವ್ಯಕ್ತಪಡಿಸಿದರೆ, ಕೆಲವೆಡೆ ಪ್ರಗತಿಯಲ್ಲಿ ವಿಳಂಬ ಕಂಡುಬಂದ ಹಿನ್ನೆಲೆಯಲ್ಲಿ ತಕ್ಷಣ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಭೇಟಿ ಸಮಯದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಶೇಷ ಸಮಾಲೋಚನಾ ಸಭೆ ನಡೆಸಲಾಯಿತು. ಹಂತವಾರು ಪ್ರಗತಿಯ ಬಗ್ಗೆ ಪರಿಶೀಲನೆ ನಡೆಸಿ, ವಿತರಣಾ ತೊಂದರೆಗಳು ಮತ್ತು ಅನುಷ್ಠಾನಾತ್ಮಕ ಅಡಚಣೆಗಳನ್ನು ಪರಿಹರಿಸುವ ಬಗ್ಗೆ ಸೂಚನೆ ನೀಡಲಾಯಿತು.

ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶವಂದೆ, ಜಮಖಂಡಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಭಿಯಂತರ ಸಚಿನ್ ಎಂ, ರಬಕವಿ–ಬನಹಟ್ಟಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಾಟಿಹಾಳ, ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಉಪ–ವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜಮಖಂಡಿ, ಶಾಖಾಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇದ್ದರು.

ವೀರಪ್ಪ ಮೊಯಿಲಿ ಅವರ ವಿಶ್ವಸಂಸ್ಕೃತಿ ಮಹಾಯಾನ

## ಸಂಪುಟ–3 ಬಾಗಲಕೋಟೆಯಲ್ಲಿ ನಾಳೆ ಬಿಡುಗಡೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಮಾಜಿ ಮುಖ್ಯಮಂತ್ರಿ ಹಾಗೂ ಸಾಹಿತಿಗಳಾದ ಡಾ.ಎಂ.ವೀರಪ್ಪ ಮೊಯಿಲಿ ಅವರ 'ವಿಶ್ವಸಂಸ್ಕೃತಿಯ ಮಹಾಯಾನ' ಸಂಪುಟ–3 ಗದ್ಯ ಮಹಾಕಾವ್ಯದ ಬಿಡುಗಡೆ ಸಮಾರಂಭ ಆಗಸ್ಟ್ 3 ರವಿವಾರ ಬೆಳಗ್ಗೆ 10 ಗಂಟೆಗೆ ಬಾಗಲಕೋಟೆಯ ನವನಗರದ ಕಲಾಭವನದಲ್ಲಿ ನಡೆಯಲಿದೆ.

ಮಾಜಿ ಸಚಿವ ಎಸ್.ಆರ್.ಪಾಟೀಲ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಎಸ್.ಆರ್.ಪಾಟೀಲ ಸಮೂಹ ಸಂಸ್ಥೆಗಳು ಹಾಗೂ ಸ್ವಪ್ನ ಬುಕ್ ಹೌಸಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ಜರುಗಲಿದೆ ಎಂದು ಹೇಳಿದರು.

ಸಮಾರಂಭದ ಸಾನಿಧ್ಯವಹಿಸಿ ಗ್ರಂಥ ಬಿಡುಗಡೆಯನ್ನು ಗದಗ ಜಿಲ್ಲೆಯ ಬಾಲೆಹೊಸೂರು ಶಿರಹಟ್ಟಿಯ ಪಕೀರ ದಿಂಗಾಲೇಶ್ವರ ಸ್ವಾಮೀಜಿ ಮಾಡಲಿದ್ದು, ಧಾರವಾಡದ ಎಂ.ಎಂ.ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ವೀರಣ್ಣ ರಾಜೂರ ಗ್ರಂಥ ಕುರಿತು ಮಾತನಾಡಲಿದ್ದಾರೆ. ಹಿರಿಯ ಪತ್ರಕರ್ತ ಡಾ.ಸರಜೂ ಕಾಟ್ಕರ ಆಶಯ ನುಡಿ ಹೇಳುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, ಸಪ್ನ ಬುಕ್ ಹೌಸ್ ವ್ಯವಸ್ಥಾಪಕ ನಿರ್ದೇಶಕ ನಿತಿನ್ ಷಾ ಆಗಮಿಸಲಿದ್ದಾರೆ. ಸಂಗೀತಾ ಕಟ್ಟಿ ಕುಲಕರ್ಣಿ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ಪಾಟೀಲ ತಿಳಿಸಿದರು.

ವೀರಪ್ಪ ಮೊಯಿಲಿ ಅವರ ವಿಶ್ವಸಂಸ್ಕೃತಿಯ ಮಹಾಯಾನ ಗದ್ಯ ಮಹಾಕಾವ್ಯ 5 ಸಂಪುಟಗಳನ್ನು ಒಳಗೊಂಡಿದೆ. ಈಗಾಗಲೇ ಪ್ರಥಮ ಸಂಪುಟ ಚಿಕ್ಕಬಳ್ಳಾಪುರ ಹಾಗೂ ಎರಡನೆಯ ಸಂಪುಟ ಮೂಡಬಿದಿರೆಯಲ್ಲಿ ಬಿಡುಗಡೆಯಾಗಿವೆ. ಮೂರನೆಯ ಸಂಪುಟದಲ್ಲಿ ಬಸವಪೂರ್ವಯುಗದಿಂದ ತೊಡಗಿ ಹದಿನೆಂಟನೆಯ ಶತಮಾನದ ಇಂಗ್ಲಿಷ್ ಸಾಹಿತ್ಯ ಸಂಭ್ರಮದವರೆಗಿನ ವೈವಿಧ್ಯಪೂರ್ಣ ಸಂಸ್ಕೃತಿ ಚಿಂತನೆಗಳನ್ನು ಹರಳುಗಟ್ಟಿವೆ.

ಕನ್ನಡ ನಾಡಿನಲ್ಲಿ ಚಿಗು–ರೊಡೆದ ವೀರಶೈವ ಧರ್ಮದ ತಾತ್ವಿಕ ವಿಚಾರಧಾರೆಗಳು ವಿಶ್ವಪ್ರಜ್ಞೆಯನ್ನು ಆವರಿಸಿಕೊಂಡ ಬಗೆ, ಭಾರತಾದ್ಯಂತ ಪಲ್ಲವಿಸಿದ ಸೂಫಿ, ಶೈವ, ವೈಷ್ಣವ ಪಂಥಗಳ ದಾರ್ಶನಿಕ ಪರಂಪರೆ, ಇಟಲಿ, ಜರ್ಮನಿ, ಫ್ರಾನ್ಸ್, ಇಂಗ್ಲೆಂಡ್ ದೇಶಗಳಲ್ಲಿ ನಡೆದ ಸಾಹಿತ್ಯ ಚಳವಳಿ, ವೈಜ್ಞಾನಿಕ ಶೋಧಗಳಿಂದ ಮೂಡಿದ ಹೊಸಜಾಗೃತಿ ಇರಲಿದೆ ಎಂದು ಹೇಳಿದ ಅವರು ಈ ಸಂಪುಟದಲ್ಲಿ 16 ಅಧ್ಯಾಯಗಳಿವೆ ಎಂದರು.

ಸಾಹಿತಿ ಡಾ.ಸತ್ಯಾನಂದ ಪಾತ್ರೋಟಿ, ಶ್ರೀಶೈಲ ಮೋಟಗಿ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

## ಸಕ್ಕರೆ ಕಾರ್ಖಾನೆ ಮಾಲಿಕರ ಸಭೆ–ಬಾಕಿ ಪಾವತಿಗೆ ಸೂಚನೆ ರೈತರ ನ್ಯಾಯಯುತ ಬೇಡಿಕೆಗೆ ಸ್ಪಂದಿಸಿ: ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಜಿಲ್ಲೆಯ ಕಬ್ಬು ಬೆಳೆಗಾರರು ಹಾಗೂ ರೈತ ಮುಖಂಡರ ನ್ಯಾಯಯುತವಾದ ಬೇಡಿಕೆಗಳಿಗೆ ಸ್ಪಂದಿಸುವಂತೆ ಜಿಲ್ಲೆಯ ಸಕ್ಕರೆ ಕಾರ್ಖಾನೆ ಮಾಲೀಕರಿಗೆ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲೆಯ ಸಕ್ಕರೆ ಕಾರ್ಖಾನೆ ಮಾಲಿಕರು, ವ್ಯವಸ್ಥಾಪಕ ನಿರ್ದೇಶಕರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಹಂಗಾಮಿಗೆ ರೈತರು ಬೇಡಿಕೆಗಳನ್ನು ಇಟ್ಟಿದ್ದು, ರೈತರ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸುವುದು ಕಾರ್ಖಾನೆಗಳ ಮಾಲಿಕರ ಜವಾಬ್ದಾರಿಯಾಗಿದೆ. ಕಾರ್ಖಾನೆಗಳು ತಾವು ಬೆಳೆಯುವುದಲ್ಲದೇ ರೈತರನ್ನು ಆರ್ಥಿಕವಾಗಿ ಬೆಳೆಸುವ ಕಾರ್ಯವಾಗಬೇಕು. ಕಬ್ಬು ಕಟಾವು, ಸಾಗಾಣಿಕೆ ವೆಚ್ಚದಲ್ಲಿ ಒಂದು ಕಾರ್ಖಾನೆಯಿಂದ ಮತ್ತೊಂದು ಕಾರ್ಖಾನೆಗಳಲ್ಲಿ ವ್ಯತ್ಯಾಸ ಕಂಡುಬರುತ್ತಿದೆ. ಇದನ್ನು ಸರಿಪಡಿಸುವಂತೆ ತಿಳಿಸಿದರು.

ಪ್ರತಿ ಸಕ್ಕರೆ ಕಾರ್ಖಾನೆಗಳು ಗ್ರಾಮವಾರು ಮ್ಯಾಪಿಂಗ್ ಮಾಡಿಕೊಂಡಾಗ ಮಾತ್ರ ಸಾಗಾಣಿಕೆ ವೆಚ್ಚದಲ್ಲಿ ವ್ಯತ್ಯಾಸ ಕಂಡುಬರುವದಿಲ್ಲ. ಇದಕ್ಕಾಗಿ ತಮ್ಮದೆಯಾದ ಒಂದು ಪೋರ್ಟಲ್ ಮಾಡಿಕೊಳ್ಳುವಂತೆ ಕಾರ್ಖಾನೆಗಳಿಗೆ ಸಲಹೆ ನೀಡಿದ ಜಿಲ್ಲಾಧಿಕಾರಿಗಳು, ಕಬ್ಬು ತುಂಬಿದ ವಾಹನ ಸಕ್ಕರೆ ಕಾರ್ಖಾನೆಯನ್ನು ತಲುಪಿದ ತಕ್ಷಣ ತೂಕ ಮಾಡಿ, ಶುಗರ್ ಕೇನ್ ಶ್ಯಾಂಪ್ಲರ್ ಮಷೀನ್ ಮುಖಾಂತರ ಸಕ್ಕರೆ ಇಳುವರಿ ಕಂಡುಹಿಡಿದು ನಂತರ ಕೇನ್ ಯಾರ್ಡಿಗೆ ಕಳುಹಿಸಿ ತೂಕ ಮತ್ತು ಇಳುವರಿ ಒಂದೇ ಸ್ಲಿಪ್‌ನಲ್ಲಿ ಬರುವಂತೆ ಮಾಡಲು ಕ್ರಮವಹಿಸಲು ಸೂಚಿಸಿದರು.

ಕಳೆದ ಹಂಗಾಮಿನ ಸಕ್ಕರೆ ಇಳುವರಿಯ ಆಧಾರದ ಮೇಲೆ ಪ್ರಸಕ್ತ ಹಂಗಾಮಿಗೆ ಕಬ್ಬಿನ ಬೆಲೆ ನಿಗಧಿ ಮಾಡುವುದು ಅವೈಜ್ಞಾನಿಕವಾಗಿದೆ. ಆಯಾ ಹಂಗಾಮಿನ ಇಳುವರಿಯನ್ನು ಪರಿಗಣಿಸುವಂತೆ ರೈತರು ಬೇಡಿಕೆ ಇಟ್ಟಿದ್ದು, ಈ ಬಗ್ಗೆ ಕಾರ್ಖಾನೆಗಳು ಪ್ರತಿ ಹಂಗಾಮಿನಲ್ಲಿ ಕಬ್ಬಿನ ಇಳುವರಿಯನ್ನು ಪರಿಶೀಲೀಸಿ ನಿಗದಿಪಡಿಸಲು ತಿಳಿಸಿದ ಅವರು, ಮಷೀನ್ ಮೂಲಕ ಕಬ್ಬು ಕಟಾವು ಮಾಡುವ ಸಂದರ್ಭದಲ್ಲಿ ಪ್ರತಿಶತ 6 ರಿಂದ 8 ರಷ್ಟು ಕಬ್ಬಿನ ತೂಕ ಕಡಿಮೆ ಮಾಡುತ್ತಿರುವುದು ಕೇಳಿಬಂದಿದ್ದು ಇದು ಕಡಿತವಾಗಬಾರದು ಎಂದರು.

ಕಳೆದ ಹಂಗಾಮಿನಲ್ಲಿ ಜಮಖಂಡಿ ತಾಲೂಕಿನ ಹಿರೇಪಡಸಲಗಿಯಲ್ಲಿರುವ ಜಮಖಂಡಿ ಶುಗರ್ಸ್ ಹೊರತುಪಡಿಸಿ ಉಳಿದೆಲ್ಲ ಸಕ್ಕರೆ ಕಾರ್ಖಾನೆಗಳು ಸಂಪೂರ್ಣವಾಗಿ ಕಬ್ಬು ಪೂರೈಸಿದ ಮೊತ್ತವನ್ನು ಪಾವತಿಸಿದ್ದಾರೆ. ಜಮಖಂಡಿ ಶುಗರ್ಸ್‌ನವರು 18.42 ಕೋಟಿ ರೂ.ಗಳಷ್ಟು ಬಾಕಿ ಉಳಿಸಿಕೊಂಡಿದ್ದು, ಈ ಬಾಕಿ ಮೊತ್ತವನ್ನು ಕಾಲಮಿತಿ ಇಲ್ಲದೇ ರೈತರಿಗೆ ಪಾವತಿಸಬೇಕು. ಇಲ್ಲವಾದಲ್ಲಿ ಕಾರ್ಖಾನೆಯಲ್ಲಿರುವ ಸಕ್ಕರೆಯನ್ನು ಜಪ್ತ ಮಾಡಲಾಗುವುದೆಂದು ಡಿಸಿ ಎಚ್ಚರಿಕೆ ನೀಡಿದರು.

ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯೆಲ್ ಮಾತನಾಡಿ, ಕಳೆದ ಹಂಗಾಮಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ರತಿಭಟನೆಗಳು ಆಗಿದ್ದು, ಈ ಹಂಗಾಮಿನಲ್ಲಿ ಯಾವುದೇ ರೀತಿಯಲ್ಲಿ ಘಟನೆಗಳು ನಡೆಯಲು ಅವಕಾಶ ಕೊಡಬಾರದು. ರೈತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸುವ ಕೆಲಸವಾಗಬೇಕು. ಉತ್ತಮವಾದ ಕಬ್ಬು ಬೆಳೆಯಲು ಕಾರ್ಖಾನೆಗಳ ಮೂಲಕ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಜಿಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿ ಆರ್.ಎಲ್.ಹೊಸಮನಿ, ಜಿಲ್ಲಾ ಪರಸರ ಅಧಿಕಾರಿ ಡಾ.ಅನೀಲಕುಮಾರ ಚಳಗೇರಿ, ಸಹಕಾರ ಇಲಾಖೆಯ ಉಪನಿಬಂಧಕ ದಯಾನಂದ ಹಿರೇಮಠ, ಜಿಲ್ಲಾ ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿವಿಧ ಸಂಸ್ಥೆಗಳಿಂದ ಆ.3 ಕಾರ್ಗಿಲ್ ವಿಜಯೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಬಾಗಲಕೋಟೆ ಜಿಲ್ಲಾ ಘಟಕ, ಸ್ವದೇಶಿ ದಿಶಾ ಅರಸೀಕೆರೆ, ಸ್ಫೂರ್ತಿ ಗ್ರೂಪ್ಸ್, ರೋಟರಿ ಕ್ಲಬ್, ಇನ್ನರ್ ವೀಲ್ ಕ್ಲಬ್ ಇವರ ಸಹಯೋಗದಲ್ಲಿ 26ನೇ ಕಾರ್ಗಿಲ್ ವಿಜಯೋತ್ಸವ ಹಾಗೂ ಆರೋಗ್ಯ ಅರಿವು ಕಾರ್ಯಕ್ರಮ ಆ.3 ರಂದು ನಡೆಯಲಿದೆ ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಗದಿಗೆಪ್ಪ ಅರಕೇರಿ ಹೇಳಿದರು.

ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರವಿವಾರ ಬೆಳಗ್ಗೆ 9.30ಕ್ಕೆ ನವನಗರದ ಅಂಬೇಡ್ಕರ್ ಭವನದಲ್ಲಿ ಶಿರೂರಿನ ಬಸವಲಿಂಗ ಮಹಾಸ್ವಾಮೀಜಿ ಸಾನಿಧ್ಯದಲ್ಲಿ ಸಮಾರಂಭ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಜ್ಯೋತಿ ಬೆಳಗಿಸಲಿದ್ದು, ಶಾಸಕ ಎಚ್.ವಾಯ್.ಮೇಟಿ ಕಾರ್ಯಕ್ರಮ ಉದ್ಘಾಟಿಸುವರು ಎಂದರು.

ಸಂಸದರಾದ ಪಿ.ಸಿ.ಗದ್ದಿಗೌಡರ, ನಾರಾಯಣಸಾ ಭಾಂಡಗೆ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಮಾಜಿ ಶಾಸಕ ವೀರಣ್ಣ ಚರಂತಿಮಠ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾಧಿಕಾರಿ ಸಂಗಪ್ಪ ಎಂ., ಜಿಪಂ ಸಿಇಒ ಶಶಿಧರ ಕುರೇರ, ಪೋಲಿಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯೆಲ್, ವಿವಿಧ ಅಧಿಕಾರಿಗಳು, ಗಣ್ಯರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಹೇಳಿದ ಅರಕೇರಿ, ನಾಗೇಶ ಗೋಲಶೆಟ್ಟಿ ಉಪನ್ಯಾಸ ನೀಡುವರು. ಮಾಜಿ ಸೈನಿಕರ ಸಂಘದ ಎಲ್ಲ ತಾಲೂಕ ಅಧ್ಯಕ್ಷರುಗಳು ಅತಿಥಿಗಳಾಗಿ ಭಾಗವಹಿಸುವರು ಎಂದು ತಿಳಿಸಿದರು.

ಯುದ್ಧದಲ್ಲಿ ಗಾಯಗೊಂಡ ಯೋಧರು, ವೀರನಾರಿಯರು, ಸಾಧನೆ ಮಾಡಿದ ಮಾಜಿ ಸೈನಿಕರು ಹಾಗೂ ಹಿರಿಯ ಮಾಜಿ ಸೈನಿಕರನ್ನು ಸನ್ಮಾನಿಸಲಾಗುವುದು ಎಂದು ಹೇಳಿದರು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಅರ್ಜುನ ಕೋರಿ, ಕಾರ್ಯಾಧ್ಯಕ್ಷ ಪ್ರಕಾಶ ಸಿಂಗರೆಡ್ಡಿ, ಉಪಾಧ್ಯಕ್ಷ ವೇಗಾನಂದ ಕಲ್ಲೊಳ್ಳಿ, ಸಹ ಸಂಚಾಲಕ ಮಂಜುನಾಥ ಜೋಗಿ, ಸಂಘಟನಾ ಕಾರ್ಯದರ್ಶಿ ರವಿದಾಸ ಲಮಾಣಿ ಇದ್ದರು.


## ಆ.8 ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಅಂಚೆ ಅಧೀಕ್ಷಕರು, ಬಾಗಲಕೋಟೆ ವಿಭಾಗ ಬಾಗಲಕೋಟೆ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾಪಿಸಿದ್ದಾರೆ. ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಆಗಸ್ಟ್ 8 ರಂದು ಬೆಳಿಗ್ಗೆ 11 ಗಂಟೆಗೆ ಬಾಗಲಕೋಟ ಸ್ಟೇಶನ್ ರಸ್ತೆ ಬಳಿಯಿರುವ ಅಂಚೆ ಅಧೀಕ್ಷಕರ ಕಛೇರಿಯಲ್ಲಿ ನಡೆಯುವ ನೇರ ಸಂದರ್ಶನಕ್ಕೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಅಥವಾ ಅಂಚೆ ಜೀವವಿಮಾ ಅಭಿವೃದ್ಧಿ ಅಧಿಕಾರಿಯನ್ನು (ಮೊ.8217297792 ಹಾಗೂ 7337899266) ಸಂಪರ್ಕಿಸಬಹುದು ಎಂದು ಅಂಚೆ ಅಧೀಕ್ಷಕರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಮಹಿಳೆಯರಿಂದ ಸಂಸ್ಕೃತಿ ಉಳಿವು:ಮಂಜುಳಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ಮಹಿಳೆಯರಿಂದ ನಾಡಿನ ಸಂಸ್ಕೃತಿ, ಪರಂಪರೆ ಉಳಿದುಕೊಂಡು ಬಂದಿದೆ ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ಅಧ್ಯಕ್ಷೆ ಸಿ. ಮಂಜುಳಾ ಹೇಳಿದರು.

ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಶುಕ್ರವಾರ ನಗರದ ಟೀಕಿನಮಠದ ಆವರಣದಲ್ಲಿ ಶ್ರಾವಣ ಮಾಸದ ನಿಮಿತ್ತ ಆಯೋಜಿಸಲಾಗಿದ್ದ ಮಹಿಳೆಯರ ಉಡಿ ತುಂಬುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪಕ್ಷ ಸಂಘಟನೆ ಹಾಗೂ ಧಾರ್ಮಿಕ ಕಾರ್ಯಗಳನ್ನು ಉಳಿಸಿ ಬೆಳೆಸುವುದು ಮಹಿಳೆಯರ ಕರ್ತವ್ಯ, ಮಹಿಳಾ ಶಕ್ತಿ, ಮಹಿಳಾ ಸಬಲೀಕರಣ ಹಾಗೂ ಮಹಿಳೆಗೆ ಮೀಸಲು ಕಾರ್ಯಗಳಿಗೆ ನಾವೆಲ್ಲರೂ ಶ್ರಮಿಸೋಣ ಎಂದು ಹೇಳಿದರು.

ಮಹಿಳಾ ಮೋರ್ಚಾ ಅಧ್ಯ–ಕ್ಷೆ ಶಶಿಕಲಾ ಮಜ್ಜಗಿ, ನಾಗರತ್ನ ವಕ್ಕಲಕುಂಟಿ, ಜಿಲ್ಲಾ ಉಪಾಧ್ಯಕ್ಷೆ ಭಾಗೀರಥಿ ಪಾಟೀಲ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಶಿವಲೀಲಾ ಪಟ್ಟಣಶೆಟ್ಟಿ, ಸುಜಾತ ಸಿಂಧೆ, ವಿಜಯಲಕ್ಷ್ಮಿ ಬದ್ರಶೆಟ್ಟಿ, ನಗರಸಭಾ ಸದಸ್ಯರಾದ ರತ್ನಾ ಕೆರೂರ, ಪ್ರೇಮಾ ಅಂಬಿಗೇರ, ಸ್ಮೀತಾ ಪವಾರ, ಜ್ಯೋತಿ ಚೌವ್ಹಾಣ, ರಾಜೇಶ್ವರಿ ಇಟಗಿ, ಪಟ್ಟಣದ, ಹಡಗಲಿ ಹಾಗೂ ಮೋರ್ಚಾದ ಎಲ್ಲ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಆ.3 ನವನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ನವನಗರದ 110 ಕೆವಿ ಕೇಂದ್ರದ ಎಫ್–4 ಕೆಎಸ್‌ಆರ್‌ಟಿಸಿ ಫೀಡರ್ ವ್ಯಾಪ್ತಿಗೆ ಒಳಪಡುವ ಸೆಕ್ಟರ ನಂ.7 ರಿಂದ 9, 20 ರಿಂದ 23, 34 ರಿಂದ 39, 47 ರಿಂದ 49, ಕೆ.ಎಸ್.ಆರ್.ಟಿ.ಸಿ ಮತ್ತು ಉಪವಿಭಾಗಾಧಿಕಾರಿಗಳ ಕಚೇರಿ ಸ್ಥಳಗಳಲ್ಲಿ ಆಗಸ್ಟ 3 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಸಂಪರ್ಕ ಒದಗಿಸುವ ಕಾಮಗಾರಿ ಮತ್ತು ಪಿಎಂಆರ್‌ಇಎ ಕಾಮಗಾರಿಗಳನ್ನು ನಿರ್ವಹಿಸುವ ಹಾಗೂ ಫೀಡರ್ ನಿರ್ವಹಣೆ ಕಾರ್ಯಗಳ ಪ್ರಯುಕ್ತ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಅದೇ ರೀತಿ ನವನಗರ–2 ಶಾಲೆಯಲ್ಲಿ ನವನಗರದ 110 ಕೆವಿ ಉಪಕೇಂದ್ರದ ಎಫ್–3 ಜಿಲ್ಲಾಧಿಕಾರಿ ಕಚೇರಿ ಫೀಡರ್ ವ್ಯಾಪ್ತಿಗೆ ಒಳಪಡುವ ಸೆಕ್ಟರ ನಂ.46, 32, 33, 25, 19, 18, 5, 10, 24, 6, ಆರ್‌ಟಿಓ ಕಚೇರಿ ಸ್ಥಳಗಳಲ್ಲಿ ಆಗಸ್ಟ 3 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಸಂಪರ್ಕ ಒದಗಿಸುವ ಕಾಮಗಾರಿ ಮತ್ತು ಪಿಎಂಆರ್‌ಇಎ ಕಾಮಗಾರಿಗಳನ್ನು ನಿರ್ವಹಿಸುವ ಹಾಗೂ ಫೀಡರ್ ನಿರ್ವಹಣೆ ಕಾರ್ಯಗಳ ಪ್ರಯುಕ್ತ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಬಾಗಲಕೋಟೆ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.1–ದುಶ್ಚಟಗಳಿಂದ ದೂರವಿದ್ದು ಆರೋಗ್ಯ ರಕ್ಷಣೆ ಮಾಡಿಕೊಂಡು ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವಲ್ಲಿ ಯುವಕರು ಮಹತ್ವದ ಪಾತ್ರವನ್ನು ನಿರ್ವಹಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕಗಳು ಹಾಗೂ ಐಕ್ಯೂಎಸಿ ಶುಕ್ರವಾರ ಆಯೋಜಿಸಿದ್ದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಭವಿಷ್ಯವಾಗಿರುವ ಯುವಜನತೆ ಉತ್ತಮ ಆರೋಗ್ಯದ ಮಹತ್ವವನ್ನು ಅರಿಯಬೇಕು. ಉತ್ತಮ ಆರೋಗ್ಯವಿದ್ದಾಗ ಮಾತ್ರ ಸಾಧನೆ ಸಾಧ್ಯ ಎಂಬ ಅಂಶವನ್ನು ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ವ್ಯಸನಗಳಿಂದ ದೂರವಿದ್ದು ಉತ್ತಮ ಹವ್ಯಾಸಗಳಿಂದ ಒಳ್ಳೆಯ ಆರೋಗ್ಯವನ್ನು ಪಡೆದುಕೊಂಡ ಉತ್ತಮ ಸಮಾಜ ನಿರ್ಮಾಣಕ್ಕೆ ಕಾರಣರಾಗಬೇಕು ಎಂದು ನರಗುಂದ ಹೇಳಿದರು.

ತಂಬಾಕು, ಮದ್ಯಪಾನ, ಗುಟ್ಕಾ, ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ಎಚ್ಚರಿಕೆಯಿಂದ ಇರುವುದರ ಜೊತೆಗೆ ತಮ್ಮ ಪ್ರದೇಶಗಳಲ್ಲಿ ಇದರ ಬಗ್ಗೆ ಜಾಗೃತಿಯನ್ನು ಮೂಡಿಸಬೇಕು ಎಂದು ಅವರು ಸಲಹೆ ನೀಡಿದರು.

ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ಪ್ರತಿಜ್ಞಾವಿಧಿ ಬೋಧಿಸಿದರು. ಗೀತಾ ಕಿಲಬನೂರ ನಿರೂಪಿಸಿದರು. ಎಚ್.ಜಿ.ಗೌಡರ ವಂದಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ಎಂ.ಹಡಪದ ಇದ್ದರು.

ಚಿತ್ರತಲೆಬರಹ: ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿದರು.

# ಜ್ಞಾನದ ಜ್ಯೋತಿ ದಿ. ಮಹಾದೇವಪ್ಪ ರಾಂಪೂರೆಯವರ 104ನೇ ಜನ್ಮ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಬೀದರ:ಅ.1: ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ಮಹಾದೇವಪ್ಪ ರಾಂಪೂರೆಯವರ ಮೂರ್ತಿ ಪೂಜೆ, ಹಾಗೂ ಭಾವಚಿತ್ರದ ಪೂಜೆ ಮತ್ತು ಜ್ಯೋತಿ ಬೆಳಗುವುದರೊಂದಿಗೆ ಆಡಳಿತ ಮಂಡಳಿ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಅಭಿವೃದ್ಧಿ ಮಂಡಳಿ ಸಂಚಾಲಕರಾದ ಡಾ. ರಜನೀಶ ಎಸ್. ವಾಲಿ. ಚಾಲನೆ ಕೊಟ್ಟು ಮಾತನಾಡುತ್ತಾ ದಿ. ಶ್ರೀ ಮಹಾದೇವಪ್ಪ ರಾಂಪೂರೆಯವರು ಈ ಹಿಂದುಳಿದ ಭಾಗದಲ್ಲಿ ಮಹಾವಿದ್ಯಾಲಯ ಸ್ಥಾಪಿಸಿ ಅನೇಕ ವಿದ್ಯಾರ್ಥಿಗಳ ಬಾಳಿಗೆ ವಿದ್ಯಾಧಾನ ನೀಡಿ ಆಶಾಕಿರಣವಾಗಿ ಹೊರಹೊಮ್ಮಿದ್ದಾರೆ. ಇಂದಿನ ಕಾರ್ಯಕ್ರಮದಲ್ಲಿ ಆಗಮಿಸಿದ ಎಲ್ಲಿರಿಗೂ ಶುಭ ಹಾರೈಸಿದರು.

ಈ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಆಗಮಿಸಿ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಅವರು ಮಾತನಾಡುತ್ತಾ ಮಹಾದೇವಪ್ಪ ರಾಂಪೂರೆಯವರು ಉನ್ನತ ಶಿಕ್ಷಣಕ್ಕಾಗಿ 1958ರಲ್ಲಿ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಬಡವರಿಗೆ ವಿದ್ಯಾರ್ಜನೆ ಅಂದು ಬಹಳ ಕಷ್ಟವಾಗಿತ್ತು ಅಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗ ಮಾಡಿ ಉನ್ನತ ಹುದ್ದೆ ಪಡೆಯಲು ಮಾರ್ಗದರ್ಶಕರಾದರು ಬ್ರಿಟಿಷ್‌ರ ವಿರುದ್ಧ ಚಳುವಳಿ ಹೋರಾಟ ಮಾಡುತ್ತಾ ಜನನಾಯಕರಾದ ಇವರ ರಾಜಕೀಯ ಗುರುಗಳು ಎಂ.ಎನ್. ರಾಯ ಅವರ ಮಾರ್ಗದರ್ಶನದಲ್ಲಿ ರಾಂಪೂರೆಯವರು ಅನೇಕ ಚಳುವಗಳಿಗಳಲ್ಲಿ ಭಾಗವಹಿಸಿದರು ಆದರು ಸಹ ಅವರ ಛಲ ಬಿಡದೆ ಮೂರ್ತಿ ಚಿಕ್ಕದಾದರು ಕೀರ್ತಿ ದೊಡ್ಡದು ಹೀಗಾಗಿ ಅನೇಕ ಇತಿಹಾಸಕಾರರು ಅವರು ಮಾಡಿದ ಸೇವೆಯನ್ನು ಪರಿಗಣಿಸಿ ದಕ್ಷಿಣ ಭಾರತದ ಶಿಕ್ಷಣ ಶಿಲ್ಪಿ ಎಂದು ನುಡಿದರು ವಿದ್ಯಾರ್ಥಿಗಳು ಸಹ ಇವರ ಮಾರ್ಗದರ್ಶದಲ್ಲಿ ನಡೆಯಬೇಕೆಂದು ಕರೆ ಕೊಟ್ಟರು. ಕಾರ್ಯಕ್ರಮದಲ್ಲಿ ಕಛೇರಿ ಅಧೀಕ್ಷಕರಾದ ಶ್ರೀ ಸುಜೀತಕುಮಾರ ಪಿ. ಅವರು ದಿ. ಮಹಾದೇವಪ್ಪ ರಾಂಪೂಯರೆಯವರ ಜೀವನ ಹಾಗೂ ಸಾಧನೆಯ ಬಗ್ಗೆ ಕವನ ವಾಚನ ಮಾಡಿದರು.

ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಈ ಹಿಂದುಳಿದ ಭಾಗದಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಪ್ರತಿಯೊಬ್ಬ ವಿದ್ಯಾರ್ಥಿ ತನ್ನ ಸ್ವಂತ ಬಲದಿಂದ ಜೀವನವನ್ನು ನಡೆಸಿ ಉನ್ನತ ಹುದ್ದೆಯನ್ನು ಪಡೆದು ಸಮಾಜದಲ್ಲಿ ಕೀರ್ತಿ ತರಬೇಕು ಎಂದು ಹೇಳುತ್ತಾ ನಮ್ಮ ಸಂಸ್ಥೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ದೇಶ ವಿದೇಶಗಳಲ್ಲಿ ಕಾರ್ಯನಿರ್ವಹಿಸಿ ಶಿಕ್ಷಣ ಸಂಸ್ಥೆ ಹೆಸರು ಹಾಗೂ ಪಾಲಕರ, ಗ್ರಾಮದ ಹೆಸರನ್ನು ಚಿರಸ್ಥಾಯಿಗೊಳಿಸಿದ್ದಾರೆ ಎಂದು ನುಡಿದರು. ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಹೈದ್ರಾಬಾದ ಕರ್ನಾಟಕ ಹಿಂದುಳಿದ ಭಾಗದಲ್ಲಿ ವಿಶೇಷವಾಗಿ ನಮ್ಮ ಬೀದರ ಜಿಲ್ಲೆಗೆ 1960ರಲ್ಲಿ ನಮ್ಮ ಮಹಾವಿದ್ಯಾಲಯ ಸ್ಥಾಪಿಸಿ ಕಲಿಯಲು ಹೊರಹೋಗುವ ಪ್ರತಿಭೆಗಳನ್ನು ಇಲ್ಲಿಯೇ ನಿರ್ಮಾಣ ಮಾಡಲು ಅವಕಾಶ ಮಾಡಿದ ಮಹಾನ ಜೀವಿ ಇವರು ಸ್ಥಾಪಿಸಿರು ಶಿಕ್ಷಣ ಸಂಸ್ಥೆಯಲ್ಲಿ ಹಲವಾರು ಕುಟುಂಬಗಳು ಇಂದು ಸುಖವಾಗಿ ಜೀವನ ನಡೆಸುತ್ತಿದ್ದಾರೆ ಅವರ ಸ್ವಂತಕ್ಕಾಗಿ ಯಾವುದೇ ಆಸ್ತಿ ಮಾಡಿಕೊಳ್ಳದೆ ಎಲ್ಲಾ ಶಿಕ್ಷಣ ಸಂಸ್ಥೆಗಳ ಸರ್ವಾಂಗಿಣ ಅಭಿವೃದ್ಧಿಗಾಗಿ ಶ್ರಮಿಸಿದರು, ಆದುದರಿಂದ ಇವರು ಕಲ್ಯಾಣ ಕರ್ನಾಟಕದ ದಿವ್ಯಜ್ಯೋತಿ ಶಿಕ್ಷಣ ಶಿಲ್ಪಿ, ಹುಟ್ಟು ಹೋರಾಟಗಾರ ಸ್ವಾತಂತ್ರ್ಯವೀರ ದೇಶಪ್ರೇಮಿ ಹಾಗೂ ಈ ಭಾಗದ ಮದನಮೋಹನ ಮಾಳವೀಯ ಎಂದು ಹೇಳಿರುವುದು ನಿಜಕ್ಕೂ ಸೂಕ್ತವಾಗಿದೆ ಇವರ ಆದರ್ಶ ಇಟ್ಟುಕೊಂಡು

ವಿದ್ಯಾರ್ಥಿಗಳು ತಮ್ಮ ಉನ್ನತ ವ್ಯಾಸಂಗ ಮಾಡಿ ದೇಶ, ವಿದೇಶಗಳಲ್ಲಿ ನಮ್ಮ ಮಹಾವಿದ್ಯಾಲಯದ ಕೀರ್ತಿ ಹಾಗೂ ತಮ್ಮ ಪಾಲಕರ ಕೀರ್ತಿ ಹಾಗೂ ಗುರುಗಳ ಕೀರ್ತಿಯನ್ನು ಅಜರಾಮರಗೋಳಿಸಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ

ಡಾ. ದೀಪರಾಗ, ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ ಪ್ರಾಂಶುಪಾಲರಾದ ಡಾ. ಮಲ್ಲಿಕಾರ್ಜುನ ಕನಕಟ್ಟೆ, ಸೈನಿಕ ಶಾಲೆ ಮತ್ತು ನ್ಯಾಷನಲ್ ಇಂಗ್ಲೀಷ ಮಾಧ್ಯಮದ ಪ್ರಾಂಶುಪಾಲರಾದ ಶ್ರೀಮತಿ ಶ್ರೀಲತಾ, ಉಪಸ್ಥಿತರಿದ್ದರು,

ಕಾರ್ಯಕ್ರಮ ಮೊದಲಿಗೆ ಶ್ರೀ ಮಾರುತಿ ಭೀಮಣ್ಣಾ ಸ್ವಾಗತಿಸಿದರೆ ಸ್ವಾಗತಿಸಿದರೆ, ಶ್ರೀಮತಿ ರೇಣುಕಾದೇವಿ ಸ್ವಾಮಿ ಸ್ವಾಗತ ಗೀತೆ ಹಾಡಿದರೆ, ಶ್ರೀ ಬಸವರಾಜ ಬಿರಾದಾರ ನಿರೂಪಿಸದರೆ, ಡಾ. ಮಲ್ಲಿಕಾರ್ಜುನ ಕೋಟೆ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

# ಯುವಕರು ದುಶ್ಚಟಗಳಿಗೆ ಮಾರುಹೋಗದೇ ಒಳ್ಳೆಯ ಹವ್ಯಾಸ ಬೆಳೆಸಿಕೊಳ್ಳಿ:ಡಾ.ಎಸ್.ವಿ.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ ಬೀದರ, ಆ.01 : ಯುವಕರು ಮಧ್ಯಪಾನ, ತಂಬಾಕು, ಗುಟುಕಾ ಹಾಗೂ ಇನ್ನಿತರ ದುಶ್ಚಟಗಳಿಗೆ ಮಾರುಹೋಗದೇ ಒಳ್ಳೆಯ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕೆಂದು ಬೀದರ ತೋಟಗಾರಿಕಾ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ್ ಸಲಹೆ ನೀಡಿದರು.ಅವರು ಶುಕ್ರವಾರದಂದು ತೋಟಗಾರಿಕಾ ಮಹಾವಿದ್ಯಾಲಯ, ಬೀದರನಲ್ಲಿ ರಾಷ್ಟ್ರೀಯ ಸೇವಾ ಯೋಜನೆಘಟಕ, ತೋಟಗಾರಿಕೆ ಮಹಾವಿದ್ಯಾಲಯ, ಬಾಗಲಕೋಟ ವತಿಯಿಂದ ಶ್ರೀ ಮ.ನಿ.ಪ್ರ.ಡಾ. ಮಾಹಾಂತ ಶಿವಯೋಗಿಗಳ ಜನ್ಮದಿನೋತ್ಸವ ನಿಮಿತ್ಯ "ವ್ಯಸನ ಮುಕ್ತ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮೊದಲು ನಾವು ಚನ್ನಾಗಿದ್ದರೆ ನಮ್ಮ ಸುತ್ತಲಿನವರು ಚನ್ನಾಗಿರುತ್ತಾರೆಂದು ಹೇಳಿದರು. ದುವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಸ್ಸು, ಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯರೂಪದಲ್ಲಿ ಸಂಗ್ರಹಿಸಿ "ಮಹಾಂತ ಜೋಳಿಗೆ" ಎಂಬ ವಿಶಿಷ್ಟ ಪರಿಕಲ್ಪನೆ ಮೂಲಕ ದೇಶ, ವಿದೇಶಗಳಲ್ಲಿ ಜನರ ದುಶ್ಚಟ ಬಿಡಿಸುವಲ್ಲಿ ಶ್ರೀಗಳು ಸಫಲರಾಗಿದ್ದರು. ತಮ್ಮ ಜೋಳಿಗೆಯನ್ನು ಹಿಡಿದು ಶ್ರೀಗಳು ಗ್ರಾಮ, ನಗರ ಸೇರಿದಂತೆ–ರಾಜ್ಯಾದ್ಯಂತ ಸಂಚಾರ ನಡೆಸಿದ್ದರು. ಸಾವಿರಾರು ಜನ ತಮ್ಮ ದುಶ್ಚಟಗಳನ್ನು ಜೋಳಿಗೆಗೆ ಹಾಕಿ ಮುಕ್ತಿ ಪಡೆದಿದ್ದರು.ಶ್ರೀಗಳ ಶ್ರಮದಿಂದ ಸಾವಿರಾರು ಜನ ಮದ್ಯಪಾನ, ಬೀಡಿ, ಸಿಗರೇಟ್ ಇತ್ಯಾದಿಗಳನ್ನು ತ್ಯಜಿಸಿರುತ್ತಾರೆ.ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಹಗಲಿರುಳು ಶ್ರಮಿಸಿದ ಕೀರ್ತಿ ಪೂಜ್ಯರಿಗೆ ಸಲ್ಲುತ್ತದೆ, ಬರೀ ನಾವು ಮಹಾತ್ಮರ ದಿನಾಚರಣೆಗಳನ್ನು ಆಚರಿಸಿದರೆ ಸಾಲದು ನುಡಿದಂತೆ ನಡೆದರೆ ಮಾತ್ರ ಇಂತಹ ಆಚರಣೆಗಳ ಸಾರ್ಥಕವಾಗುತ್ತದೆಂದರು. ಕಾರ್ಯಕ್ರಮದಲ್ಲಿ ವ್ಯಸನ ಮುಕ್ತ ದಿನಾಚರಣೆಯ ಪ್ರತಿಜ್ಞಾವಿಧಿಯನ್ನು ಮಹಾವಿದ್ಯಾಲಯದ ಎಲ್ಲ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಬೋಧಿಸಿದರು.ಈ ಕಾರ್ಯಕ್ರಮದಲ್ಲಿ ಬ್ರಿಮ್ಸ್ ಆಸ್ಪತ್ರೆಯ ಮನೋ ವೈದ್ಯ ಡಾ.ಅಮಲಾ ಷರೀಫ, ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯದ ಎಲ್ಲಾ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮೂರು ತಾಲೂಕುಗಳಿಗೆ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ,01: 12ನೇ ಶತಮಾನದಲ್ಲಿ ಬಸವಣ್ಣನವರು ಕಾಯಕವೇ ಕೈಲಾಸ ಎಂದು ಹೇಳಿದ ಹಾಗೆ ನೀವು ಕೂಡ ಹೆಚ್ಚಿನ ಆಸಕ್ತಿಯಿಂದ ಕಾರ್ಯ ನಿರ್ವಹಿಸಿ ಸಾಧನೆ ಮಾಡಿದ ನಿಮ್ಮೆಲ್ಲರಿಗೂ ಧನ್ಯವಾದಗಳು ಸಲ್ಲಿಸಲು ಇಚ್ಚಿಸುತ್ತನೆ ಎಂದು ಕಲಬುರಗಿಯ ದಕ್ಷಿಣದ ಶಾಸಕರಾದ ಅಲ್ಲಮ ಪ್ರಭು ಪಾಟೀಲ್ ಅವರು ಅಭಿನಂದಿಸಿರು.

ಜಿಲ್ಲಾ ಪಂಚಾಯತ ಸಬಾಂಗಣದಲ್ಲಿ ಶುಕ್ರವಾರದಂದು ಆಯೋಜಿಸಿದ್ದ ಜಿಲ್ಲಾ ಮಟ್ಟದಲ್ಲಿ ಸಂಪೂರ್ಣತಾ ಅಭಿಯಾನ ಸಮ್ಮಾನ್ ಸಮಾರೋಹ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಮುಖ್ಯ ಅತಿಥಿಯಾಗಿ ಉದ್ಘಾಟಿಸಿ ಮಾತನಾಡಿದ ಅವರು, ಶಹಾಬಾದ, ಅಫಜಲಪುರ, ಹಾಗೂ ಕಾಳಗಿ ಅಧಿಕಾರತಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪ್ರಮಾಣ ಪತ್ರವನ್ನು ನೀಡಿ ಹರುಷ ವ್ಯಕ್ತಪಡಿಸಿದರು. ಜುಲೈ 01–2024 ರಿಂದ 30 ಸೆಪ್ಟೆಂಬರ್ 2024 ರಂದು ಸಂಪೂರ್ಣತಾ ಅಭಿಯಾನವನ್ನು ಜಿಲ್ಲೆಯ ಅಫಜಲಪುರ, ಕಾಳಗಿ ಹಾಗೂ ಶಹಾಬಾದ್ 3 ತಾಲೂಕಿನಲ್ಲಿ ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಿರಿ, ಹೆಚ್ಚಿನ ಆಸಕ್ತಿಯಿಂದ ಕರ್ತವ್ಯ ಮಾಡಿ ಅಪೌಷ್ಠಿಕತೆಯಿಂದ ಪೌಷ್ಠಿಕತೆಯ ಕಡೆಗೆ ತರುವಂತಹ ಒಳ್ಳೆಯ ಕಾರ್ಯ ಮಾಡಿದ್ದಿರಿ ಎಂದರು. ರೈತರ ಮತ್ತು ಸಾರ್ವಜನಿಕರ ಸೇವೆ ಮಾಡಿದರೆ ಅದು ದೇವರ ಸೇವೆ ಮಾಡಿದ ಹಾಗೆ, ನಿಮ್ಮನ್ನು ನೋಡಿ ಮುಂದೆ ಬರುವಂತಹ ಅಧಿಕಾರಿಗಳು ಇನ್ನು ಹೆಚ್ಚಿನ ಆಸಕ್ತಿಯಿಂದ ಕಾರ್ಯನಿರ್ವಹಿಸಿ ಒಳ್ಳೆ ಅಧಿಕಾರಿಗಳಾಗಬೇಕು, ನಿಮ್ಮ ಕರ್ತವ್ಯವನ್ನು ಇನ್ನೊಬ್ಬರಿಗೆ ಮಾದರಿಯಾಗಬೇಕು ಎಂದು, ಕೃಷಿ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಎನ್‌ಆರ್‌ಎಲ್‌ಎಮ್ ಸದಸ್ಯರು ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಹೇಳಿದರು.

ಜನರ ಆರೋಗ್ಯಕ್ಕಾಗಿ ಮತ್ತು ಅವರ ಅಭಿವೃದ್ಧಿಗಾಗಿ ಕಾರ್ಯ ಮಾಡೋಣ, ಕಾಳಗಿ ತಾಲೂಕು ಶ್ರದ್ಧೆಯಿಂದ ಕರ್ತವ್ಯ ಮಾಡಿ ಇಡಿ ದಕ್ಷಿಣ ಭಾರತದಲ್ಲಿ 2ನೇ ಸ್ಥಾನ ಪಡೆದುಕೊಂಡಿದೆ ಇದು ಹೆಮ್ಮೆಯ ವಿಷಯವಾದಿಗೆ ಎಂದು ಜಿಲ್ಲಾಧಿಕಾರಿಗಳು ಬಿ.ಫೌಜಿಯಾ ತರುನ್ನುಮ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಸಂತೋಷ ವ್ಯಕ್ತ ಪಡಿಸಿದರು.

ಮಹಿಳೆಯರಿಗೆ, ಮಕ್ಕಳಿಗೆ ಹಾಗೂ ರೈತರಿಗೆ ಅವರ ಆರೋಗ್ಯದ ಕುರಿತು ಅರಿವು ಮೂಡಿಸಿ ಅವರ ಕಾರ್ಯವನ್ನು ಮಾಡಿ ಇನ್ನು ಹೆಚ್ಚಿನ ರೀತಿಯಲ್ಲಿ ಆಸಕ್ತಿಯಿಂದ ಕರ್ತವ್ಯವನ್ನು ಮಾಡಿ ನಮ್ಮ ಜಿಲ್ಲೆಗೆ ಒಳ್ಳೆಯ ಹೆಸರು ತನ್ನಿ ಎಂದು ಮೂರು ತಾಲೂಕಿನ ಅಧಿಕಾರಿಗಳಿಗೆ ಹೇಳಿದರು, ಹಾಗೂ ಸಾಧನೆ ಮಾಡಿದ ಪ್ರತಿಯೊಬ್ಬ ಕೃಷಿ ಸಹಾಯಕರಿಗೆ, ಅಂಗನವಾಡಿ ಕಾರ್ಯಕರ್ತರಿಗೆ ಮತ್ತು ಆಶಾ ಕಾರ್ಯಕರ್ತೆಯರಿಗೆ, ಸ್ವಸಹಾಯ ಸಂಘದ ಸದಸ್ಯರುಗಳಿಗೆ ಪ್ರಶಸ್ತಿ ಪ್ರಮಾಣ ಪತ್ರವನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ ಕಲಬುರಗಿ ದಕ್ಷಿಣ ಶಾಸಕ ಅಲ್ಲಮ ಪ್ರಭು ಪಾಟೀಲ್, ಜಲ್ಲಾಧಿಕಾರಿಗಳು ಬಿ.ಫೌಜಿಯಾ ತರನ್ನುಮ್, ಜಂಟಿ ನಿರ್ದೇಶಕರು ಕೃಷಿ ಇಲಾಖೆ ಸಮದ್ ಪಟೇಲ್, ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಂಜೀವಕುಮಾರ, ಮುಖ್ಯ ಯೋಜನಾಧಿಕಾರಿ ಜಿಲ್ಲಾ ಪಂಚಾಯತ ಎಸ್ ಎಸ್ ಮಠಪತಿ,

# ಬೀದರ್ ನಗರ ಸಭೆ 344 ಹೊಸ ಹುದ್ದೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 01 : ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಿದ ಬೆನ್ನಲ್ಲೇ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದ್ದು, ಕಾರ್ಪೊರೇಶನ್ ಅಸ್ತಿತ್ವಕ್ಕೆ ಬೇಕಾದ ಅಗತ್ಯ ಪ್ರಕ್ರಿಯೆ ಇನ್ನಷ್ಟು ಚುರುಕುಗೊಂಡಿದೆ.

ಬೀದರ್ ನಗರಸಭೆಗೆ ಈ ಹಿಂದೆ ಮಂಜೂರಾದ ಹುದ್ದೆಗಳ ಜೊತೆಗೆ ಷರತ್ತಿಗೊಳಪಟ್ಟು ವಿವಿಧ ವೃಂದಗಳ 344 ಹೊಸ ಹುದ್ದೆಗಳನ್ನು ಸೃಜಿಸಿ ಮಂಜೂರು ಮಾಡಲಾಗಿದೆ.

ಸದ್ಯ ಕಾಯಂ ಹಾಗೂ ಹೊರಗುತ್ತಿಗೆಯಡಿ 470 ಜನ ಕೆಲಸ ನಿರ್ವಹಿಸುತ್ತಿದ್ದಾರೆ.

ಆಡಳಿತಕ್ಕಾಗಿ ಒಂದು ಹಾಗೂ ಇತರೆ ಉದ್ದೇಶಕ್ಕಾಗಿ ಎರಡು ಸೇರಿದಂತೆ ಒಟ್ಟು ಮೂರು ಉಪ ಆಯುಕ್ತರು, ಮುಖ್ಯ ಲೆಕ್ಕಾಧಿಕಾರಿ, ನಗರ ಯೋಜನಾ ಅಧಿಕಾರಿ ಸೇರಿದಂತೆ ಒಟ್ಟು 344 ಹುದ್ದೆಗಳು ಹೊಸದಾಗಿ ಸೇರ್ಪಡೆಯಾಗಲಿವೆ. ಎಲ್ಲ ಹುದ್ದೆಗಳ ನೇಮಕಾತಿಗೆ ಷರತ್ತು ವಿಧಿಸಲಾಗಿದೆ.

ಪಾಲಿಕೆಗೆ ಅಗತ್ಯವಿರುವ ಹುದ್ದೆಗಳಿಗೆ ನಿಯೋಜನೆ ಮೂಲಕ ಪಡೆಯತಕ್ಕದ್ದು. ಮುಂದಿನ ಮೂರು ವರ್ಷಗಳ ವರೆಗೆ ಯಾವುದೇ ಹುದ್ದೆಗೆ ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ. ಪಾಲಿಕೆಯ ಸ್ವಂತ ಸಂಪನ್ಮೂಲದಿಂದ ವೆಚ್ಚವನ್ನು ಭರಿಸುವ ಮೂಲಕ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಮಾನವ ಸಂಪನ್ಮೂಲವನ್ನು ನೇಮಿಸಿಕೊಳ್ಳಬಹುದು. ಪಾಲಿಕೆಯ ಆರ್ಥಿಕ ಸಾಮರ್ಥ್ಯದ ಆಧಾರದ ಮೇಲೆ ಪೌರಾಡಳಿತ ನಿರ್ದೇಶನಾಲಯವು ಪಾಲಿಕೆಗೆ ವೆಚ್ಚವನ್ನು ಭರಿಸಲು ಅನುಮತಿ ನೀಡಬಹುದು ಎಂದು ಷರತ್ತಿನಲ್ಲಿ ಸರ್ಕಾರ ಸ್ಪಷ್ಟವಾಗಿ ತಿಳಿಸಿದೆ. ಬೀದರ್ ತಾಲ್ಲೂಕಿನ ಆರು ಗ್ರಾಮ ಪಂಚಾಯಿತಿಯ 16 ಗ್ರಾಮಗಳಿಗೆ ಸಂಬಂಧಿಸಿದ ಕಡತಗಳನ್ನು ಈಗಾಗಲೇ ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದ್ದು, ಈ ಗ್ರಾಮಗಳು ಅಧಿಕೃತವಾಗಿ ಸೇರ್ಪಡೆಯಾಗಿವೆ.

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ: ಸಚಿವ ಈಶ್ವರ ಬಿ.ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಆ.01 : ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ತಿಳಿಸಿದರು.

ಅವರು ಶುಕ್ರವಾರ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶ್ರೀ ವಿಜಯ ಮಹಾಂತ ಎಜುಕೇಶನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆಯನ್ನು ರಾಜ್ಯ ಸರ್ಕಾರ ವ್ಯಸನ ಮುಕ್ತ ದಿನಾಚರಣೆ ಎಂದು ಆಚಾರಿಸಲಾಗುತ್ತಿದೆ. ಮಹಾಂತ ಶಿವಯೋಗಿಗಳು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಆಗಸ್ಟ್ 1, 1930ರಲ್ಲಿ ಜನಿಸಿದರು. 1970ರಲ್ಲಿ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ದೃಡ ಸಂಕಲ್ಪ ತೊಟ್ಟು 1974ರಲ್ಲಿ 'ಮಾಹಾಂತ ಜೋಳಿಗೆ, ದುಷ್ಚಟಗಳ ಭಿಕ್ಷೆ' ಎಂಬ ವಾಕ್ಯದೊಂದಿಗೆ ಆಂದೋಲನ ಆರಂಭಿಸಿದರು. ಅವರ ಆಂದೋಲನ ಪರಿಣಾಮವಾಗಿ ಅನೇಕರು ವ್ಯಸನಗಳಿಂದ ಆಚೆ ಬಂದು ಉತ್ತಮ ಜೀವನ ಕಟ್ಟಿ–ಕೊಂಡರು ಎಂದರು.


ಇಂದಿನ ಮಕ್ಕಳು ಚಿಕ್ಕವಯಸ್ಸಿನಲ್ಲೇ ದುಶ್ಚಟಗಳಿಗೆ ಒಳಪಡುತ್ತಿದ್ದಾರೆ ಆದ್ದರಿಂದ ಇಂತಹ ದುಶ್ಚಟಗಳಿಗೆ ಬಲಿಯಾಗದಂತೆ ಅವರಲ್ಲಿ ಅರಿವು ಮೂಡಿಸುವುದು ಬಹಳ ಮುಖ್ಯವಾಗಿದೆ. ಯುವಕರು ಧೂಮಪಾನ, ಮದ್ಯಪಾನಗಳನ್ನು ಬಿಟ್ಟು ಆರೋಗ್ಯವಂತ ಜೀವನ ಕಟ್ಟಿಕೊಳ್ಳಬೇಕು ಮತ್ತು ಮೋಬೈ???ನಿಂದ, ಸಾಮಾಜಿಕ ಮಾಧ್ಯಮಗಳಿಂದ ದೂರವಿದ್ದು ಶಿಕ್ಷಣ, ಕ್ರೀಡೆ, ಯೋಗಾಸನ ಅಂತಹ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಂಡು ದೇಶದ ಹಾಗೂ ಸಮಾಜದ ಒಳಿತಿಗಾಗಿ ನಮ್ಮದೆ ಆದ ಕೊಡುಗೆ ನೀಡಬೇಕು. ಜಿಲ್ಲೆಯಲ್ಲಿ ಗಿಡ–ಮರಗಳನ್ನು ಬೆಳಿಸಿ, ಹಸಿರು ಹೊದುಕೆ ಹೆಚ್ಚಿ, ಪರಿಸರ ಸಂರಕ್ಷಣೆ ಮಾಡಬೇಕು ಮತ್ತು ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ, ಪ್ಲಾಸ್ಟಿಕ್ ಮುಕ್ತ ಜಿಲ್ಲೆಯಾಗಲು ಎಲ್ಲರೂ ಕೈಜೋಡಿಸಬೇಕು ಎಂದರು.

ಮನೋ ವೈದ್ಯ ತಜ್ಞರಾದ ಡಾ. ರಾಘವೇಂದ್ರ ವಾಗೋಲ್ ಅವರು ವಿಶೇಷ ಉಪನ್ಯಾಸ ನೀಡಿ ಮಾದಕ ವಸ್ತುಗಳ ಬಳಕೆಯಿಂದ ನಮ್ಮ ಮೆದುಳು ಹಾಗೂ ನರಮಂಡಲದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದರು. ಮಾದಕ ವಸ್ತುಗಳು ಅಥವಾ ಮಾದಕ ದ್ರವ್ಯಗಳಾದ ತಂಬಾಕು ಉತ್ಪನ್ನಗಳು, ಆಲ್ಕೊಹಾ???ಗಳು ಗಾಂಜಾ, ಹೆರಾಯಿನ್, ಕೊಕೇನ್, ಎಂಡಿಎಂಎ ಮುಂತಾದವು ಆಗಿವೆ ಎಂದರು. ಕಾಲೇಜು ದಿನಗಳಲ್ಲಿ ಕುತೂಹಲಕ್ಕೆ ಸ್ನೇಹಿತರ ಪ್ರಚೋದನೆಯಿಂದ ಮಾದಕ ವಸ್ತುಗಳ ಬಳಕೆ ಪ್ರಾರಂಭವಾಗುತ್ತದೆ. ನಂತರ ಇದು ನಿಯಮಿತ ಬಳಕೆ ಪ್ರಾರಂಭವಾಗುತ್ತದೆ. ನಂತರ ಇದರ ದುರುಪಯೋಗ ಪ್ರಾರಂಭವಾಗಿ ನಮ್ಮ ದೇಹದ ಮೇಲೆ ದುಷ್ಪರಿಣಾಮ ಬೀರಲು ಪ್ರಾರಂಭಿಸುತ್ತದೆ. ನಂತರ ಇದಕ್ಕೆ ದಾಸರಾಗಿ ವ್ಯಸನಕ್ಕೆ ಒಳಗಾಗುತ್ತಾರೆ. ಈ ಹಂತದಲ್ಲಿ ಇದರಿಂದ ಹೊರಕ್ಕೆ ಬರುವುದು ಹೆಚ್ಚು ಕಷ್ಟವಾಗುತ್ತದೆ ಮತ್ತು ಬಳಕೆಯಿಂದಾಗಿ ಕ್ಯಾನ್ಸರ್ ಮತ್ತು ಇತರೆ ರೋಗಗಳು ಬರುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ, ಅದ–ರಿಂದ ಇಂತಹ ದುಶ್ಚಟಗಳಿಂದ ದೂರವಿರಬೇಕು ಎಂದರು.

ವ್ಯವಸನ ಮುಕ್ತ ದಿನಾಚರಣೆ ಅಂಗವಾಗಿ ವಿವಿಧ ಶಾಲಾ–ಕಾಲೇಜುಗಳ ಮಕ್ಕಳಿಗೆ ಏರ್ಪಡಿಸಿದ ಪ್ರಬಂಧ ಸ್ಪರ್ಧೆಗಳಲ್ಲಿಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುನಾಥ ಸುಳ್ಳೊಳ್ಳಿ, ವಿಜಯ ಮಹಾಂತ ಎಜುಕೇಶನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ರಾಚಪ್ಪ ಮಾಶೆಟ್ಟಿ, ವಾಣಿಜ್ಯ ತೆರಿಗೆ ಅಧಿಕಾರಿಗಳಾದ ಮಹೇಶ ಮಾಶೆಟ್ಟಿ, ಪ್ರಶಾಂತ ಮಾಶೆಟ್ಟಿ, ಪದವಿ ಕಾಲೇಜಿನ ಪ್ರಾಂಶುಪಾಲರಾದ ಸ್ವಪ್ನಾ ಮಾಶೆಟ್ಟಿ, ನಿವೃತ್ತ ಪ್ರಾಂಶುಪಾಲರು ಹಾಗೂ ಕಸಾಪ ಕೋಶಾಧ್ಯಕ್ಷರಾದ ಶಿವಶಂಕರ ಟೋಕರೆ, ಮೊರಾರ್ಜಿ ಕಾಲೇಜಿನ ಪ್ರಾಂಶುಪಾಲರಾದ ಚನ್ನಬಸವ ಹೆಡೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಿಜಯಕೃಷ್ಣ ಸೋಲಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ರಸಗೊಬ್ಬರ ಕೊರತೆ ನಿವಾರಿಸಿ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.1: ಬೀದರ್ ಜಿಲ್ಲೆ ಸೇರಿ ಕರ್ನಾಟಕ ರಾಜ್ಯದಲ್ಲಿ ಎದುರಾಗಿರುವ ರಸಗೊಬ್ಬರ ಕೊರತೆಯನ್ನು ನಿವಾರಿಸುವಂತೆ ಕಾಂಗ್ರೆಸ್ ಸಂಸದರ ನಿಯೋಗ ಒತ್ತಾಯಿಸಿದೆ. ನವದೆಹಲಿಯಲ್ಲಿ ಸಂಸದ ಸಾಗರ ಖಂಡ್ರೆ, ಡಾ.ಪ್ರಭಾ ಮಲ್ಲಿಕಾರ್ಜುನ, ಜಿ ಕುಮಾರ ನಾಯಕ ಮತ್ತು ಇ.ತುಕಾರಾಮ ಅವರನ್ನು ಒಳಗೊಂಡ ಕಾಂಗ್ರೆಸ್ ಸಂಸದರ ನಿಯೋಗ ಕೇಂದ್ರದ ರಸಗೊಬ್ಬರ ಸಚಿವ ಜೆ.ಪಿ.ನಡ್ಡಾ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.ರಾಜ್ಯದಲ್ಲಿ ಈ ವರ್ಷ ಮುಂಗಾರು ಮಳೆ ಸಕಾಲಕ್ಕೆ ಆಗಿರುವುದರಿಂದ ಬಿತ್ತನೆ ಪ್ರಮಾಣ ಪೂರ್ಣಗೊಂಡು ರೈತರು ಉತ್ತಮ ಬೆಳೆ ನಿರೀಕ್ಷೆಯಲ್ಲಿದ್ದರು. ಆದರೆ, ಕೇಂದ್ರ ಸರಕಾರ ಸಕಾಲದಲ್ಲಿ ರಸಗೊಬ್ಬರ ಪೂರೈಸದ ಕಾರಣ ರಾಜ್ಯದ ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಈ ವರ್ಷ ಯೂರಿಯಾ ಪೂರೈಕೆ ಪ್ರಮಾಣ ಶೇ.50ರಷ್ಟು ಕಡಿಮೆ ಆಗಿದೆ. ಇದ–ರಿಂದ ರೈತರು ರಸಗೊಬ್ಬರಕ್ಕಾಗಿ ಪರದಾಡುತ್ತಿದ್ದಾರೆ. ರಸಗೊಬ್ಬರ ಅಭಾವ ಸೃಷ್ಟಿಸಿದರಿಂದ ರೈತರು ದುಬಾರಿಯಲ್ಲಿ ಬೆಲೆಯಲ್ಲಿ ರಸಗೊಬ್ಬರ ಖರೀದಿಸುವಂತಾಗಿದೆ. ಕೇಂದ್ರ ಸರಕಾರ ತಕ್ಷಣ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ಪರೈಕೆ ಮಾಡಿದರೆ ರೈತರ ಸಮಸ್ಯೆಗೆ ಪರಿಹಾರ ಸಿಗಲಿದೆ ಕಾಂಗ್ರೆಸ್ ಸಂಸದರ ನಿಯೋಗ ಕೇಂದ್ರಕ್ಕೆ ಬರೆದ ಮನವಿ ಪತ್ರದಲ್ಲಿ ಒತ್ತಾಯಿಸಿದೆ.

# ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಪ್ರತಿಭಟನೆ




ಮಲ್ಲಮ್ಮನುಡಿವಾರ್ತೆ ಬಾಗಲಕೋಟೆ,ಆ.1– ಒಳಮೀಸಲಾತಿ ಜಾರಿ ವಿಷಯದಲ್ಲಿ ರಾಜ್ಯ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿ ಮಾದಿಗ ಜಾತಿ, ಉಪಜಾತಿ ಸಂಘಟನೆಗಳ ಜಿಲ್ಲಾ ಒಕ್ಕೂಟ ನವನಗರದ ಜಿಲ್ಲಾಡಳಿತ ಭವನದ ಎದುರು ಶುಕ್ರವಾರ ಪ್ರತಿಭಟನೆ ನಡೆಸಿತು. ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ತಕ್ಷಣವೇ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿ ಮಾಡುವಂತೆ ಆಗ್ರಹಿಸಿದ ಪ್ರತಿಭಟನಾಕಾರರು ಸರ್ಕಾರಕ್ಕೆ ಒತ್ತಾಯಿಸುವ ಮನವಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು. ಒಳಮೀಸಲಾತಿ ನೀಡುವುದಕ್ಕೆ ಆಯಾ ರಾಜ್ಯಗಳಿಗೆ ಸಂಪೂರ್ಣ ಅಧಿಕಾರವಿದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿ ಒಂದು ವರ್ಷ ಕಳೆದರೂ ಈತನಕ ಏನೂ ಆಗಿಲ್ಲ. ರಾಜ್ಯ ಸರ್ಕಾರ ಸುಪ್ರೀಂ ತೀರ್ಪು ಆಧರಿಸಿ, 101 ಎಸ್‌ಸಿ ಜಾತಿಗಳಿಗೆ ಈಗಾಗಲೇ ಒಳಮೀಸಲಾತಿ ಕಲ್ಪಿಸಲು ಶಿಫಾರಸ್ಸು ಮಾಡಿರುವ ಮಾಧು ಸ್ವಾಮಿ ಉಪಸಮಿತಿಯ ಶಿಫಾರಸನ್ನು ಪಾಲಿಸಿ ಜಾರಿಗೊಳಿಸಬೇಕಿತ್ತು. ಆದರೆ ಕಾಲಹರಣ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಮತ್ತೊಂದು ಆಯೋಗ ನೇಮಿಸಿದೆ ಎಂದು ದೂರಿದ ಸಂಘಟನೆಯ ಪ್ರಮುಖರು, ಬರುವ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿದರು. ಮಾಜಿ ಡಿಸಿಎಂ, ಸಂಸದ ಗೋವಿಂದ ಕಾರಜೋಳ ಡಾ.ಅಂಬೇಡ್ಕರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಹೋರಾಟಕ್ಕೆ ಚಾಲನೆ ನೀಡಿದರು. ನಂತರ ಸಭೆ ಉದ್ದೇಶಿಸಿ ಮಾತನಾಡಿ, ಒಳಮೀಸಲಾತಿ ಜಾರಿ ವಿಷಯದಲ್ಲಿ ರಾಜ್ಯ ಸರ್ಕಾರದ ವಿಳಂಬ ಧೋರಣೆ ಖಂಡನೀಯ ಎಂದರು. ಮಾದಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ಮುತ್ತಣ್ಣ ಬೆಣ್ಣೂರ, ಶಿವಾನಂದ ಟವಳಿ, ಯಲ್ಲಪ್ಪ ಬೆಂ–ಡಿಗೇರಿ, ಯಲ್ಲಪ್ಪ ನಾರಾಯಣಿ, ಹಣಮಂತ ಚಿಮ್ಮಲಗಿ, ಧರ್ಮಣ್ಣ ಸಂಕೆನ್ನವರ, ಸತ್ಯಪ್ಪ ದಳವಾಯಿ, ಸಿದ್ಧು ಮಾದರ, ಸಿದ್ಧು ದೊಡಮನಿ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.